24 ವರ್ಷಗಳಿಂದ ದೆಹಲಿಯಲ್ಲಿ ಪ್ರಕಟವಾಗುತ್ತಿರುವ ಪ್ರಪ್ರಥಮ ರಾಷ್ಟ್ರೀಯ ಕನ್ನಡ ದಿನಪತ್ರಿಕೆ

# ದೆಹಲಿ ವಾರ್ತೆ

www.dehalivaarthe.com

EDITION: NEW DELHI / CIRCULATION IN U.P. & HARYANA | EDITOR : K.R. RENU | RNI No. DELKAN/2003/10363 | ಪುಟ 8 | ಸಂಪುಟ 24 | ಸಂಚಿಕೆ 97 | ನವದೆಹಲಿ | ಬೆಲೆ ₹10 | ಅಕ್ಟೋಬರ್ 2 2026 ಶುಕ್ರವಾರ




ಮಹಾತ್ಮ ಗಾಂಧೀಜಿ
ಅವರ 157 ನೇ ಜನ್ಮದಿನಾಚರಣೆ

ಕರ್ನಾಟಕ ಸರ್ಕಾರ

ವಾರ್ತಾ ಮತ್ತು ಸಾರ್ವಜನಿಕ ಸಂಪರ್ಕ ಇಲಾಖೆ



ಲಾಲ್ ಬಹದ್ದೂರ್ ಶಾಸ್ತ್ರಿ
ಅವರ 122 ನೇ ಜನ್ಮ ದಿನಾಚರಣೆ



## ನನ್ನ ಜೀವನವೇ ನನ್ನ ಸಂದೇಶ

### ನಾಡಿನ ಸಮಸ್ತ ಜನತೆಗೆ ಗಾಂಧಿ ಜಯಂತಿಯ ಹಾರ್ದಿಕ ಶುಭಾಶಯಗಳು

"ಎಲ್ಲ ಒಳ್ಳೆಯ ಕ್ರಿಯೆಗಳು ಅಂತಿಮವಾಗಿ ಒಳ್ಳೆಯ ಫಲವನ್ನೇ ನೀಡುತ್ತವೆ ಎನ್ನುವುದು ನನ್ನ ಅಚಲ ನಂಬಿಕೆ"

— mkgandhi

ಸತ್ಯ, ಅಹಿಂಸೆ, ಸರಳತೆ, ಸೇವೆ ಮತ್ತು ದೇಶಭಕ್ತಿಯ ಮೌಲ್ಯಗಳನ್ನು ತಮ್ಮ ಬದುಕಿನ ಮೂಲಕ ಸಾರಿದ **ರಾಷ್ಟ್ರಪಿತ ಮಹಾತ್ಮ ಗಾಂಧೀಜಿ** ಹಾಗೂ ಮಾಜಿ ಪ್ರಧಾನಮಂತ್ರಿ **ಲಾಲ್ ಬಹದ್ದೂರ್ ಶಾಸ್ತ್ರಿ ಅವರ ಜನ್ಮದಿನಾಚರಣೆಯಂದು, ಈ ಮಹಾನ್ ಚೇತನಗಳಿಗೆ ಗೌರವಪೂರ್ವಕ ನಮನಗಳು.**

**ಗಾಂಧೀಜಿಯವರ ಚಿಂತನೆಗಳು ಚಿರಂತನ; ಅವರ ಆದರ್ಶಗಳು ಸದಾ ಪ್ರಸ್ತುತ**



"ನಮ್ಮ ವೈವಿಧ್ಯಮಯ ಸಂಸ್ಕೃತಿ ಮತ್ತು ಪರಂಪರೆಯನ್ನು ಗೌರವಿಸುವುದು ಮತ್ತು ಕಾಪಾಡುವುದು"
-ಪ್ರತಿಯೊಬ್ಬ ಭಾರತೀಯನ ಸಂವಿಧಾನಬದ್ಧ ಮೂಲಭೂತ ಕರ್ತವ್ಯ.

CMofKarnataka | https://dipr.karnataka.gov.in/ | Karnatakavarthe

ಕರ್ನಾಟಕ ವಾರ್ತೆ

## ನಿತ್ಯ ಪಂಚಾಂಗ 2.10.2026 ಶುಕ್ರವಾರ



**ಶ್ರೀಶಕ 1949 ಶ್ರೀ ಪರಾಭವ ನಾಮ ಸಂವತ್ಸರ, ದಕ್ಷಿಣಾಯಣ ಗ್ರೀಷ್ಮ ಋತು, ಚಾಂದ್ರಮಾನ ಶ್ರಾವಣ-ಭಾದ್ರಪದ ಮಾಸ**

**ಭಾದ್ರಪದ ಬಹುಳ, ಷಷ್ಠಿ, ರೋಹಿಣಿ ನಕ್ಷತ್ರ, ಮೃಗಶಿರ, ಗಾಂಧಿ ಜಯಂತಿ, ಚಂದನಷಷ್ಠಿ, ಮಹಾ ವ್ಯತೀಪಾತ, ಅಂತರರಾಷ್ಟ್ರೀಯ ಅಹಿಂಸಾ ದಿನ**

| ದಿನ | ರಾಹುಕಾಲ | ಯಮಗಂಡ | ಗುಳಿಕಕಾಲ |
|---|---|---|---|
| ಭಾನು | ಸ. 5.04– 6.33 | 12.00– 1.30 | 3.00– 4.00 |
| ಸೋಮ | ಬೆ. 7.20– 9.04 | 10.30–12.00 | 1.30– 3.00 |
| ಮಂಗಳ | ಮ. 3.25– 4.59 | 9.00–10.30 | 12.00– 1.30 |
| ಬುಧ | ಮ.12.16– 1.50 | 7.30– 9.00 | 10.30– 12.00 |
| ಗುರು | ಮ. 1.50– 3.29 | 6.00– 7.30 | 9.00– 10.30 |
| ಶುಕ್ರ | ಬೆ.10.42–12.16 | 3.00– 4.30 | 7.30– 9.00 |
| ಶನಿ | ಬೆ. 9.07–10.41 | 1.30– 3.00 | 6.00– 7.30 |

# ಪ್ರತಿಷ್ಠಿತ ಸಂಗೀತ ವಿದ್ವಾನ್ ಪ್ರಶಸ್ತಿಗೆ ಗಾಯಕಿ ಡಾ. ಮೈಸೂರು ನಾಗಮಣಿ ಶ್ರೀನಾಥ್ ಆಯ್ಕೆ: ದಸರಾದಲ್ಲಿ ಪ್ರದಾನ



**ಬೆಂಗಳೂರು, ಅ.1:** ಪ್ರತಿವರ್ಷ ಮೈಸೂರು ದಸರಾ ಉತ್ಸವದ ಸಂದರ್ಭದಲ್ಲಿ ಕನ್ನಡ ಮತ್ತು ಸಂಸ್ಕೃತಿ ಇಲಾಖೆ ವತಿಯಿಂದ ನೀಡಲಾಗುವ ರಾಜ್ಯ ಸರ್ಕಾರದ ಪ್ರತಿಷ್ಠಿತ ಸಂಗೀತ ವಿದ್ವಾನ್ ಪ್ರಶಸ್ತಿಗೆ ಈ ಬಾರಿ ಪ್ರಸಿದ್ಧ ಗಾಯಕಿ ಡಾ. ಮೈಸೂರು ನಾಗಮಣಿ ಶ್ರೀನಾಥ್ ಅವರನ್ನು ಆಯ್ಕೆ ಮಾಡಲಾಗಿದೆ ಎಂದು ಹಿಂದುಳಿದ ವರ್ಗಗಳ ಕಲ್ಯಾಣ, ಕನ್ನಡ ಮತ್ತು ಸಂಸ್ಕೃತಿ ಸಚಿವ ಶಿವರಾಜ ತಂಗಡಗಿ ಹೇಳಿದ್ದಾರೆ. ಪಂ. ಫಯಾಜ್ ಖಾನ್ ಅವರ ಅಧ್ಯಕ್ಷತೆಯಲ್ಲಿ ರಚನೆಯಾಗಿದ್ದ ಆಯ್ಕೆ ಸಮಿತಿ ಇವರನ್ನು ಆಯ್ಕೆ ಮಾಡಿದೆ. ನಾಗಮಣಿ ಶ್ರೀನಾಥ್ ಅವರು ರಾಷ್ಟ್ರ, ಅಂತರರಾಷ್ಟ್ರೀಯ ಮಟ್ಟದಲ್ಲಿ ಕರ್ನಾಟಕ ಶಾಸ್ತ್ರೀಯ ಸಂಗೀತ ಗಾಯನದಲ್ಲಿ ಹೆಸರು ಮಾಡಿದ್ದಾರೆ. ಮೈಸೂರು ವಿಶ್ವವಿದ್ಯಾನಿಲಯದ ಸಂಗೀತ ವಿಭಾಗದ ಮುಖ್ಯಸ್ಥರಾಗಿ ಹಾಗೂ ಪ್ರೊಫೆಸರ್ ಆಗಿ ಸೇವೆ ಸಲ್ಲಿಸಿದ್ದಾರೆ. ಸ್ವತಃ ನೂರಕ್ಕೂ ಹೆಚ್ಚು ಶಾಸ್ತ್ರೀಯ ಕೃತಿಗಳನ್ನು ಮತ್ತು ವರ್ಣಗಳನ್ನು ರಚಿಸಿರುವ ಇವರು ಸುನಾದ ಕಲ್ಚರಲ್ ಸೆಂಟರ್ ಸಂಗೀತ ಶಾಲೆಯ ಮೂಲಕ ನೂರಾರು ವಿದ್ಯಾರ್ಥಿಗಳಿಗೆ ತರಬೇತಿ ನೀಡಿದ್ದಾರೆ. ಕರ್ನಾಟಕ ರಾಜ್ಯೋತ್ಸವ ಪ್ರಶಸ್ತಿ, ಕೇಂದ್ರ ಸಂಗೀತ ನಾಟಕ ಅಕಾಡೆಮಿ ಪ್ರಶಸ್ತಿ, ಕರ್ನಾಟಕ ಕಲಾಶ್ರೀ ಪ್ರಶಸ್ತಿ ಮುಂತಾದ ಪ್ರತಿಷ್ಠಿತ ಪುರಸ್ಕಾರಗಳಿಗೆ ಇವರು ಭಾಜನರಾಗಿದ್ದಾರೆ ಎಂದು ಅವರು ತಿಳಿಸಿದ್ದಾರೆ.

# ಎಸ್‌ಐಆರ್: ದಿನಕ್ಕೊಂದು ಗೊಂದಲ, ಫಾರ್ಮ್ 7 ದುರ್ಬಳಕೆಗೆ ಡಿಸಿಎಂ ಆತಂಕ



ಬೆಂಗಳೂರು, ಅ.1: ರಾಜ್ಯದಲ್ಲಿ ನಡೆಯುತ್ತಿರುವ ಎಸ್‌ಐಆರ್ ಪ್ರಕ್ರಿಯೆಯಲ್ಲಿ ದಿನಕ್ಕೊಂದು ಗೊಂದಲ ಸೃಷ್ಟಿಯಾಗುತ್ತಿದ್ದು, ಮತದಾರರ ಪಟ್ಟಿಗೆ ಸಂಬಂಧಿಸಿದ ಸಮಸ್ಯೆಗಳ ಬಗ್ಗೆ ಕಾಂಗ್ರೆಸ್ ಪಕ್ಷ ಈಗಾಗಲೇ ಆಕ್ಷೇಪ ದಾಖಲಿಸಿದೆ ಎಂದು ಉಪಮುಖ್ಯಮಂತ್ರಿ ಡಾ. ಜಿ. ಪರಮೇಶ್ವರ ಹೇಳಿದರು.

ಸದಾಶಿವನಗರದ ನಿವಾಸದ ಬಳಿ ಗುರುವಾರ ಮಾಧ್ಯಮದವರಿಗೆ ಪ್ರತಿಕ್ರಿಯಿಸಿದ ಅವರು, ಎಎಸ್‌ಡಿಡಿಒ ವಿಚಾರದಲ್ಲೂ ಗೊಂದಲ ಉಂಟಾಯಿತು, ಬದುಕಿರುವವರನ್ನು ಕೂಡ ಮೃತರ ಪಟ್ಟಿಗೆ ಸೇರಿಸಲಾಗಿತ್ತು. ಮತದಾರರಿಗೆ ನೋಟಿಸ್ ನೀಡುವುದರಲ್ಲೂ ಗೊಂದಲಗಳಾಗಿವೆ. ಈಗ ಮುಂದುವರಿದು ಯಾರು ಬೇಕಾದರೂ ಚುನಾವಣಾ ಆಯೋಗಕ್ಕೆ ಫಾರ್ಮ್ 7 ಅರ್ಜಿಯನ್ನು ಸಲ್ಲಿಸಿ ಬೇರೊಬ್ಬ ಮತದಾರರನ್ನು ಮತಪಟ್ಟಿಯಿಂದ ಅಳಿಸಿಹಾಕಬಹುದು ಎಂಬಂತಾಗಿದೆ ಎಂದು ಆತಂಕ ವ್ಯಕ್ತಪಡಿಸಿದರು.

ಹೀಗಾಗಿ ದೇಶಾದ್ಯಂತ ನಡೆಯುತ್ತಿರುವ ಈ ಪ್ರಕ್ರಿಯೆಯನ್ನು ವಿರೋಧಿಸಿ ನಮ್ಮ ಪಕ್ಷದ ವತಿಯಿಂದ ಈಗಾಗಲೇ ದೂರನ್ನು ಸಲ್ಲಿಕೆ ಮಾಡಲಾಗಿದೆ. ಮುಂದಿನ ದಿನಗಳಲ್ಲಿ ಯಾವ ರೀತಿಯ ಬೆಳವಣಿಗೆಗಳಾಗುತ್ತವೆ ಎಂಬುದರ ಆಧಾರದ ಮೇಲೆ ನಾವು ನಿರ್ಧಾರಗಳನ್ನು ಕೈಗೊಳ್ಳುತ್ತೇವೆ ಎಂದು ಡಿಸಿಎಂ ಹೇಳಿದರು.

### ಬರ: ಪ್ರಧಾನಿ ಭೇಟಿಗೆ ದಿನ ನಿಗದಿಯಾಗಿಲ್ಲ

ರಾಜ್ಯದಲ್ಲಿನ ಬರ ಪರಿಸ್ಥಿತಿಯ ಬಗ್ಗೆ ಕೇಂದ್ರಕ್ಕೆ ಮನವರಿಕೆ ಮಾಡಿಕೊಡಲು ರಾಜ್ಯದ ಸರ್ವಪಕ್ಷ ನಿಯೋಗ ಪ್ರಧಾನಿಯವರನ್ನು ಭೇಟಿಯಾಗಲು ಇನ್ನೂ ದಿನಾಂಕ ನಿಗದಿಯಾಗಿಲ್ಲ. ಈ ಕುರಿತಾಗಿ ಮುಖ್ಯಮಂತ್ರಿಯವರು ಪ್ರಧಾನಿ ಕಚೇರಿಯಿಂದ ಪ್ರತಿಕ್ರಿಯೆಯ ನಿರೀಕ್ಷೆಯಲ್ಲಿದ್ದಾರೆ. ದಿನಾಂಕ ನಿಗದಿಯಾದ ಕೂಡಲೇ ಸರ್ವಪಕ್ಷ ನಿಯೋಗವನ್ನು ಕೊಂಡೊಯ್ದು ರಾಜ್ಯದ ಸ್ಥಿತಿಗತಿಯನ್ನು ಪ್ರಧಾನಿ ಅವರಿಗೆ ಮನನ ಮಾಡಿಕೊಡಲಿದ್ದೇವೆ ಎಂದು ಜಿ. ಪರಮೇಶ್ವರ್ ಹೇಳಿದರು.

# ಆಪ್ತನಿಗೆ ಸಚಿವ ಸ್ಥಾನ: ವರಿಷ್ಠರ ಮೇಲೆ ಸಿದ್ದರಾಮಯ್ಯ ಒತ್ತಾಯ

**ಎಐಸಿಸಿ ಪ್ರಧಾನ ಕಾರ್ಯದರ್ಶಿ ಕೆ.ಸಿ. ವೇಣುಗೋಪಾಲ್ ಜತೆ ಚರ್ಚೆ**



**ನವದೆಹಲಿ, ಅ.1:** ಕರ್ನಾಟಕದಲ್ಲಿ ಸಚಿವ ಸಂಪುಟ ವಿಸ್ತರಣೆಯ ಕಸರತ್ತು ಮತ್ತೊಮ್ಮೆ ಮುಂಚೂಣಿಗೆ ಬಂದಿದೆ. ಮಾಜಿ ಮುಖ್ಯಮಂತ್ರಿ ಹಾಗೂ ಕಾಂಗ್ರೆಸ್ ಕಾರ್ಯಕಾರಿ ಸಮಿತಿ ಸದಸ್ಯ ಸಿದ್ದರಾಮಯ್ಯ ಅವರು ಎಐಸಿಸಿ ಪ್ರಧಾನ ಕಾರ್ಯದರ್ಶಿ (ಸಂಘಟನೆ) ಕೆ.ಸಿ. ವೇಣುಗೋಪಾಲ್ ಅವರನ್ನು ದೆಹಲಿಯಲ್ಲಿ ಬುಧವಾರ ಭೇಟಿಯಾಗಿ ಮಹತ್ವದ ಚರ್ಚೆ ನಡೆಸಿದ್ದಾರೆ. ವೇಣುಗೋಪಾಲ್ ಅವರ ನಿವಾಸದಲ್ಲಿ ನಡೆದ ಉಪಾಹಾರ ಸಭೆಯಲ್ಲಿ, ರಾಜ್ಯ ಸಚಿವ ಸಂಪುಟದಲ್ಲಿ ಖಾಲಿ ಇರುವ ಎರಡು ಸ್ಥಾನಗಳನ್ನು ತಕ್ಷಣವೇ ಭರ್ತಿ ಮಾಡುವಂತೆ ಸಿದ್ದರಾಮಯ್ಯ ಒತ್ತಡ ಹೇರಿದ್ದಾರೆಂದು ಮೂಲಗಳು ತಿಳಿಸಿವೆ. ಜತೆಗೆ ತಮ್ಮ ಆಪ್ತ ಹಾಗೂ ಬ್ಯಾಡಗಿ ಶಾಸಕ ಬಸವರಾಜ ಶಿವಣ್ಣನವರ್ ಅವರನ್ನು ಸಚಿವ ಸಂಪುಟಕ್ಕೆ ಸೇರ್ಪಡೆಗೊಳಿಸುವಂತೆಯೂ ಒತ್ತಾಯಿಸಿದ್ದಾರೆ ಎನ್ನಲಾಗಿದೆ.

ಕರ್ನಾಟಕ ಕಾಂಗ್ರೆಸ್ ಉಸ್ತುವಾರಿ ಎಐಸಿಸಿ ಪ್ರಧಾನ ಕಾರ್ಯದರ್ಶಿ ರಣದೀಪ್ ಸಿಂಗ್ ಸುರ್ಜೇವಾಲಾ ಅವರು ಶೀಘ್ರದಲ್ಲೇ ಬೆಂಗಳೂರಿಗೆ ಭೇಟಿ ನೀಡುವ ನಿರೀಕ್ಷೆಯಿದ್ದು, ನಿಗಮ-ಮಂಡಳಿಗಳ ನೇಮಕಾತಿ ಪಟ್ಟಿಯನ್ನು ಅಂತಿಮಗೊಳಿಸಲಾಗಿದೆ ಎನ್ನಲಾಗಿದೆ.ಸಚಿವ ಸಂಪುಟದ ಎರಡು ಖಾಲಿ ಸ್ಥಾನಗಳನ್ನು ಭರ್ತಿ ಮಾಡುವುದು ಹಾಗೂ ನಿಗಮ-ಮಂಡಳಿಗಳಿಗೆ ನೇಮಕಾತಿ ಮಾಡುವುದು ಹೈಕಮಾಂಡ್‌ನ ತಕ್ಷಣದ ಆದ್ಯತೆಗಳಾಗಿವೆ ಎಂದು ಮೂಲಗಳು ತಿಳಿಸಿವೆ. ಆದರೆ, ಐವರು ವಿಧಾನ ಪರಿಷತ್ ಸದಸ್ಯರ ನಾಮನಿರ್ದೇಶನವನ್ನು ನವೆಂಬರ್‌ವರೆಗೆ ಮುಂದೂಡುವ ಸಾಧ್ಯತೆ ಇದೆ ಎಂದು ತಿಳಿದುಬಂದಿದೆ.

# ಗಾಂಧಿ ಜಯಂತಿ ಹಿನ್ನೆಲೆ: ಯಮುನಾ ತೀರದ ಕಲಿಂದಿ ಕುಂಜಘಾಟ್ ಸ್ವಚ್ಛತಾ ಕಾರ್ಯಕ್ರಮ



ನವದೆಹಲಿ, ಅ.1: ದೆಹಲಿಯ ಯಮುನಾ ನದಿ ತೀರದ ಕಲಿಂದಿ ಕುಂಜ್ ಘಾಟ್‌ನಲ್ಲಿ ಗುರುವಾರ ರಾಷ್ಟ್ರಪಿತ ಮಹಾತ್ಮ ಗಾಂಧೀಜಿ ಅವರ ಜಯಂತಿಯ ನಿಮಿತ್ತವಾಗಿ 'ಸ್ವಚ್ಛತೆಯೇ ಸೇವೆ ಅಭಿಯಾನ – 2026'ರ ಭಾಗವಾಗಿ ಹಮ್ಮಿಕೊಳ್ಳಲಾಗಿದ್ದ ಸ್ವಚ್ಛತಾ ಕಾರ್ಯಕ್ರಮದಲ್ಲಿ ಕೇಂದ್ರ ಸಚಿವ ಸಿ.ಆರ್ ಪಾಟೀಲ್ ಅವರೊಂದಿಗೆ ರಾಜ್ಯ ರೈಲ್ವೆ ಖಾತೆ ಸಚಿವ ವಿ.ಸೋಮಣ್ಣ, ಘಾಟ್‌ನ ಸ್ವಚ್ಛತಾ ಕಾರ್ಯಕ್ಕೆ ಚಾಲನೆ ನೀಡಿದರು. ಪ್ರಧಾನಿ ನರೇಂದ್ರ ಮೋದಿ 2017ರ ಸೆಪ್ಟೆಂಬರ್ 17ರಂದು ಚಾಲನೆ ನೀಡಿದ್ದ 'ಸ್ವಚ್ಛತಾ ಹಿ ಸೇವಾ' ಅಭಿಯಾನವು ಜನಭಾಗಿತ್ವದ ಪ್ರತೀಕವಾಗಿದ್ದು, ರಾಷ್ಟ್ರವ್ಯಾಪಿ ಜನಾಂದೋಲನವಾಗಿ ರೂಪುಗೊಂಡಿದೆ.

ನಾಗರಿಕರು ಶ್ರಮದಾನ ಮತ್ತು ಸ್ವಚ್ಛತಾ ಅಭಿಯಾನಗಳಲ್ಲಿ ಸಕ್ರಿಯವಾಗಿ ಭಾಗವಹಿಸುತ್ತಿರುವುದು ಸಂತಸದ ಸಂಗತಿ.

ಈ ಅಭಿಯಾನದ ಭಾಗವಾಗಿ ಸ್ವಚ್ಛತಾ ಜ್ಞಾನಯಾತ್ರೆಗಳ ಮೂಲಕ ವಿದ್ಯಾರ್ಥಿಗಳನ್ನು ಕಸ ವಿಂಗಡಣಾ ಶೆಡ್, ಗೋವರ್ಧನ್ ಘಟಕಗಳು ಹಾಗೂ ಪ್ಲಾಸ್ಟಿಕ್ ತ್ಯಾಜ್ಯ ಘಟಕಗಳಿಗೆ ಕರೆದೊಯ್ದು ಸ್ವಚ್ಛತೆಯ ಮಹತ್ವವನ್ನು ತಿಳಿಸಿಕೊಡಲಾಗುತ್ತಿದೆ. ದೇಶದಾದ್ಯಂತ ಸ್ವಚ್ಛತೆ ಮತ್ತು ಜಲ ಸಂರಕ್ಷಣೆಗೆಗಾಗಿ ಸಂವಾದಗಳನ್ನು ಆಯೋಜಿಸಲಾಗುತ್ತಿದೆ. ಪ್ರಧಾನಿ ನರೇಂದ್ರ ಮೋದಿಜೀಯವರ ನಾಯಕತ್ವದಲ್ಲಿ 12 ವರ್ಷಗಳಲ್ಲಿ ಈಗಾಗಲೇ ದೇಶದಾದ್ಯಂತ 12 ಕೋಟಿಗೂ ಅಧಿಕ ಶೌಚಾಲಯಗಳನ್ನು ನಿರ್ಮಿಸಲಾಗಿದೆ. ಅಲ್ಲದೇ, 2.25 ಲಕ್ಷಕ್ಕೂ ಹೆಚ್ಚಿನ ಹಳ್ಳಿಗಳು ಈಗ ODF Plus (ಮಾದರಿ) ಆಗಿವೆ. ಇದು ಸ್ವಚ್ಛಭಾರತ, ವಿಕಸಿತ ಭಾರತದ ನಿರ್ಮಾಣದೆಡೆಗಿನ ಬಹುದೊಡ್ಡ ಯಶಸ್ಸಾಗಿದೆ.

# ಸೇವಾ ಸಂಕಲ್ಪ ಅಭಿಯಾನ-ಬೂತ್ ವಿಜಯ ಸಂಕಲ್ಪ ಯಾತ್ರೆಗೆ ವಿಜಯೇಂದ್ರ ಚಾಲನೆ

ಕೋಲಾರ, ಅ.1: ಜಿಲ್ಲೆಯ ಮುಳಬಾಗಿಲು ತಾಲೂಕಿನ ಪ್ರಸಿದ್ಧ ಕುರುಡುಮಲೆ ಗಣಪತಿ ದೇವಾಲಯದಲ್ಲಿ ಗುರುವಾರ ಪೂಜೆ ಸಲ್ಲಿಸುವ ಮೂಲಕ ರಾಜ್ಯ ಪ್ರವಾಸಕ್ಕೆ ಬಿಜೆಪಿ ರಾಜ್ಯಾಧ್ಯಕ್ಷ ಬಿ.ವೈ. ವಿಜಯೇಂದ್ರ ಚಾಲನೆ ನೀಡಿದ್ದಾರೆ.

ಪ್ರಧಾನಿ ನರೇಂದ್ರ ಮೋದಿ ಅವರ ಸಾರ್ವಜನಿಕ ಜೀವನದ 25 ವರ್ಷಗಳ ಪೂರೈಕೆ ಹಿನ್ನೆಲೆಯಲ್ಲಿ ಬಿಜೆಪಿ ಹಮ್ಮಿಕೊಂಡಿರುವ 'ಸೇವಾ ಸಂಕಲ್ಪ ಅಭಿಯಾನ' ಹಾಗೂ 'ಬೂತ್ ವಿಜಯ ಸಂಕಲ್ಪ ಯಾತ್ರೆ'ಯ ಭಾಗವಾಗಿ ಈ ಪ್ರವಾಸ ಆರಂಭವಾಗಿದೆ. ಮೊದಲ ಹಂತದಲ್ಲಿ ಅವರು ವಿವಿಧ ವಿಧಾನಸಭಾ ಕ್ಷೇತ್ರಗಳಿಗೆ ಭೇಟಿ ನೀಡಿ ಪಕ್ಷದ ಸಂಘಟನಾತ್ಮಕ ಸಭೆಗಳಲ್ಲಿ ಭಾಗವಹಿಸಲಿದ್ದಾರೆ. ಕುರುಡುಮಲೆ ವಿನಾಯಕನಿಗೆ ಪೂಜೆ ಸಲ್ಲಿಸಿದ ನಂತರ ವಿಜಯೇಂದ್ರ ಅವರು



ಬಂಗಾರಪೇಟೆ ಹಾಗೂ ಕೆ.ಜಿ.ಎಫ್ ಕ್ಷೇತ್ರಗಳಲ್ಲಿ ಪ್ರವಾಸ ನಡೆಸಿ ಕಾರ್ಯಕರ್ತರೊಂದಿಗೆ ಸಭೆ ನಡೆಸಿದರು.

ದೇವಾಲಯದ ಆವರಣದಲ್ಲಿ ಗಿಡ ನೆಡುವ ವೇಳೆ ಕೆಲ ಕಾರ್ಯಕರ್ತರು 'ಮುಂದಿನ ಮುಖ್ಯಮಂತ್ರಿ ವಿಜಯೇಂದ್ರ' ಎಂದು ಘೋಷಣೆ ಕೂಗಿದಾಗ, ಅವರು ನಯವಾಗಿಯೇ 'ಇದೆಲ್ಲ ಬೇಡ' ಎಂದು ಹೇಳಿ, ಪ್ರಧಾನಿ ಮೋದಿಯವರಿಗೆ ಜೈಕಾರ ಕೂಗುವಂತೆ ಮನವಿ ಮಾಡಿದರು. ಮುಂಬರುವ ಜಿಲ್ಲಾ ಮತ್ತು ತಾಲೂಕು ಪಂಚಾಯಿತಿ ಚುನಾವಣೆಗಳನ್ನು ದೃಷ್ಟಿಯಲ್ಲಿಟ್ಟುಕೊಂಡು ಪಕ್ಷದ ಕಾರ್ಯಕರ್ತರಲ್ಲಿ ಹೊಸ ಉತ್ಸಾಹ ತುಂಬಲು ಈ ಪ್ರವಾಸ ನೆರವಾಗಲಿದೆ ಎಂದು ತಿಳಿಸಿದರು.

ಇದೇ ಸಂದರ್ಭದಲ್ಲಿ ರಾಜ್ಯದ ಕಾಂಗ್ರೆಸ್ ಸರ್ಕಾರದ ವಿರುದ್ಧ ಕಟುವಾಗಿ ವಾಗ್ದಾಳಿ ನಡೆಸಿದ ವಿಜಯೇಂದ್ರ, ಹತಾಶರಾದ ಕಾಂಗ್ರೆಸ್ ಪಕ್ಷ ಮತ್ತು ಆ ಪಕ್ಷದ ನಾಯಕ ರಾಹುಲ್ ಗಾಂಧಿಯವರು ಸಾಂವಿಧಾನಿಕ ಸಂಸ್ಥೆಯಾದ ಚುನಾವಣಾ ಆಯೋಗದ ಮೇಲೂ ಅನುಮಾನ ಹುಟ್ಟು ಹಾಕುವ ದುಸ್ಸಾಹಸಕ್ಕೆ ಕೈಹಾಕುತ್ತಿದ್ದಾರೆ. ಕಾಂಗ್ರೆಸ್ಸಿನವರ ಕಪಟ ನಾಟಕವನ್ನು ಜನರು ಅರ್ಥ ಮಾಡಿಕೊಂಡಿದ್ದಾರೆ ಎಂದರು.

# ಗ್ರಾಮ ಪಂಚಾಯಿತಿ, ವಾರ್ಡ್ ಮಟ್ಟದಲ್ಲಿ ಗ್ಯಾರಂಟಿ ಸಮಿತಿ ರಚನೆಗೆ 15 ದಿನ ಗಡುವು

**ಸಿಎಂ ಸೂಚನೆ ಮೇರೆಗೆ ಪ್ರಜಾಸೇವಾ ಇಲಾಖೆಯಿಂದ ಮಹತ್ವದ ಆದೇಶ**

**ಸಮಿತಿ ರಚನೆಯಾಗದಿದ್ದರೆ, ಗ್ಯಾರಂಟಿ ಯೋಜನೆಗಳ ರಾಜ್ಯ ಅಧ್ಯಕ್ಷರಿಂದ ಸದಸ್ಯರ ನೇಮಕ**

ಬೆಂಗಳೂರು, ಅ.1: ರಾಜ್ಯದ ಗ್ಯಾರಂಟಿ ಯೋಜನೆಗಳನ್ನು ಫಲಾನುಭವಿಗಳಿಗೆ ಮತ್ತಷ್ಟು ಪರಿಣಾಮಕಾರಿಯಾಗಿ ತಲುಪಿಸುವ ಉದ್ದೇಶದಿಂದ ರಾಜ್ಯದ ಎಲ್ಲಾ ಗ್ರಾಮ ಪಂಚಾಯಿತಿಗಳು ಹಾಗೂ ವಾರ್ಡ್ ಮಟ್ಟದಲ್ಲಿ ಗ್ಯಾರಂಟಿ ಸಮಿತಿಗಳನ್ನು ರಚಿಸುವ ಪ್ರಕ್ರಿಯೆಯನ್ನು 15 ದಿನಗಳೊಳಗೆ ಪೂರ್ಣಗೊಳಿಸಬೇಕು ಎಂದು ಸರ್ಕಾರ ಗಡುವು ನೀಡಿದೆ.

ಈ ಸಂಬಂಧ ಪ್ರಜಾಸೇವಾ ಇಲಾಖೆ ಆದೇಶ ಹೊರಡಿಸಿದೆ ನಗರದಲ್ಲಿ ವಾರ್ಡ್‌ಗಳ ಮಟ್ಟದ ಸಮಿತಿಗಳನ್ನು ರಚಿಸುವ ಜವಾಬ್ದಾರಿಯನ್ನು ಆಯಾ ಜಿಲ್ಲೆಗಳ ಜಿಲ್ಲಾಧಿಕಾರಿಗಳಿಗೆ ಹಾಗೂ ಗ್ರಾಮ ಪಂಚಾಯಿತಿ ಮಟ್ಟದ ಸಮಿತಿಗಳನ್ನು ರಚಿಸುವ ಜವಾಬ್ದಾರಿಯನ್ನು ಜಿಲ್ಲಾ ಪಂಚಾಯಿತಿಗಳ ಮುಖ್ಯ ಕಾರ್ಯನಿರ್ವಹಣಾಧಿಕಾರಿಗಳಿಗೆ ವಹಿಸಲಾಗಿದೆ.

ಸಮಿತಿಗಳಿಗೆ ಅಧ್ಯಕ್ಷರು ಹಾಗೂ ಸದಸ್ಯರನ್ನು ನೇಮಕ ಮಾಡುವ ಪ್ರಕ್ರಿಯೆಯನ್ನು ನಿಗದಿತ ಅವಧಿಯೊಳಗೆ ಪೂರ್ಣಗೊಳಿಸುವಂತೆ ಸೂಚಿಸಲಾಗಿದೆ. 15 ದಿನಗಳೊಳಗೆ ನೇಮಕಾತಿ ಆದೇಶ ಹೊರಡಿಸದಿದ್ದಲ್ಲಿ, ಕರ್ನಾಟಕ ರಾಜ್ಯ ಗ್ಯಾರಂಟಿ ಯೋಜನೆಗಳ ಅನುಷ್ಠಾನ ಸಮಿತಿಯ ಅಧ್ಯಕ್ಷರೇ, ಸದಸ್ಯರನ್ನು ನೇಮಕ ಮಾಡಲು ಅಧಿಕಾರ ಹೊಂದಿರುತ್ತಾರೆ ಎಂದು ಸುತ್ತೋಲೆಯಲ್ಲಿ ತಿಳಿಸಲಾಗಿದೆ.



ರಾಜ್ಯ ಸರ್ಕಾರದ ಐದು ಗ್ಯಾರಂಟಿ ಯೋಜನೆಗಳು ಅರ್ಹ ಫಲಾನುಭವಿಗಳಿಗೆ ತಲುಪಬೇಕು ಎಂಬುದು ಸರ್ಕಾರದ ಆಶಯ. ಈ ನಿಟ್ಟಿನಲ್ಲಿ ಗ್ರಾಮ ಪಂಚಾಯಿತಿ ಹಾಗೂ ನಗರಗಳಲ್ಲಿ ವಾರ್ಡ್ ಮಟ್ಟದಲ್ಲಿ 6 ಸದಸ್ಯರನ್ನು ಒಳಗೊಂಡ ಸಮಿತಿಗಳನ್ನು ರಚನೆ ಮಾಡಬೇಕೆಂದು ಮುಖ್ಯಮಂತ್ರಿ ಡಿ.ಕೆ.ಶಿವಕುಮಾರ್ ಅವರು ಸೂಚನೆ ನೀಡಿದ್ದರು. ಪ್ರತಿ ಸಮಿತಿಯಲ್ಲಿ ಎಸ್‌ಸಿ/ಎಸ್‌ಟಿ-1, ಅಲ್ಪಸಂಖ್ಯಾತರು-1, ಮಹಿಳೆಯರು-2, ಹಿಂದುಳಿದ ವರ್ಗ-1 ಹಾಗೂ ಸಾಮಾನ್ಯ ವರ್ಗ-1 ಸದಸ್ಯರಿಗೆ ಪ್ರಾತಿನಿಧ್ಯ ಕಲ್ಪಿಸಲಾಗುತ್ತದೆ. ಅಲ್ಪಸಂಖ್ಯಾತರ ಪ್ರಾತಿನಿಧ್ಯ ಲಭ್ಯವಿಲ್ಲದ ಸಂದರ್ಭದಲ್ಲಿ ಸಾಮಾನ್ಯ ವರ್ಗದಿಂದ ಸದಸ್ಯರನ್ನು ನೇಮಿಸಲು ಅವಕಾಶವಿದೆ. ಇದರಿಂದ ಸ್ಥಳೀಯ ಮಟ್ಟದಲ್ಲಿ ಯೋಜನೆಗಳ ಅನುಷ್ಠಾನವನ್ನು ಪರಿಶೀಲಿಸುವುದರ ಜೊತೆಗೆ ಫಲಾನುಭವಿಗಳ ಸಮಸ್ಯೆಗಳನ್ನು ಆಲಿಸಿ, ಅವುಗಳಿಗೆ ತ್ವರಿತ ಪರಿಹಾರ ಕಲ್ಪಿಸಬಹುದು.

**- ದಿನೇಶ್ ಗೂಳಿಗೌಡ**

ಉಪಾಧ್ಯಕ್ಷರು, ರಾಜ್ಯ ಗ್ಯಾರಂಟಿ ಯೋಜನೆಗಳ ಅನುಷ್ಠಾನ ಪ್ರಾಧಿಕಾರ

# ದೆಹಲಿ ಕನ್ನಡ ಶಿಕ್ಷಣ ಸಂಸ್ಥೆಯಲ್ಲಿ ಗಾಂಧೀ ಜಯಂತಿ ಅಂಗವಾಗಿ ವೃಕ್ಷಾರೋಪಣ ಕಾರ್ಯಕ್ರಮ




**ನವದೆಹಲಿ, ಅ.1:** ಗಾಂಧೀ ಜಯಂತಿಯ ಅಂಗವಾಗಿ ದೆಹಲಿಯ ದೆಹಲಿ ಕನ್ನಡ ಶಿಕ್ಷಣ ಸಂಸ್ಥೆ, ಲೋಧಿ ಎಸ್ಟೇಟ್ ಆವರಣದಲ್ಲಿ ಗುರುವಾರ ವೃಕ್ಷಾರೋಪಣ ಕಾರ್ಯಕ್ರಮವನ್ನು ಹಮ್ಮಿಕೊಳ್ಳಲಾಯಿತು.

ಬ್ಯಾಂಕ್ ಆಫ್ ಇಂಡಿಯಾ ಹಾಗೂ ಫ್ಯಾಮಿಲಿ ಟ್ರೀ ಫೌಂಡೇಶನ್ ಸಹಯೋಗದಲ್ಲಿ ನಡೆದ ಈ ಕಾರ್ಯಕ್ರಮದಲ್ಲಿ ಬ್ಯಾಂಕ್ ಆಫ್ ಇಂಡಿಯಾ ಮಹಾಪ್ರಬಂಧಕ ಮುಕೇಶ್ ಕುಮಾರ್ ಝಾ ಅವರ ನೇತೃತ್ವದಲ್ಲಿ ಬ್ಯಾಂಕಿನ ಹಿರಿಯ ಅಧಿಕಾರಿಗಳು ಭಾಗವಹಿಸಿ ಶಾಲಾ ಆವರಣದಲ್ಲಿ ವಿವಿಧ ಗಿಡಗಳನ್ನು ನೆಟ್ಟರು. ಕಾರ್ಯಕ್ರಮದಲ್ಲಿ ಬ್ಯಾಂಕಿನ ಹಿರಿಯ ಅಧಿಕಾರಿಗಳು ಹಾಗೂ ಫ್ಯಾಮಿಲಿ ಟ್ರೀ ಫೌಂಡೇಶನ್‌ನ ಪ್ರತಿನಿಧಿಗಳು ಭಾಗವಹಿಸಿದ್ದರು.

ಈ ಸಂದರ್ಭದಲ್ಲಿ ಸಂಸ್ಥೆಯ ಕಾರ್ಯದರ್ಶಿ ಕಾಶಿನಾಥ್ ಬಿರಾದಾರ್, ಆಡಳಿತ ಮಂಡಳಿಯ ಸದಸ್ಯ ಗಿರೀಶ್ ಎಸ್., ಶಾಲೆಯ ಪ್ರಾಂಶುಪಾಲ ಪ್ರಶಾಂತ್ ಕುಮಾರ್, ಶಿಕ್ಷಕರು ಹಾಗೂ ವಿದ್ಯಾರ್ಥಿಗಳು ಉಪಸ್ಥಿತರಿದ್ದರು. ಈ ಸಂದರ್ಭದಲ್ಲಿ ಮಾತನಾಡಿದ ಕಾರ್ಯದರ್ಶಿ ಕಾಶಿನಾಥ್ ಬಿರಾದಾರ್ ವೃಕ್ಷಾರೋಪಣ ಎನ್ನುವುದು ಕೇವಲ ಗಿಡ ನೆಡುವ ಕಾರ್ಯಕ್ರಮವಲ್ಲ. ನಮ್ಮ ಮುಂದಿನ ಪೀಳಿಗೆಗೆ ಉತ್ತಮ ಪರಿಸರವನ್ನು ನೀಡುವ ಜವಾಬ್ದಾರಿಯನ್ನು ಮಕ್ಕಳಲ್ಲಿ ಬೆಳೆಸುವ ಒಂದು ಉತ್ತಮ ಅವಕಾಶವಾಗಿದೆ. ಶಾಲೆಯ ವಿದ್ಯಾರ್ಥಿಗಳೇ ಈ ಗಿಡಗಳನ್ನು ಬೆಳೆಸಿ, ಸಂರಕ್ಷಿಸುವ ಮೂಲಕ ಪರಿಸರದ ಬಗ್ಗೆ ಕಾಳಜಿ ಮತ್ತು ಜವಾಬ್ದಾರಿಯನ್ನು ಕಲಿಯಬೇಕು. ನಮ್ಮ ಸಂಸ್ಥೆ ಸದಾ ಶಿಕ್ಷಣದ ಜೊತೆಗೆ ಸಾಮಾಜಿಕ ಮತ್ತು ಪರಿಸರದ ಜವಾಬ್ದಾರಿಗೂ ಮಹತ್ವ ನೀಡುತ್ತದೆ ಎಂದು ಹೇಳಿದರು. ಇದೇ ಸಂದರ್ಭದಲ್ಲಿ ಬ್ಯಾಂಕ್ ಆಫ್ ಇಂಡಿಯಾ ನಮ್ಮ ಶಾಲೆಯನ್ನು ಆಯ್ಕೆ ಮಾಡಿಕೊಂಡು ಈ ಕಾರ್ಯಕ್ರಮವನ್ನು ನಡೆಸಿರುವುದಕ್ಕೆ ಧನ್ಯವಾದ ಸಲ್ಲಿಸಿದರು. ಮುಂದಿನ ದಿನಗಳಲ್ಲಿ ಸಂಸ್ಥೆಯ ವಿದ್ಯಾರ್ಥಿಗಳ ಶೈಕ್ಷಣಿಕ ಅಭಿವೃದ್ಧಿ ಹಾಗೂ ಶಾಲೆಯ ವಿವಿಧ ಅಗತ್ಯಗಳಿಗೆ ಸಿಎಸ್‌ಆರ್ ಮೂಲಕ ಸಹಕಾರ ನೀಡುವ ಬ್ಯಾಂಕ್ ಆಫ್ ಇಂಡಿಯಾ ಮಹಾಪ್ರಬಂಧಕರ ಆಸಕ್ತಿಯನ್ನು ಸ್ವಾಗತಿಸಿದರು.




ಮುಕೇಶ್ ಕುಮಾರ್ ಝಾ ಶಾಲೆಯಲ್ಲಿ ವೃಕ್ಷಾರೋಪಣ ಕಾರ್ಯಕ್ರಮವನ್ನು ಆಯೋಜಿಸಿರುವ ಬಗ್ಗೆ ಸಂತಸ ವ್ಯಕ್ತಪಡಿಸಿದರು, ಸಂಸ್ಥೆಯ ಹಸಿರು ವಾತಾವರಣ ಹಾಗೂ ವಿವಿಧ ರೀತಿಯ ಮರಗಳು ಹಾಗೂ ಸಸಿಗಳನ್ನು ನೋಡಿ ನನಗೆ ಬಹಳ ಸಂತೋಷವಾಯಿತು. ಶಾಲೆಯಲ್ಲಿಯೇ ಇಂತಹ ಕಾರ್ಯಕ್ರಮವನ್ನು ಆಯೋಜಿಸಿರುವುದು ಸಂತೋಷದ ಸಂಗತಿ. ಪರಿಸರ ಸಂರಕ್ಷಣೆಯ ಸಂದೇಶವನ್ನು ವಿದ್ಯಾರ್ಥಿಗಳಿಗೆ ನೀಡುವ ಇಂತಹ ಕಾರ್ಯಕ್ರಮಗಳು ಬಹಳ ಮುಖ್ಯ. ಗಾಂಧೀ ಜಯಂತಿಯಂದು ಇಂತಹ ಉತ್ತಮ ಕಾರ್ಯದ ಮೂಲಕ ದಿನವನ್ನು ಆಚರಿಸಿರುವುದು ಈ ದಿನದ ಆಶಯಕ್ಕೆ ನಿಜವಾದ ಅರ್ಥ ನೀಡುತ್ತದೆ ಎಂದು ಅವರು ಹೇಳಿದರು.

ಕಾರ್ಯಕ್ರಮದಲ್ಲಿ ವಿದ್ಯಾರ್ಥಿಗಳು ಬ್ಯಾಂಕ್ ಅಧಿಕಾರಿಗಳೊಂದಿಗೆ ಸೇರಿ ವೃಕ್ಷಾರೋಪಣದಲ್ಲಿ ಪಾಲ್ಗೊಂಡರು. ಈ ಮೂಲಕ ವಿದ್ಯಾರ್ಥಿಗಳಲ್ಲಿ ಪರಿಸರ ಸಂರಕ್ಷಣೆ, ಸ್ವಚ್ಛತೆ ಮತ್ತು ಪ್ರಕೃತಿಯ ಬಗ್ಗೆ ಕಾಳಜಿ ಬೆಳೆಸುವ ಸಂದೇಶ ನೀಡಲಾಯಿತು.

ಕಾರ್ಯಕ್ರಮವು ಶಾಲಾ ಸಿಬ್ಬಂದಿ, ವಿದ್ಯಾರ್ಥಿಗಳು, ಬ್ಯಾಂಕಿನ ಅಧಿಕಾರಿಗಳು ಹಾಗೂ ಆಡಳಿತ ಮಂಡಳಿಯ ಸದಸ್ಯರ ಸಕ್ರಿಯ ಭಾಗವಹಿಸುವಿಕೆಯೊಂದಿಗೆ ಯಶಸ್ವಿಯಾಗಿ ನಡೆಯಿತು.

# ಟೈಮ್ಸ್ ವರ್ಲ್ಡ್ ಯೂನಿವರ್ಸಿಟಿ ರ್‍ಯಾಂಕಿಂಗ್ 2027 ಪಟ್ಟಿ ಬಿಡುಗಡೆ

**ಕೆಐಐಟಿಗೆ ಭಾರತದ 4ನೇ ಅತ್ಯುತ್ತಮ ವಿಶ್ವವಿದ್ಯಾಲಯ ಸ್ಥಾನ**

**ಪೂರ್ವ ಭಾರತದಲ್ಲೇ ಉನ್ನತ ಸ್ಥಾನ ಪಡೆದ ಸಂಸ್ಥೆ**




ಭುವನೇಶ್ವರ, ಅ.1: ಟೈಮ್ಸ್ ಹೈಯರ್ ಎಜುಕೇಶನ್ ವರ್ಲ್ಡ್ ಯೂನಿವರ್ಸಿಟಿ ರ್‍ಯಾಂಕಿಂಗ್ಸ್ 2027' ಪಟ್ಟಿ ಬಿಡುಗಡೆಯಾಗಿದ್ದು, ಇಲ್ಲಿನ ಕಳಿಂಗ ಇನ್‌ಸ್ಟಿಟ್ಯೂಟ್ ಆಫ್ ಇಂಡಸ್ಟ್ರಿಯಲ್ ಟೆಕ್ನಾಲಜಿ (ಕೆಐಐಟಿ) ವಿಶ್ವವಿದ್ಯಾಲಯವು (ಡೀಮ್ಡ್ ಟು ಬಿ ಯೂನಿವರ್ಸಿಟಿ) ಭಾರತದ ವಿಶ್ವವಿದ್ಯಾಲಯಗಳ ಪೈಕಿ 4ನೇ ಸ್ಥಾನ ಪಡೆದಿದೆ. ಇದಲ್ಲದೆ ಪೂರ್ವ ಭಾರತದಲ್ಲಿ ಅಗ್ರಸ್ಥಾನವನ್ನು ಪಡೆದು ಮತ್ತೊಮ್ಮೆ ತನ್ನ ಶೈಕ್ಷಣಿಕ ಶ್ರೇಷ್ಠತೆಯನ್ನು ಸಾಬೀತುಪಡಿಸಿದೆ. ಇದರೊಂದಿಗೆ ಕೆಐಐಟಿಯ ಹೆಗ್ಗಳಿಕೆಗೆ ಮತ್ತೊಂದು ಗರಿ ಸೇರಿದಂತಾಗಿದೆ.

ಕಳೆದ ವರ್ಷಕ್ಕೆ ಹೋಲಿಸಿದರೆ ರಾಷ್ಟ್ರೀಯ ಶ್ರೇಯಾಂಕದಲ್ಲಿ ವಿಶ್ವವಿದ್ಯಾಲಯವು ಒಂದು ಸ್ಥಾನ ಮೇಲಕ್ಕೆ ಏರಿದೆ. ಜಾಗತಿಕ ರ್‍ಯಾಂಕಿಂಗ್‌ನಲ್ಲಿ, ಕೆಐಐಟಿಯು 501–550ರ ಗುಂಪಿನಲ್ಲಿ ಸ್ಥಾನ ಪಡೆದಿದೆ. ವಿಶೇಷವೆಂದರೆ ವಿಶ್ವದಾದ್ಯಂತ ಸಂಸ್ಥೆಗಳ ಭಾಗವಹಿಸುವಿಕೆ ಹೆಚ್ಚಾಗಿದ್ದರೂ, ಹಿಂದಿನ ವರ್ಷಕ್ಕಿಂತ ಸಂಸ್ಥೆ ಗಮನಾರ್ಹ ಸುಧಾರಣೆ ಕಂಡಿದೆ.

ಈ ಇತ್ತೀಚಿನ ಶ್ರೇಯಾಂಕವು ಸಂಸ್ಥೆಯು ಎಲ್ಲಾ ರಂಗದಲ್ಲಿ ಸಾಧಿಸಿರುವ ಬೆಳವಣಿಗೆಯನ್ನು ಪ್ರತಿಬಿಂಬಿಸುತ್ತದೆ. ಬೋಧನಾ ಗುಣಮಟ್ಟದಲ್ಲಿ ಗಮನಾರ್ಹ ಪ್ರಗತಿ, ಸಂಶೋಧನೆಗೆ ಪೂರಕವಾದ ವಾತಾವರಣ, ಉದ್ಯಮದೊಂದಿಗಿನ ಸಹಭಾಗಿತ್ವ ಮತ್ತು ಅಂತರರಾಷ್ಟ್ರೀಯ ದೃಷ್ಟಿಕೋನದಲ್ಲಿಯೂ ಸಂಸ್ಥೆ ಉತ್ತಮ ಸಾಧನೆ ಮಾಡಿರುವುದು ಕಂಡುಬಂದಿದೆ.

ಜಾಗತಿಕ ಮಟ್ಟದ ಸ್ಪರ್ಧೆ ಹೆಚ್ಚುತ್ತಿರುವ ನಡುವೆಯೂ ಕೆಐಐಟಿ ಅಮೋಘ ಸಾಧನೆ ಮಾಡಿದೆ. ಕೆಐಐಟಿಯಲ್ಲಿನ ನಿರಂತರ ಸಾಂಸ್ಥಿಕ ತಂತ್ರಗಳು, ದೃಢವಾದ ಗುಣಮಟ್ಟದ ಭರವಸೆಯ ಆಯಾಮಗಳು ಹಾಗೂ ಮೂಲಸೌಕರ್ಯ ಮತ್ತು ಶೈಕ್ಷಣಿಕ ಅಭಿವೃದ್ಧಿಯಲ್ಲಿನ ನಿರಂತರ ಹೂಡಿಕೆಗೆ ಅತ್ಯುತ್ತಮ ವಿಶ್ವವಿದ್ಯಾಲಯ ಸ್ಥಾನ ಬಂದಿದೆ.

ಈ ಮಹತ್ವದ ಸಾಧನೆಯು ಕೆಐಐಟಿಯ ನಾಯಕತ್ವದ ದೂರದೃಷ್ಟಿ, ಬೋಧಕ ಸಿಬ್ಬಂದಿಯ ಸಮರ್ಪಣಾ ಭಾವ, ಸಂಶೋಧಕರ ಸಾಧನೆಗಳು ಮತ್ತು ವಿದ್ಯಾರ್ಥಿಗಳ ಕ್ರಿಯಾಶೀಲ ಜಾಗತಿಕ ಸಮುದಾಯದ ಬದ್ಧತೆಗೆ ಸಾಕ್ಷಿಯಾಗಿದೆ.



ತಮ್ಮ ಸಂಸ್ಥೆಯ ಸಾಧನೆಯ ಬಗ್ಗೆ ಸಂತಸ ವ್ಯಕ್ತಪಡಿಸಿದ ಕೆಐಐಟಿ ಮತ್ತು ಕಿಐಎಸ್‌ಎಸ್ ಸಂಸ್ಥಾಪಕರಾದ ಡಾ. ಅಚ್ಯುತ ಸಮಂತ ಅವರು, "ಪ್ರತಿಯೊಂದು ರಾಜ್ಯವೂ ವಿಶ್ವದ ಅತ್ಯುತ್ತಮ ವಿಶ್ವವಿದ್ಯಾಲಯಗಳ ಪಟ್ಟಿಯಲ್ಲಿ ಸ್ಥಾನ ಪಡೆಯಬೇಕೆಂದು ಬಯಸುತ್ತದೆ. ಇತರ ವಿಶ್ವವಿದ್ಯಾಲಯಗಳಿಗೆ ಹೋಲಿಸಿದರೆ ಕೆಐಐಟಿ ಯುವ ವಿಶ್ವವಿದ್ಯಾಲಯ. ಆದರೂ ವಿಶ್ವದ ಅಗ್ರಗಣ್ಯ ವಿಶ್ವವಿದ್ಯಾಲಯಗಳ ಪಟ್ಟಿಯಲ್ಲಿ ಸ್ಥಾನ ಪಡೆದಿರುವುದು ಅತೀವ ಸಂತೋಷ ತಂದಿದೆ. ಈ ಸಾಧನೆಯು ವಿಶೇಷವಾಗಿ ನಮ್ಮ ಸಂಸ್ಥೆ ಮತ್ತು ಭಾರತಕ್ಕೆ ಹೆಮ್ಮೆಯ ವಿಷಯವಾಗಿದೆ. ಇದಕ್ಕಾಗಿ ಶ್ರಮಿಸಿರುವ ಎಲ್ಲಾ ಸಿಬ್ಬಂದಿ, ವಿದ್ಯಾರ್ಥಿಗಳಿಗೆ ಅಭಿನಂದನೆಗಳು" ಎಂದು ಹೇಳಿದ್ದಾರೆ.

Chief reporter : SANDEEP RENU ✆ 99728 72151 | Executive Editor : SHARAT JYOTSNA B.R ✆ 9886766483 ✉ vaarthe@gmail.com

Published from: K10,'A'/4, Khriki Extension, Malviya Nagar, New Delhi-110 017. Phone: 95-120-3917916-20
Printed at: Jyoti Printers, E-94, Sector 6, Noida, UP. Phone: 0120-4232687 Off : E-94,Sector 6, Noida,UP | RNI No. DELKAN/2003/10363

24 ವರ್ಷಗಳಿಂದ ದೆಹಲಿಯಲ್ಲಿ ಪ್ರಕಟವಾಗುತ್ತಿರುವ ಪ್ರಪ್ರಥಮ ರಾಷ್ಟ್ರೀಯ ಕನ್ನಡ ದಿನಪತ್ರಿಕೆ

ದೆಹಲಿ ವಾರ್ತೆ

ಅಕ್ಟೋಬರ್ 2 2026 ಶುಕ್ರವಾರ

## ಒಳಪುಟಗಳಲ್ಲಿ

ಭೀಕರ ಬರ: ತುರ್ತು ಪರಿಹಾರ ಕೋರಿ ಕೇಂದ್ರ ಗೃಹ, ಕೃಷಿ ಸಚಿವರಿಗೆ ಡಿಸಿಎಂ ಪ್ರತ್ಯೇಕ ಪತ್ರ - ಪು4

ವಿಧಾನಸೌಧದ ಮುಂಭಾಗ ಉರ್ದು ಹಬ್ಬಕ್ಕೆ ವಿರೋಧ ಹೋರಾಟಕ್ಕೆ ಕರವೇ ನಾರಾಯಣಗೌಡ ಕರೆ - ಪು.5

# ಅರ್ಹರನ್ನು ಮತದಾರರ ಪಟ್ಟಿಯಿಂದ ಹೊರಗಿಡುವ ಷಡ್ಯಂತ್ರ: ಸಿಎಂ ಕಿಡಿ

### ಎಸ್‌ಐಆರ್ ಪ್ರಕ್ರಿಯೆಯಲ್ಲಿ ನಕಲಿ ಫಾರ್ಮ್ 7 ಬಳಕೆ ಆರೋಪ, ತನಿಖೆ ನಡೆಸುವಂತೆ ಡಿ.ಕೆ. ಶಿವಕುಮಾರ್ ಆಗ್ರಹ

**ಬೆಂಗಳೂರು, ಅ.1:** ಅರ್ಹ ಮತದಾರರ ಹೆಸರುಗಳನ್ನು ಬೃಹತ್ ಪ್ರಮಾಣದಲ್ಲಿ ತೆಗೆದುಹಾಕಲು ಯತ್ನಿಸಲಾಗುತ್ತಿದೆ ಎಂದು ಆರೋಪಿಸಿ ತೀವ್ರ ವಾಗ್ದಾಳಿ ನಡೆಸಿರುವ ಕರ್ನಾಟಕದ ಮುಖ್ಯಮಂತ್ರಿ ಡಿ.ಕೆ. ಶಿವಕುಮಾರ್ ಅವರು, ವಿಶೇಷ ಸತತ ಪರಿಷ್ಕರಣೆ (ಎಸ್‌ಐಆರ್) ಪ್ರಕ್ರಿಯೆಯಲ್ಲಿ ನಕಲಿ 'ಫಾರ್ಮ್ 7' ಆಕ್ಷೇಪಣೆಗಳನ್ನು ಸಾಮೂಹಿಕವಾಗಿ ಸಲ್ಲಿಸಿರುವ ಪ್ರಕರಣದ ಕುರಿತು ತಕ್ಷಣವೇ ಎಫ್‌ಐಆರ್ ದಾಖಲಿಸಿ, ಕಾಲಮಿತಿಯೊಳಗೆ ಕ್ರಿಮಿನಲ್ ತನಿಖೆ ನಡೆಸಬೇಕೆಂದು ಆಗ್ರಹಿಸಿದರು.

ಸುದ್ದಿಗೋಷ್ಠಿಯಲ್ಲಿ ಮಾತನಾಡಿದ ಅವರು, ಮತದಾರರನ್ನು ಮತದಾರರ ಪಟ್ಟಿಯಿಂದ ತೆಗೆದು ಹಾಕಲು ಬಿಜೆಪಿ ಹಾಗೂ ಜನತಾದಳ ಕ್ರಿಮಿನಲ್ ಸಂಚು ರೂಪಿಸಿ ವ್ಯಾಪಕ ಅಕ್ರಮದಲ್ಲಿ ತೊಡಗಿರುವುದು ಬಯಲಿಗೆ ಬಂದಿದ್ದು, ಇದರ ವಿರುದ್ಧ ಸರ್ಕಾರ ಕಾನೂನು ಕ್ರಮ ಸೇರಿ ಎಲ್ಲಾ ಕ್ರಮ ಕೈಗೊಳ್ಳಲಿದೆ ಎಂದು ತಿಳಿಸಿದರು.

ರಾಜ್ಯದ ಹಲವು ಜಿಲ್ಲೆಗಳ ಹಲವು ವಿಧಾನಸಭಾ ಕ್ಷೇತ್ರಗಳಲ್ಲಿ ಪೂರ್ವಮುದ್ರಿತ ಮಾಹಿತಿಗಳನ್ನು ಒಳಗೊಂಡ ಫಾರಂ 7 ಅನ್ನು ಬಿಜೆಪಿ ಕಾರ್ಯಕರ್ತರು ಬಿಎಲ್‌ಒಗಳಿಗೆ ಸಲ್ಲಿಸಿ, ಮತದಾರರ ಹೆಸರನ್ನು ಪಟ್ಟಿಯಿಂದ ತೆಗೆದು ಹಾಕಲು ಪ್ರಯತ್ನಿಸುತ್ತಿರುವುದು ಪತ್ತೆಯಾಗಿದೆ. ಇದು ಕ್ರಿಮಿನಲ್ ಸಂಚಾಗಿದ್ದು, ಕೋಮುದ್ವೇಷ ಮೂಡಿಸಿ, ಕೋಮು ಸಾಮರಸ್ಯ ಕದಡಲು ನಡೆಸಿದ ವ್ಯವಸ್ಥಿತ ಷಡ್ಯಂತ್ರವಾಗಿದೆ ಎಂದು ಕಿಡಿಕಾರಿದರು.

**ಫಾರಂ 7 ಪೂರ್ವಮುದ್ರಿತವಾಗಿದ್ದು ಎಲ್ಲಿ?:** "ಬಿಜೆಪಿಯ ಅಧಿಕೃತ ಕಾರ್ಯಕರ್ತರು ತಮ್ಮ ಹೆಸರಿನಲ್ಲಿ ನೂರಾರು ಇಂತಹ ಫಾರಂ 7 ಅರ್ಜಿಗಳನ್ನು ಸಲ್ಲಿಸಿರುವುದನ್ನು ನಾವು ಪತ್ತೆ ಹಚ್ಚಿದ್ದೇವೆ. ಕೆಲವು ಕಡೆ ಬಿಜೆಪಿ ಕಾರ್ಯಕರ್ತರು ತಮ್ಮ ತಪ್ಪನ್ನು ಒಪ್ಪಿಕೊಂಡಿದ್ದಾರೆ. ಬಿಜೆಪಿ ಹಾಗೂ ಜನತಾದಳದ ಷಡ್ಯಂತ್ರ ಇದೀಗ ಬಯಲಾಗಿದೆ. ಫಾರಂ 7ರಲ್ಲಿ ಮಾಹಿತಿಯನ್ನು ಮುದ್ರಿಸಿ ಬಿಜೆಪಿ ಕಾರ್ಯಕರ್ತರು ಈ ಕಾರ್ಯದಲ್ಲಿ ತೊಡಗಿದ್ದಾರೆ. ಕೆಲವು ಕಡೆ ಈ ಅರ್ಜಿ ನೀಡಿದ್ದ ಬಿಜೆಪಿ ನಾಯಕರು ಹಾಗೂ ಕಾರ್ಯಕರ್ತರು ತಮ್ಮ ತಪ್ಪನ್ನು ಒಪ್ಪಿಕೊಂಡಿದ್ದಾರೆ. ಎಲ್ಲಿ ಈ ಫಾರಂ ಮುದ್ರಿತವಾಗುತ್ತಿದೆ, ಇದರ ಹಿಂದೆ ಯಾವ ಪಕ್ಷದ ನಾಯಕರು ಇದ್ದಾರೆ. ಚುನಾವಣಾ ಆಯೋಗ ಇದರ ಹಿಂದೆ ಇರುವ

> **ಫಾರ್ಮ್-7 ಷಡ್ಯಂತ್ರ**
>
> ಪೂರ್ವಮುದ್ರಿತ ಮತದಾರರ ವಿವರಗಳನ್ನು ಒಳಗೊಂಡ ಫಾರಂ –7 ಮೂಲಕ ರಾಜ್ಯದ ಅಲ್ಪಸಂಖ್ಯಾತರು, ಪರಿಶಿಷ್ಟ ಜಾತಿ, ಪರಿಶಿಷ್ಟ ಪಂಗಡ ಹಾಗೂ ಹಿಂದುಳಿದ ವರ್ಗಗಳ ಅರ್ಹ ಮತದಾರರನ್ನು ಮತದಾರರ ಪಟ್ಟಿಯಿಂದ ಹೊರಗಿಡುವ (ಡಿಲೀಟ್) ಷಡ್ಯಂತ್ರ ಮಾಡಿರುವವರ ವಿರುದ್ಧ ಚುನಾವಣಾ ಆಯೋಗ ಪ್ರಕರಣ ದಾಖಲಿಸಬೇಕು" ಎಂದು ಡಿ.ಕೆ. ಶಿವಕುಮಾರ್ ಆಗ್ರಹಿಸಿದರು.

ಪ್ರತಿಯೊಬ್ಬರನ್ನೂ ಪತ್ತೆಹಚ್ಚಿ ಕಠಿಣ ಕಾನೂನು ಕ್ರಮ ಜರುಗಿಸಬೇಕು ಎಂದು ಡಿ.ಕೆ. ಶಿವಕುಮಾರ್ ಒತ್ತಾಯಿಸಿದರು.

**ಬಿಎಲ್‌ಒಗಳ ಮೇಲೆ ಒತ್ತಡ ಹೇರಿದವರನ್ನು ಪತ್ತೆಹಚ್ಚಿ ಪ್ರಕರಣ ದಾಖಲಿಸಿ:** ಮುಖ್ಯ ಚುನಾವಣಾಧಿಕಾರಿ ಜ್ಞಾನೇಶ್ ಕುಮಾರ್ ಅವರಿಗೆ ಮಾಹಿತಿಯಿಲ್ಲದೇ ಇಂತಹ ಕೃತ್ಯ ನಡೆಯಲು ಸಾಧ್ಯವಿಲ್ಲ. ಎಸ್‌ಐಆರ್ ದೇಶದ ಅತಿ ದೊಡ್ಡ ವಂಚನೆಯಾಗಿದ್ದು, ಎಸ್‌ಐಆರ್ ರದ್ದಾಗಬೇಕು" ಎಂದು ಆಗ್ರಹಿಸಿದರು. ಎಸ್‌ಐಆರ್ ಪ್ರಾರಂಭವಾದ ಬಳಿಕ ನಾವು ಸರ್ಕಾರದ ವತಿಯಿಂದ ಆಯೋಗಕ್ಕೆ ಎಲ್ಲಾ ಬೆಂಬಲ, ಸಹಕಾರ ನೀಡುತ್ತಾ ಬಂದಿದ್ದೇವೆ. ಆದರೆ ಇದೀಗ ಅರ್ಹ ಮತದಾರರನ್ನು ಅಕ್ರಮವಾಗಿ ತೆಗೆದು ಹಾಕಲು ನಡೆಯುತ್ತಿರುವ ಕ್ರಿಮಿನಲ್ ಸಂಚು ಯಶಸ್ವಿಯಾಗಲು ಬಿಡುವುದಿಲ್ಲ. ಎಸ್‌ಐಆರ್ ರದ್ದುಪಡಿಸಬೇಕು. ಪ್ರತಿಯೊಬ್ಬರಿಗೂ ಮತದಾನದ ಹಕ್ಕು ಒದಗಿಸಲು ಕ್ರಮ ಕೈಗೊಳ್ಳಬೇಕು. ಇದರಲ್ಲಿ ಶಾಮೀಲಾಗಿದ್ದಾರೆ ಅಂತಹವರನ್ನು ಬಂಧಿಸಬೇಕು. ಬಿಎಲ್‌ಒಗಳ ಮೇಲೆ ಒತ್ತಡ ಹೇರಿದವರನ್ನು ಪತ್ತೆಹಚ್ಚಿ, ಕ್ರಿಮಿನಲ್ ಮೊಕದ್ದಮೆ ದಾಖಲಿಸಬೇಕು ಎಂದು ಡಿ.ಕೆ. ಶಿವಕುಮಾರ್ ಒತ್ತಾಯಿಸಿದರು.



### ಎಫ್‌ಐಆರ್ ಆಗೋ ತನಕ ಇಲ್ಲಿಂದ ಕದಲಲ್ಲ: ಸಿಎಂ ಡಿ.ಕೆ. ಶಿವಕುಮಾರ್ ಪಟ್ಟು

ಎಸ್‌ಐಆರ್ ಪ್ರಕ್ರಿಯೆಯಲ್ಲಿ ಬಿಜೆಪಿ, ಜೆಡಿಎಸ್ ನಾಯಕರು, ಕಾರ್ಯಕರ್ತರಿಂದ ಅಕ್ರಮ ನಡೆದಿದೆ ಎಂದು ಆರೋಪಿಸಿರುವ ಮುಖ್ಯಮಂತ್ರಿ ಡಿ.ಕೆ.ಶಿವಕುಮಾರ್ ಅವರು ಗೃಹ ಕಚೇರಿ ಕೃಷ್ಣಾದಲ್ಲಿ ಸುದ್ದಿಗೋಷ್ಠಿ ನಡೆಸಿದ ನಂತರ ಸಚಿವರೊಂದಿಗೆ ರಾಜ್ಯ ಚುನಾವಣಾ ಆಯೋಗದ ಕಚೇರಿಗೆ ತೆರಳಿ ಮುಖ್ಯ ಚುನಾವಣಾ ಆಯುಕ್ತ ಅನ್ಬುಕುಮಾರ್ ಅವರನ್ನು ಭೇಟಿ ಮಾಡಿ ದೂರು ನೀಡಿದರು. ಬಳಿಕ ಕಚೇರಿ ಆವರಣದಲ್ಲೇ ಧರಣಿ ನಡೆಸಿದರು.

ಕರ್ನಾಟಕದಲ್ಲಿ ನಡೆಯುತ್ತಿರುವ ಎಸ್‌ಐಆರ್ ಪ್ರಕ್ರಿಯೆಯಡಿ ಮತದಾರರ ಪಟ್ಟಿಯಿಂದ ಹೆಚ್ಚಿನ ಸಂಖ್ಯೆಯ ಹೆಸರುಗಳನ್ನು ಅಳಿಸಲು ಕೆಲವರು ಹಲವು ಅರ್ಜಿಗಳನ್ನು ಸಲ್ಲಿಸುವ ಮೂಲಕ ಸಂಚು ನಡೆಸುತ್ತಿದ್ದಾರೆ. ಕರ್ನಾಟಕದಲ್ಲಿ ಸುಮಾರು 50 ಲಕ್ಷ ಮತದಾರರನ್ನು ಮತಪಟ್ಟಿಯಿಂದ ಡಿಲಿಟ್ ಮಾಡುವ ಷಡ್ಯಂತ್ರ ನಡೆದಿದೆ. ಎಸ್‌ಐಆರ್ ಅಕ್ರಮ ಹಾಗೂ ಮತದಾರರ ಹೆಸರು ಡಿಲಿಟ್ ಮಾಡಲು ನಡೆಸುತ್ತಿರುವ ಷಡ್ಯಂತ್ರದ ವಿರುದ್ಧ ಕ್ರಮ ಆಗಬೇಕು. ತಪ್ಪಿತಸ್ಥರ ವಿರುದ್ಧ ಎಫ್ ಐ ಆರ್ ದಾಖಲಿಸಿ ಬಂಧಿಸಬೇಕು ಎಂದು ಒತ್ತಾಯಿಸಿದರು. ಈ ವೇಳೆ ಈ ಬಗ್ಗೆ ಪರಿಶೀಲಿಸಿಸುವುದಾಗಿ ಚುನಾವಣಾ ಆಯುಕ್ತರು ಹೇಳಿದರು. ಪರಿಶೀಲನೆಗೆ ಎರಡು ದಿನ ಸಮಾಯವಾಕಾಶ ನೀಡಿ ಬಳಿಕ ಮುಂದಿನ ಕ್ರಮ ಕೈಗೊಳ್ಳುವುದಾಗಿ ತಿಳಿಸಿದರು. ಇದಕ್ಕೆ ಒಪ್ಪದ ಸಿಎಂ ಹಾಗೂ ಸಚಿವರು, ಎಫ್‌ಐಆರ್ ದಾಖಲಾಗುವರೆಗೂ ಚುನಾವಣಾ ಆಯೋಗದ ಕಚೇರಿಯಿಂದ ಕದಲುವುದಿಲ್ಲ. ಮೊದಲು ಪ್ರಕರಣ ದಾಖಲಿಸಿ, ಕ್ರಮದ ಭರವಸೆ ನೀಡಿ ಅಲ್ಲಿಯವರೆಗೂ ನಾವ್ಯರೂ ಈ ಜಾಗ ಬಿಟ್ಟುಹೋಗಲ್ಲ ಎಂದು ಪಟ್ಟು ಹಿಡಿದರು.

ಸಚಿವ ಕೆ.ಜೆ. ಜಾರ್ಜ್, ಮುನಿಯಪ್ಪ, ರಾಮಲಿಂಗಾರೆಡ್ಡಿ, ಸತೀಶ್ ಜಾರಕಿಹೊಳಿ, ಜಮೀರ್ ಅಹ್ಮದ್, ಬಸವಂತಪ್ಪ, ಬೈರತಿ ಸುರೇಶ್, ಶಿವರಾಜ ತಂಗಡಗಿ, ವಿಜಯಾನಂದ ಕಾಶಪ್ಪನವರ್, ಬಾಲಕೃಷ್ಣ, ರಿಜ್ವಾನ್ ಅರ್ಷದ್, ಯತೀಂದ್ರ ಸಿದ್ದರಾಮಯ್ಯ, ಅಜಯ್ ಸಿಂಗ್, ಶಿವಲಿಂಗೇಗೌಡ, ಪುಟ್ಟರಂಗ ಶೆಟ್ಟಿ, ಟಿ.ರಘುಮೂರ್ತಿ, ಸಂಸದ ಜಿ.ಸಿ.ಚಂದ್ರಶೇಖರ್, ಶಾಸಕರಾದ ಕೋನರೆಡ್ಡಿ, ಕಂಪ್ಲಿ ಗಣೇಶ್, ಭರತ್ ರೆಡ್ಡಿ ಮತ್ತಿತರರು ಉಪಸ್ಥಿತರಿದ್ದರು.

## ಪಂಜಾಬ್ ಕಾಂಗ್ರೆಸ್ ಅಧ್ಯಕ್ಷ ಸ್ಥಾನಕ್ಕೆ ರಾಜಾ ವಾರಿಂಗ್ ರಾಜೀನಾಮೆ

ಚಂಡೀಗಢ, ಅ.1:ಪಂಜಾಬ್ ವಿಧಾನಸಭಾ ಚುನಾವಣೆಗೆ ಕೇವಲ ಆರು ತಿಂಗಳು ಬಾಕಿ ಇರುವಾಗಲೇ ಪಂಜಾಬ್ ಪ್ರದೇಶ ಕಾಂಗ್ರೆಸ್ ಸಮಿತಿ ಅಧ್ಯಕ್ಷ ಸ್ಥಾನಕ್ಕೆ ಅಮರೀಂದರ್ ಸಿಂಗ್ ರಾಜಾ ವಾರಿಂಗ್ ರಾಜೀನಾಮೆ ಸಲ್ಲಿಸಿದ್ದಾರೆ. ಮುಂದಿನ ವರ್ಷ ವಿಧಾನಸಭಾ ಚುನಾವಣೆ ನಡೆಯಲಿದ್ದು, ಪಕ್ಷದ ಆಂತರಿಕ ಭಿನ್ನಾಭಿಪ್ರಾಯಗಳನ್ನು ಶಮನಗೊಳಿಸಿ ಚುನಾವಣೆಗೆ ಸಜ್ಜಾಗಲು ಕಾಂಗ್ರೆಸ್ ಹೈಕಮಾಂಡ್ ಮುಂದಾಗಿರುವ ಬೆನ್ನಲ್ಲೇ ಈ ಮಹತ್ವದ ಬೆಳವಣಿಗೆ ಸಂಭವಿಸಿದೆ. ನವಜೋತ್ ಸಿಂಗ್ ಸಿಧು ರಾಜೀನಾಮೆಯ ನಂತರ, 2022ರ ಏಪ್ರಿಲ್‌ನಲ್ಲಿ ರಾಜಾ ವಾರಿಂಗ್ ಅಧ್ಯಕ್ಷರಾಗಿ ಅಧಿಕಾರ ವಹಿಸಿಕೊಂಡಾಗಿನಿಂದಲೂ ಪಂಜಾಬ್ ಕಾಂಗ್ರೆಸ್‌ನಲ್ಲಿ ಆಂತರಿಕ ಕಲಹ ಮುಂದುವರಿದಿತ್ತು. ವಿಶೇಷವಾಗಿ ರಾಜಾ ವಾರಿಂಗ್ ಮತ್ತು ಮಾಜಿ ಮುಖ್ಯಮಂತ್ರಿ ಚರಣ್‌ಜಿತ್ ಸಿಂಗ್ ಚನ್ನಿ ಬಣಗಳ ನಡುವಿನ ಬಹಿರಂಗ ಶಕ್ತಿ ಪ್ರದರ್ಶನ ಹಾಗೂ ಭಿನ್ನಾಭಿಪ್ರಾಯ ತೀವ್ರಗೊಂಡಿದ್ದವು. ಇದರೊಂದಿಗೆ, ಪಂಜಾಬ್ ಕಾಂಗ್ರೆಸ್‌ನ ನೂತನ ಉಸ್ತುವಾರಿ ಸಚಿನ್ ಪೈಲಟ್ ಅವರು ಇತ್ತೀಚೆಗೆ ರಾಜ್ಯದ ಹಿರಿಯ ನಾಯಕರೊಂದಿಗೆ ಸಭೆ ನಡೆಸಿ ಹೈಕಮಾಂಡ್‌ಗೆ ವರದಿ ನೀಡಿದ್ದರು. ಈ ಹಿನ್ನೆಲೆಯಲ್ಲಿ ಪಕ್ಷದ ನಾಯಕತ್ವ ಬದಲಾವಣೆಗೆ ಹೈಕಮಾಂಡ್ ನಿರ್ಧರಿಸಿದ್ದು, ರಾಹುಲ್ ಗಾಂಧಿ ಅವರೊಂದಿಗೆ ದೂರವಾಣಿ ಸಂಭಾಷಣೆ ನಡೆಸಿದ ಬಳಿಕ ರಾಜಾ ವಾರಿಂಗ್ ಅವರು ಎಐಸಿಸಿ ಪ್ರಧಾನ ಕಾರ್ಯದರ್ಶಿ ಕೆ.ಸಿ. ವೇಣುಗೋಪಾಲ್ ಅವರಿಗೆ ರಾಜೀನಾಮೆ ಪತ್ರ ರವಾನಿಸಿದ್ದಾರೆ ಎನ್ನಲಾಗಿದೆ.

## ಯಶವಂತಪುರವರೆಗೂ ಮಡಗಾಂವ್–ಮಂಗಳೂರು "ವಂದೇ ಭಾರತ್" ವಿಸ್ತರಣೆ

**ನವದೆಹಲಿ, ಅ.1:** ಬೆಂಗಳೂರು, ಕರಾವಳಿ ಕರ್ನಾಟಕ ಹಾಗೂ ಗೋವಾ ನಡುವಿನ ರೈಲು ಸಂಪರ್ಕಕ್ಕೆ ಮತ್ತಷ್ಟು ಬಲ ಸಿಕ್ಕಿದೆ. ಮಡಗಾಂವ್–ಮಂಗಳೂರು ನಡುವೆ ಸಂಚರಿಸುತ್ತಿದ್ದ ವಂದೇ ಭಾರತ್ ಎಕ್ಸ್‌ಪ್ರೆಸ್ ಅನ್ನು ಬೆಂಗಳೂರಿನ ಯಶವಂತಪುರದವರೆಗೆ ವಿಸ್ತರಿಸಲಾಗಿದೆ. ಹಾಸನ, ಮಂಗಳೂರು ಜಂಕ್ಷನ್, ಉಡುಪಿ ಹಾಗೂ ಕಾರವಾರ ಮಾರ್ಗವಾಗಿ ಈ ರೈಲು ಸಂಚರಿಸಲಿದೆ.

ಕೇಂದ್ರ ಭಾರೀ ಕೈಗಾರಿಕೆ ಮತ್ತು ಉಕ್ಕು ಸಚಿವ ಎಚ್.ಡಿ. ಕುಮಾರಸ್ವಾಮಿ ಅವರು ಬೆಂಗಳೂರು–ಮಡಗಾಂವ್ ನಡುವೆ ವಂದೇ ಭಾರತ್ ರೈಲು ಸೇವೆ ಆರಂಭಿಸುವಂತೆ ಕೇಂದ್ರ ರೈಲ್ವೆ ಸಚಿವ ಅಶ್ವಿನಿ ವೈಷ್ಣವ್ ಅವರಿಗೆ ಪ್ರಸ್ತಾವನೆ ಸಲ್ಲಿಸಿದ್ದರು. ಬೆಂಗಳೂರು ಹಾಗೂ ಕರಾವಳಿ ಕರ್ನಾಟಕದ ಪ್ರಮುಖ ವಾಣಿಜ್ಯ, ಬಂದರು ಮತ್ತು ಪ್ರವಾಸೋದ್ಯಮ ಕೇಂದ್ರಗಳ ನಡುವೆ ಉತ್ತಮ ಸಂಪರ್ಕ ಕಲ್ಪಿಸುವುದರ ಜೊತೆಗೆ ಗೋವಾದೊಂದಿಗೆ ಅಂತರ್‌ರಾಜ್ಯ ರೈಲು ಸಂಪರ್ಕ ಬಲಪಡಿಸುವ ಅಗತ್ಯವನ್ನೂ ಕುಮಾರಸ್ವಾಮಿ ಒತ್ತಿಹೇಳಿದ್ದರು. ಅವರ ಪ್ರಸ್ತಾವನೆಗೆ ಸ್ಪಂದಿಸಿರುವ ರೈಲ್ವೆ ಸಚಿವ ಅಶ್ವಿನಿ ವೈಷ್ಣವ್, ಈಗಾಗಲೇ ಮಡಗಾಂವ್–ಮಂಗಳೂರು ನಡುವೆ ಸಂಚರಿಸುತ್ತಿರುವ ವಂದೇ ಭಾರತ್ ರೈಲನ್ನು ಬೆಂಗಳೂರಿನವರೆಗೆ ವಿಸ್ತರಿಸಿರುವುದಾಗಿ ತಿಳಿಸಿದ್ದಾರೆ. ಇನ್ನು ಮುಂದೆ ಯಶವಂತಪುರ–ಮಂಗಳೂರು–ಮಡಗಾಂವ್ ವಂದೇಭಾರತ್ ಹೆಸರಿನಲ್ಲಿ ಪರಿಷ್ಕೃತ ವೇಳಾಪಟ್ಟಿಯೊಂದಿಗೆ ಸಂಚರಿಸಲಿದೆ ಎಂದು ತಿಳಿಸಿದ್ದಾರೆ.

# ಫಾರ್ಮ್ 6 ಬದಲಾವಣೆ ಜಾರಿಗೆ ಟಿಸಿಎಸ್‌ಗೆ ಅಧಿಕಾರ ಕೊಟ್ಟವರಾರು?

### ಚುನಾವಣಾ ಆಯೋಗಕ್ಕೆ ರಾಹುಲ್ ಗಾಂಧಿ ಪ್ರಶ್ನೆ



**ನವದೆಹಲಿ, ಅ.1:** ಹೊಸ ಮತದಾರರ ನೋಂದಣಿಗೆ ಬಳಸುವ ಆನ್‌ಲೈನ್ ಫಾರ್ಮ್ 6ರಲ್ಲಿ ಮಾಡಲಾದ ಬದಲಾವಣೆಗಳ ಕುರಿತು ಕಾಂಗ್ರೆಸ್ ನಾಯಕ ರಾಹುಲ್ ಗಾಂಧಿ ಗುರುವಾರ ಚುನಾವಣಾ ಆಯೋಗವನ್ನು ಪ್ರಶ್ನಿಸಿದ್ದಾರೆ. ಈ ಬದಲಾವಣೆಗಳನ್ನು ಜಾರಿಗೊಳಿಸಲು ಟಾಟಾ ಕನ್ಸಲ್ಟೆನ್ಸಿ ಸರ್ವಿಸಸ್ (ಟಿಸಿಎಸ್) ಗೆ ಅಧಿಕಾರ ನೀಡಿದವರು ಯಾರು ಮತ್ತು ಕಂಪನಿಯೊಳಗೆ ಇದಕ್ಕೆ ಅನುಮೋದನೆ ನೀಡಿದವರು ಯಾರು ಎಂದು ಪ್ರಶ್ನಿಸಿದ್ದಾರೆ. ಚುನಾವಣಾ ಆಯೋಗದ ಆಯುಕ್ತರೇ ದಾಖಲಿಸಿರುವಂತೆ, ಆನ್‌ಲೈನ್ ಫಾರ್ಮ್ 6 ಅನ್ನು ಕಾನೂನುಬಾಹಿರವಾಗಿ ಬದಲಾಯಿಸಲಾಗಿದೆ. ಆ ಬದಲಾವಣೆಯನ್ನು ಮಾಡಲು ಟಾಟಾ ಕನ್ಸಲ್ಟೆನ್ಸಿ ಸರ್ವಿಸಸ್‌ಗೆ ಚುನಾವಣಾ ಆಯೋಗದಲ್ಲಿ ಆಜ್ಞಾಪಿಸಿದವರು ಯಾರು" ಎಂದು ಪ್ರಶ್ನಿಸಿದ್ದಾರೆ.

ಭವಿಷ್ಯದ ಚುನಾವಣೆಗಳನ್ನು ಮತಪತ್ರ ಮೂಲಕ ನಡೆಸಬೇಕು ಹಾಗೂ ಎಸ್‌ಐಆರ್ ಮತ್ತು ಚುನಾವಣಾ "ಕ್ರಮಕೇಡು"ಗಳ ಪ್ರಕರಣಗಳನ್ನು ತ್ವರಿತವಾಗಿ ಇತ್ಯರ್ಥಪಡಿಸುವಂತೆ ಸುಪ್ರೀಂ ಕೋರ್ಟ್‌ಗೆ ಮನವಿ ಮಾಡಿರುವ ವಿರೋಧ ಪಕ್ಷಗಳ 'ಇಂಡಿಯಾ' ಒಕ್ಕೂಟವು, ಎಲ್ಲಾ ಜಿಲ್ಲೆಗಳಲ್ಲಿ ಜಂಟಿ 'ಪ್ರಜಾಪ್ರಭುತ್ವ ಉಳಿಸಿ' ಮೆರವಣಿಗೆಗಳು ಮತ್ತು ಐದು ಪ್ರಮುಖ ರ್‍ಯಾಲಿಗಳನ್ನು ಘೋಷಿಸಿದ ಮರುದಿನವೇ ರಾಹುಲ್ ಅವರ ಈ ಹೇಳಿಕೆ ಬಂದಿದೆ.

ಚುನಾವಣಾ ಆಯೋಗದ 'ECINET' ಪೋರ್ಟಲ್‌ನಲ್ಲಿ ಫಾರ್ಮ್ 6ರ ಆನ್‌ಲೈನ್ ಆವೃತ್ತಿಗೆ ಸೇರಿಸಲಾದ ಹೆಚ್ಚುವರಿ ಸ್ವಯಂಘೋಷಣಾ ನಮೂನೆಯ ಸುತ್ತ ಈ ವಿವಾದ ಸುತ್ತುತ್ತದೆ. ಈ ಸ್ವಯಂಘೋಷಣೆಯು ಹೊಸ ಅರ್ಜಿದಾರರು, ಅವರ ಪೋಷಕರು ಅಥವಾ ಅಜ್ಜ–ಅಜ್ಜಿಯರನ್ನು ಹಿಂದೆ ನಡೆದ ವಿಶೇಷ ಸತತ ಪರಿಷ್ಕರಣೆಯಲ್ಲಿ ತಯಾರಿಸಲಾದ ಮತದಾರರ ಪಟ್ಟಿಗೆ ಲಿಂಕ್ ಮಾಡುವ ಮಾಹಿತಿಯನ್ನು ಕೇಳಿತ್ತು.

ಮತದಾರರ ಪಟ್ಟಿಯಲ್ಲಿ ಹೆಸರುಗಳನ್ನು ಸೇರಿಸಲು ಬಳಸುವ ಫಾರ್ಮ್ 6ರ ಆನ್‌ಲೈನ್ ಆವೃತ್ತಿಯಲ್ಲಿ ಮಾಡಿದ ಬದಲಾವಣೆಗಳಿಗೆ ಚುನಾವಣಾ ಆಯುಕ್ತರಾದ ಸುಖ್ಬೀರ್ ಸಿಂಗ್ ಸಂಧು ಮತ್ತು ವಿವೇಕ್ ಜೋಶಿ ಅವರು ಆಕ್ಷೇಪಣೆ ಎತ್ತಿದ್ದಾರೆ ಎಂದು ತನಿಖಾ ವರದಿಯೊಂದು ಬಹಿರಂಗಪಡಿಸಿದೆ.

ಫಾರ್ಮ್ 6 ಶಾಸನಬದ್ಧ ನಮೂನೆಯಾಗಿದ್ದು, 1960ರ ಮತದಾರರ ನೋಂದಣಿ ನಿಯಮಗಳಿಗೆ ತಿದ್ದುಪಡಿ ತರದೆ ಅದನ್ನು ಬದಲಾಯಿಸಲು ಸಾಧ್ಯವಿಲ್ಲ ಎಂದು ಅವರು ಹೇಳಿದ್ದಾರೆ. ಸಂಧು ಅವರು ನಂತರ ಈ ಹೆಚ್ಚುವರಿ ಸ್ವಯಂಘೋಷಣೆಯನ್ನು ತೆಗೆದುಹಾಕಿ, ಮೂಲ ನಮೂನೆಯನ್ನು ಮರುಸ್ಥಾಪಿಸುವಂತೆ ಕರೆ ನೀಡಿದ್ದರು.

ಎಸ್‌ಐಆರ್ ಪ್ರಕ್ರಿಯೆ ಪೂರ್ಣಗೊಂಡಿರುವ ರಾಜ್ಯಗಳಲ್ಲಿ ಫಾರ್ಮ್ 6 ರಿಂದ ಈ ಹೆಚ್ಚುವರಿ ಎಸ್‌ಐಆರ್ ಸಂಬಂಧಿತ ಸ್ವಯಂಘೋಷಣೆಯನ್ನು ಚುನಾವಣಾ ಆಯೋಗವು ಈಗ ತೆಗೆದುಹಾಕಿದೆ. ಆದರೆ ಪರಿಷ್ಕರಣೆ ಕಾರ್ಯ ಇನ್ನೂ ನಡೆಯುತ್ತಿರುವ ರಾಜ್ಯಗಳಲ್ಲಿ ಪೋರ್ಟಲ್‌ನಲ್ಲಿ ಈ ಘೋಷಣೆ ಮುಂದುವರಿದಿದೆ. ಆದಾಗ್ಯೂ, ಅಭಿಪ್ರಾಯ ಭೇದಗಳು ಮತ್ತು ಅವಲೋಕನಗಳು ಸಂಸ್ಥೆಯೊಳಗಿನ ಸುದೀರ್ಘ ಚರ್ಚೆಗಳ ಸಾಮಾನ್ಯ ಭಾಗವಾಗಿವೆ ಎಂದು ಚುನಾವಣಾ ಆಯೋಗ ಸ್ಪಷ್ಟಪಡಿಸಿದೆ. ತನ್ನ ಆದೇಶಗಳು ಸಂಪೂರ್ಣ ಕಾನೂನು ಸಿಂಧುತ್ವವನ್ನು ಹೊಂದಿದ್ದು, ಸ್ಥಾಪಿತ ಶಾಸನಬದ್ಧ ಪ್ರಕ್ರಿಯೆಗಳನ್ನು ಅನುಸರಿಸುತ್ತವೆ ಎಂದೂ ಅದು ಹೇಳಿದೆ.

> **ಮೋದಿ-ಶಾ ಸಂಚು**
>
> 
>
> ಈ ಬದಲಾವಣೆಗಳನ್ನು ಪ್ರಧಾನಿ ನರೇಂದ್ರ ಮೋದಿ ಮತ್ತು ಕೇಂದ್ರ ಗೃಹ ಸಚಿವ ಅಮಿತ್ ಶಾ ಅವರು "ಸಂಚು ರೂಪಿಸಿ ಮಾಡಿದ್ದಾರೆ" ಎಂದು ಕಾಂಗ್ರೆಸ್ ಪ್ರಧಾನ ಕಾರ್ಯದರ್ಶಿ (ಸಂಪರ್ಕ) ಜೈರಾಮ್ ರಮೇಶ್ ಆರೋಪಿಸಿದ್ದಾರೆ. ಅವರ ಈ ಆರೋಪ ಸ್ವತಂತ್ರವಾಗಿ ಸಾಬೀತಾಗಿಲ್ಲ. ಜೆನ್ ಝಿ ಮತದಾರರನ್ನು ಮತದಾರರ ಪಟ್ಟಿಯಿಂದ ತೆಗೆದುಹಾಕಲು 2026 ರ ಜುಲೈ ಮಧ್ಯದಲ್ಲಿ ಮುಖ್ಯ ಚುನಾವಣಾ ಆಯುಕ್ತರು ಅಸಂವಿಧಾನಿಕವಾಗಿ ಫಾರ್ಮ್ 6 ಬದಲಾವಣೆಗಳನ್ನು ಪರಿಚಯಿಸಿದರು.

ಆದ್ದರಿಂದ ಫಾರ್ಮ್ 6ರ ವಿವಾದವು ಎಸ್‌ಐಆರ್ ಪ್ರಕ್ರಿಯೆ, ಮತದಾರರ ಪಟ್ಟಿ ಪರಿಷ್ಕರಣೆ ಮತ್ತು ECINET ವ್ಯವಸ್ಥೆಯ ಕಾರ್ಯನಿರ್ವಹಣೆಯ ಕುರಿತು ವಿರೋಧ ಪಕ್ಷಗಳು ಮತ್ತು ಚುನಾವಣಾ ಆಯೋಗದ ನಡುವಿನ ವ್ಯಾಪಕ ಸಂಘರ್ಷದಲ್ಲಿ ಮತ್ತೊಂದು ಪ್ರಮುಖ ಘಟನೆಯಾಗಿ ಹೊರಹೊಮ್ಮಿದೆ.

### ಬೆಳಗಾವಿಯ 15,000 ಮತದಾರರ ಹೆಸರು ಕೈಬಿಡುವ ಯತ್ನ ಎಫ್‌ಐಆರ್ ದಾಖಲಿಸಲು ರಾಹುಲ್‌ಗಾಂಧಿ ಆಗ್ರಹ

ಕರ್ನಾಟಕದ ಬೆಳಗಾವಿಯಲ್ಲಿ ಬೃಹತ್ ಪ್ರಮಾಣದಲ್ಲಿ 'ಫಾರ್ಮ್ 7' ಅರ್ಜಿಗಳನ್ನು ಸಲ್ಲಿಸುವ ಮೂಲಕ ಸುಮಾರು 15,000 ಮತದಾರರ ಹೆಸರುಗಳನ್ನು ಮತದಾರರ ಪಟ್ಟಿಯಿಂದ ತೆಗೆದುಹಾಕಲು ಸಂಘಟಿತ ಯತ್ನ ನಡೆಯುತ್ತಿದೆ ಎಂದು ಲೋಕಸಭೆಯ ವಿರೋಧ ಪಕ್ಷದ ನಾಯಕ ರಾಹುಲ್ ಗಾಂಧಿ ಗುರುವಾರ ಆರೋಪಿಸಿದ್ದಾರೆ. ಅಲ್ಲದೆ, ಇದಕ್ಕೆ ಕಾರಣರಾದವರ ವಿರುದ್ಧ ಎಫ್‌ಐಆರ್ ದಾಖಲಿಸಿ ಕಠಿಣ ಕ್ರಮ ಕೈಗೊಳ್ಳಬೇಕೆಂದು ಆಗ್ರಹಿಸಿದ್ದಾರೆ. ಈ ಕುರಿತು ಎಕ್ಸ್‌ನಲ್ಲಿ ಪೋಸ್ಟ್ ಮಾಡಿರುವ ಅವರು, ಸೆಪ್ಟೆಂಬರ್ 22, 23 ಮತ್ತು 24 ರಂದು ಮೂರು ದಿನಗಳ ಅವಧಿಯಲ್ಲಿ 15,000 ಮತದಾರರ ಹೆಸರುಗಳನ್ನು ಪಟ್ಟಿಯಿಂದ ತೆಗೆದುಹಾಕುವ ಉದ್ದೇಶದಿಂದ 'ಫಾರ್ಮ್ 7' ಅರ್ಜಿಗಳ "ಪ್ರವಾಹವೇ" ಹರಿದುಬಂದಿದೆ ಎಂದು ಹೇಳಿದ್ದಾರೆ. ಈ ಕೂಡಲೇ ತಪ್ಪಿತಸ್ಥರ ವಿರುದ್ಧ ಕಾನೂನು ಕ್ರಮ ಜರುಗಿಸಬೇಕು ಮತ್ತು ಎಫ್‌ಐಆರ್ ದಾಖಲಿಸಬೇಕು ಎಂದು ಅವರು ಒತ್ತಾಯಿಸಿದ್ದಾರೆ.

# ಕೆಪಿಎಸ್ಸಿ ನೇಮಕಾತಿ ಅಕ್ರಮ ತನಿಖೆ ಎಸ್‌ಐಟಿ ರಚನೆಗೆ ಸುಪ್ರೀಂ ತಡೆ

**ನವದೆಹಲಿ, ಅ.1:** ರಾಜ್ಯದಲ್ಲಿ ತೀವ್ರ ಸಂಚಲನ ಮೂಡಿಸಿರುವ ಕೆಪಿಎಸ್ಸಿ ನೇಮಕಾತಿ ಹಗರಣದ ತನಿಖೆಗೆ ಸಂಬಂಧಿಸಿದಂತೆ ಕರ್ನಾಟಕ ಹೈಕೋರ್ಟ್ ನೀಡಿದ್ದ ಮಹತ್ವದ ಆದೇಶಕ್ಕೆ ಸುಪ್ರೀಂ ಕೋರ್ಟ್ ಮಧ್ಯಂತರ ತಡೆ ನೀಡಿದೆ.

ಎಡಿಜಿಪಿ ಅಲೋಕ್ ಕುಮಾರ್ ನೇತೃತ್ವದಲ್ಲಿ ವಿಶೇಷ ತನಿಖಾ ತಂಡ ರಚಿಸುವಂತೆ ಹೈಕೋರ್ಟ್ ನೀಡಿದ್ದ ಆದೇಶವನ್ನು ಪ್ರಶ್ನಿಸಿ ರಾಜ್ಯ ಸರ್ಕಾರ ಸಲ್ಲಿಸಿದ್ದ ಮೇಲ್ಮನವಿ ಅರ್ಜಿಯ ವಿಚಾರಣೆ ಇಂದು ನಡೆಸಿತು. ರಾಜ್ಯ ಸರ್ಕಾರದ ಪರವಾಗಿ ಹಿರಿಯ ವಕೀಲ ಕಪಿಲ್ ಸಿಬಲ್ ವಾದ ಮಂಡಿಸಿ, ಪ್ರಕರಣ ಸಂಬಂಧ ಎಫ್‌ಐಆರ್ ದಾಖಲಾದ ದಿನದಿಂದಲೂ ಸಿಐಡಿ ಅಧಿಕಾರಿಗಳು ಸಮಗ್ರ ಹಾಗೂ ನಿಷ್ಪಕ್ಷಪಾತ ತನಿಖೆ ನಡೆಸುತ್ತಿದ್ದಾರೆ. ಕೆಲವು ಅಭ್ಯರ್ಥಿಗಳು ಸಿಬಿಐ ತನಿಖೆಗೆ ಕೋರಿ ಅರ್ಜಿ ಸಲ್ಲಿಸಿದ್ದರು.



ಆದರೆ ಹೈಕೋರ್ಟ್ ಅನಿರೀಕ್ಷಿತವಾಗಿ ಎಸ್‌ಐಟಿ ರಚನೆಗೆ ಆದೇಶಿಸಿದೆ. ಹೈಕೋರ್ಟ್ ಸೂಚಿಸಿರುವ ಐಪಿಎಸ್ ಅಧಿಕಾರಿ ಅಲೋಕ್ ಕುಮಾರ್ ಈ ಹಿಂದೆ ಫೋನ್ ಕದ್ದಾಲಿಕೆ ಪ್ರಕರಣದಲ್ಲಿ ಸಿಬಿಐ ವಿಚಾರಣೆ ಎದುರಿಸಿದ್ದರು ಎಂದು ಆಕ್ಷೇಪ ವ್ಯಕ್ತಪಡಿಸಿ, ಅಧಿಕಾರಿಯ ಮೇಲಿರುವ ಆರೋಪಗಳ ಕುರಿತ ದಾಖಲೆಗಳನ್ನು ನ್ಯಾಯಪೀಠದ ಗಮನಕ್ಕೆ ತಂದರು.

ಇದಕ್ಕೆ ತೀವ್ರ ವಿರೋಧ ವ್ಯಕ್ತಪಡಿಸಿದ ಅಭ್ಯರ್ಥಿಗಳ ಪರ ವಕೀಲರು, ಹೈಕೋರ್ಟ್ ಇಡೀ ರಾಜ್ಯದ ಅರ್ಹ ಅಧಿಕಾರಿಗಳನ್ನು ಪರಿಶೀಲಿಸಿ ಸಮರ್ಥ ತನಿಖೆಗಾಗಿ ಎಸ್‌ಐಟಿ ರಚನೆ ಮಾಡಿದೆ. ಹೀಗಿರುವಾಗ ಸರ್ಕಾರಕ್ಕೆ ಈ ತನಿಖೆಗೆ ಹಿಂಜರಿಕೆ ಏಕೆ, ಸರ್ಕಾರಕ್ಕೆ ತಮಗೆ ಬೇಕಾದ ಅಧಿಕಾರಿಗಳನ್ನೇ ನೇಮಿಸಬೇಕೆಂಬ ಉದ್ದೇಶವಿದೆಯೇ ಅಧಿಕಾರಿಗಳ ಮೇಲೆ ಆಕ್ಷೇಪವಿದ್ದರೆ ಹೈಕೋರ್ಟ್‌ಗೆ ಹೋಗಬೇಕಿತ್ತು ಎಂದು ಬಲವಾಗಿ ವಾದಿಸಿದರು.

ಉಭಯ ಕಡೆಯ ವಾದ ಆಲಿಸಿದ ಸುಪ್ರೀಂ ಕೋರ್ಟ್‌ನ ವಿಭಾಗೀಯ ಪೀಠ, ನಿರ್ದಿಷ್ಟ ಅಧಿಕಾರಿಯ ನೇಮಕದ ಬಗ್ಗೆ ಆಕ್ಷೇಪಗಳಿದ್ದರೆ ಹೈಕೋರ್ಟ್ ಮೊರೆ ಹೋಗಬಹುದಿತ್ತು, ನಾವು ಇಂತಹ ಆಡಳಿತಾತ್ಮಕ ಆಯ್ಕೆಗಳಲ್ಲಿ ಸುಲಭವಾಗಿ ಮಧ್ಯಪ್ರವೇಶಿಸುವುದಿಲ್ಲ ಎಂದು ಅಭಿಪ್ರಾಯಪಟ್ಟಿತು.

ಕೊನೆಗೆ ಸರ್ಕಾರದ ಆಕ್ಷೇಪವನ್ನು ಪರಿಗಣಿಸಿದ ನ್ಯಾಯಪೀಠ, ಅಧಿಕಾರಿಯ ವಿರುದ್ಧದ ಆರೋಪಗಳಿಗೆ ಸಂಬಂಧಿಸಿದ ಮಾಹಿತಿಯನ್ನು ಮುಂದಿನ ವಿಚಾರಣೆ ವೇಳೆ ಮುಚ್ಚಿದ ಲಕೋಟೆಯಲ್ಲಿ ಸಲ್ಲಿಸುವಂತೆ ಸೂಚಿಸಿತು.ಎಸ್‌ಐಟಿ ರಚನೆಗೆ ಸರ್ಕಾರಕ್ಕೆ ಸಮ್ಮತವಿರುವ ಇತರ ಸಮರ್ಥ ಅಧಿಕಾರಿಗಳ ಪಟ್ಟಿಯನ್ನು ಒದಗಿಸಲು ರಾಜ್ಯ ಸರ್ಕಾರಕ್ಕೆ ಅವಕಾಶ ನೀಡಿತು.ಅಂತಿಮವಾಗಿ ಹೈಕೋರ್ಟ್ ನೀಡಿದ್ದ ಆದೇಶಕ್ಕೆ ಮಧ್ಯಂತರ ತಡೆ ನೀಡಿ ಮುಂದಿನ ವಿಚಾರಣೆಯನ್ನು ಅಕ್ಟೋಬರ್ 12ಕ್ಕೆ ಮುಂದೂಡಿತು.

ಕಳೆದ ಹತ್ತು ದಿನಗಳಿಂದಲೂ ಸಿಐಡಿ ಪೊಲೀಸರು ತನಿಖೆಯನ್ನು ತಾತ್ಕಾಲಿಕವಾಗಿ ಸ್ಥಗಿತಗೊಳಿಸಿದ್ದರು. ಇದೀಗ ಸುಪ್ರೀಂ ಕೋರ್ಟ್ ಎಸ್‌ಐಟಿ ರಚನೆಗೆ ತಡೆ ನೀಡಿರುವುದರಿಂದ, ಅಂತಿಮವಾಗಿ ಪ್ರಕರಣದ ತನಿಖೆಯನ್ನು ಸಿಐಡಿಯೇ ಮುಂದುವರಿಸಲಿದೆಯೇ ಅಥವಾ ಹೊಸ ಅಧಿಕಾರಿಗಳನ್ನೊಳಗೊಂಡ ಎಸ್‌ಐಟಿ ರಚನೆಯಾಗಲಿದೆಯೇ ಎಂಬ ಕುತೂಹಲ ಮುಂದುವರಿದಿದೆ.

# ವರದಾ-ಬೇಡ್ತಿ ನದಿ ಜೋಡಣೆ: ತ್ವರಿತವಾಗಿ ಡಿಪಿಆರ್ ಸಿದ್ಧಪಡಿಸಿ ಕೇಂದ್ರಕ್ಕೆ ಕಳುಹಿಸಿ

### ಸಿಎಂ ಹಾಗೂ ಜಲಸಂಪನ್ಮೂಲ ಸಚಿವರಿಗೆ ಸಂಸದ ಬಸವರಾಜ ಬೊಮ್ಮಾಯಿ ಮನವಿ



**ಬೆಂಗಳೂರು, ಅ.1:** ವರದಾ ಬೇಡ್ತಿ ನದಿ ಜೋಡಣೆಯ ಡಿಪಿಆರ್ ತ್ವರಿತಗತಿಯಲ್ಲಿ ಸಿದ್ಧಪಡಿಸಿ ಕೇಂದ್ರ ಸರ್ಕಾರಕ್ಕೆ ಕಳುಹಿಸಿ ಮತ್ತು ಈ ವಿಷಯದ ಕುರಿತು ಸುದೀರ್ಘವಾಗಿ ಚರ್ಚಿಸಲು ಹಾವೇರಿ ಜಿಲ್ಲೆಯ ಎಲ್ಲ ಸಚಿವರು, ಶಾಸಕರು, ವಿಧಾನ ಪರಿಷತ್ ಸದ್ಯಸ್ಯರು ಮತ್ತು ಇತರ ಪ್ರಮುಖರು ಹೋರಾಟಗಾರರ ಒಂದು ಸಭೆಯನ್ನು ಬೆಂಗಳೂರಿನಲ್ಲಿ ನಡೆಸಿ ನಮ್ಮ ಭಾಗದ ಜನರ ಸಂಕಷ್ಟವನ್ನು ನಿವಾರಣೆ ಮಾಡಲು ಸ್ಪಷ್ಟವಾದ ನಿರ್ಣಯಗಳನ್ನು ಮಾಡಬೇಕೆಂದು ಮುಖ್ಯಮಂತ್ರಿ ಡಿ.ಕೆ. ಶಿವಕುಮಾರ್ ಹಾಗೂ ಜಲ ಸಂಪನ್ಮೂಲ ಸಚಿವ ಎನ್. ಚಲುವರಾಯಸ್ವಾಮಿ ಅವರಿಗೆ ಮಾಜಿ ಮುಖ್ಯಮಂತ್ರಿ ಹಾಗೂ ಸಂಸದ ಬಸವರಾಜ ಬೊಮ್ಮಾಯಿ ಮನವಿ ಮಾಡಿದ್ದಾರೆ.

ಈ ಕುರಿತು ಪತ್ರ ಬರೆದಿರುವ ಅವರು, ರಾಜ್ಯದಲ್ಲಿ ಈಗ ತೀವ್ರವಾದಂತಹ ಬರಗಾಲದ ಬರೆ ಅನುಭವಿಸುತ್ತಿದ್ದೇವೆ. ಇದರಿಂದ ರಾಜ್ಯದ ಜನ ಸಾಮಾನ್ಯರ ಬದುಕು ಅತ್ಯಂತ ಕಷ್ಟಕರವಾಗಿದೆ ಬರುವ ದಿನಗಳಲ್ಲಿ ಕುಡಿಯುವ ನೀರು ದನಕರುಗಳಿಗೆ ನೀರು ಮತ್ತು ಮೇವು ಕೂಡ ಸಿಗದ ಭೀಕರವಾದ ಪರಿಸ್ಥಿತಿ ಎದುರಿಸಬೇಕಾಗಿದೆ. ಮಳೆಯನ್ನೇ ನಂಬಿಕೊಂಡಿರುವ ರೈತರು ಅಪಾರ ಕಷ್ಟ ನಷ್ಟ ನಿರಂತರ ಅನುಭವಿಸುತ್ತಿದ್ದಾರೆ.

ಕಿತ್ತೂರು ಕರ್ನಾಟಕ ಮತ್ತು ಕಲ್ಯಾಣ ಕರ್ನಾಟಕ ಭಾಗದಲ್ಲಿ ಬರ ಅತ್ಯಂತ ಸಾಮಾನ್ಯ ವಿಷಯವಾಗಿದೆ ಕಳೆದ ಮೂವತ್ತು ವರ್ಷದಲ್ಲಿ 17 ವರ್ಷ ಬರವನ್ನು ಉತ್ತರ ಕರ್ನಾಟಕದ ಜನ ಅನುಭವಿಸುತ್ತಿದ್ದಾರೆ. ಬರ ನಿರ್ವಹಣೆ ಅಲ್ಪಾವಧಿಯ ಕೆಲವು ಕ್ರಮಗಳನ್ನು ರಾಜ್ಯ ತೆಗೆದುಕೊಳ್ಳಬೇಕು ಮತ್ತು ಕೇಂದ್ರ ನೆರವಿಗೆ ಬರಬೇಕು ವಿಶೇಷವಾಗಿ ಕುಡಿಯುವ ನೀರು ಮೇವು, ಜನರ ಕೈಗೆ ಕೆಲಸ ಕೊಡುವ ಕೆಲಸವನ್ನು ತಾವು ಮಾಡಬೇಕೆಂದು ಆಗ್ರಹಪಡಿಸುತ್ತಾ ಕೆಲವು ಶಾಶ್ವತವಾದ ಕ್ರಮಗಳನ್ನು ತೆಗೆದುಕೊಳ್ಳಲು ಅತ್ಯಂತ ಸೂಕ್ತಕಾಲವಾಗಿದೆ. ಅದರಲ್ಲಿ ನದಿ ಜೋಡಣೆಯ ಯೋಜನೆ ಅಡಿಯಲ್ಲಿ ಬೆಡ್ತಿ ವರದಾ ಜೋಡಣೆ ಅತ್ಯಂತ ಪ್ರಮುಖವಾಗಿದೆ ಎಂದು ಬೊಮ್ಮಾಯಿ ತಿಳಿಸಿದ್ದಾರೆ.

> **ಪ್ರಮುಖ ಬೇಡಿಕೆಗಳು**
>
> ಗದಗ, ಹಾವೇರಿ, ಕೊಪ್ಪಳ, ರಾಯಚೂರು ಜಿಲ್ಲೆಗಳ ಕುಡಿಯುವ ನೀರು ಮತ್ತು ಕೃಷಿಗೆ ಸುಮಾರು 18 ಟಿಎಂಸಿ ನೀರು ಬಳಕೆ ಮಾಡುವುದು, ಹಾವೇರಿ ಜಿಲ್ಲೆಗೆ ಅದಕ್ಕೆ ಬೇಕಾಗಿರುವ ನೀರನ್ನು ಸಂಗ್ರಹ ಮಾಡಲು ಪ್ರತ್ಯೇಕ ಸಂಗ್ರಹಗಾರ ರಿಸರ್ವಾಯರ್ ನಿರ್ಮಿಸುವ ಬಗ್ಗೆ ಡಿಪಿಆರ್‌ನಲ್ಲಿ ಪ್ರಮುಖವಾಗಿ ಉಲ್ಲೇಖಿಸುವಂತೆ ಮನವಿ ಬೊಮ್ಮಾಯಿ ಮನವಿ ಮಾಡಿದ್ದಾರೆ.

> **ನದಿ ಜೋಡಣೆ ಚರ್ಚಿಸಲು ಸಭೆ ಏರ್ಪಡಿಸಿ**
>
> ಬೇಡ್ತಿ – ವರದಾ ಜೋಡಣೆ ಕೇಂದ್ರದ ನದಿ ಜೋಡಣೆಯ ಯೋಜನೆಯಲ್ಲಿ ಕರ್ನಾಟಕದಲ್ಲಿ ಪ್ರಮುಖವಾಗಿದ್ದು ಈಗಾಗಲೇ ಮಹಾನದಿ, ಗೋದಾವರಿ, ಕೃಷ್ಣಾ, ಕಾವೇರಿ ನದಿ ಯೋಜನೆ ಅಡಿಯಲ್ಲಿ ಇದಕ್ಕೆ 18 ಟಿಎಂಸಿ ನೀರು ಮೀಸಲಿಟ್ಟಿದ್ದು, ಇದನ್ನು ನಮ್ಮ ಸರ್ಕಾರ ಇಟ್ಟಿದ್ದು ತಾವೂ ಕೂಡ ಮೇಲ್ಕಂಡ ವಿಚಾರದಲ್ಲಿ ಕೇಂದ್ರ ಮತ್ತು ಇತರ ರಾಜ್ಯಗಳ ಜೊತೆಗೆ ಎಂಒಯುಗೆ ಒಪ್ಪಿಗೆ ಸೂಚಿಸಿರುವುದು ಉತ್ತಮ ನಿರ್ಧಾರವಾಗಿದೆ. ಈಗ ಎರಡನೇ ಬಾರಿ ಡಿಪಿಆರ್ ಮಾಡುವ ಹಂತಕ್ಕೆ ಬಂದು ಹಲವು ತಿಂಗಳುಗಳು ಕಳೆದರೂ ಡಿಪಿಆರ್ ಪ್ರಗತಿ ವಿಳಂಬವಾಗುತ್ತಿರುವುದು ವಿಷಾದನೀಯ. ಇದರ ಬಗ್ಗೆ ಜಲಸಂಪನ್ಮೂಲ ಇಲಾಖೆ ನಿರ್ಲಕ್ಷ್ಯ ವಹಿಸಿರುವುದು ಬಹಳ ಸ್ಪಷ್ಟ. ಕೂಡಲೇ ಸಂಬಂಧಪಟ್ಟ ಅಧಿಕಾರಿಗಳಿಗೆ ಸೂಚನೆ ಕೊಟ್ಟು ಡಿಪಿಆರ್ ಸಿದ್ಧಪಡಿಸಿ ಕೇಂದ್ರಕ್ಕೆ ಕಳಿಸಿದ್ದೆ. ಅದರೆ ಕೇಂದ್ರ ಸರ್ಕಾರದಿಂದ ಯೋಜನೆಯ ಶೇ.90 ರಷ್ಟು ಅನುದಾನ ನದಿ ಜೋಡಣೆಯ ಯೋಜನೆಯಲ್ಲಿ ನಮಗೆ ಸಿಗುತ್ತದೆ. ಇದನ್ನು ಸದ್ಬಳಕೆ ಮಾಡಬೇಕಾಗಿದೆ ಎಂದು ಬಸವರಾಜ ಬೊಮ್ಮಾಯಿ ಹೇಳಿದ್ದಾರೆ.

ರಾಜೀವ್ ಗಾಂಧಿ ಆರೋಗ್ಯ ವಿಜ್ಞಾನಗಳ ವಿಶ್ವವಿದ್ಯಾಲಯ, ಕರ್ನಾಟಕ

Rajiv Gandhi University of Health Sciences, Karnataka

4th T Block, Jayanagar, Bengaluru-560041

E-mail : registrar@rguhs.ac.in Tel : +91-80-29601928

**PUBLIC NOTICE – 2026**

**ADVISORY TO STUDENTS, PARENTS AND CAREER ASPIRANTS**

**It has come to the notice of the University that certain individuals and institutions, including those operating outside Karnataka, are falsely claiming affiliation with Rajiv Gandhi University of Health Sciences (RGUHS) and are using such claims to solicit admissions from students.**

RGUHS was established under an Act of the Karnataka State Legislature, and its jurisdiction is limited to the State of Karnataka. The University has not affiliated any college, institution or course operating outside Karnataka.

The University therefore advises students, parents and career aspirants to exercise utmost caution and rely only on information published through the official RGUHS website and verified social media platforms.

**Students and parents are advised to note:**

- RGUHS has not affiliated any college or institution outside Karnataka.
- RGUHS does not offer any course through correspondence, distance learning or online mode.
- The list of affiliated colleges, approved courses and sanctioned intake must be verified only through official RGUHS platforms.
- Do not rely on information circulated through unofficial websites, social media accounts, individuals or other unauthorized sources.
- RGUHS does not authorize any agent, broker, consultant or middleman to secure admission to its affiliated institutions.
- Admissions to health sciences courses are conducted through KEA or MCC, as applicable, and students should follow only the official admission procedures.
- Any institution or individual falsely claiming RGUHS affiliation should be reported to the University and the appropriate government authorities.

**Students and parents are strongly advised not to pay money or share personal documents with unauthorized individuals or institutions claiming to facilitate RGUHS admissions.**

RGUHS issues this advisory in the public interest to protect students and parents from misleading claims and fraudulent admission practices.

For authentic information regarding admissions, affiliated institutions, courses, sanctioned intake and other academic matters, please refer only to the official RGUHS website and verified social media platforms.

Sd/-
Registrar

DIPR/CP/3030/AKAR/2026-27

**ಡಿ.ಕೆ.ಶಿವಕುಮಾರ್ ಭೇಟಿಮಾಡಿದ ಮೈಸೂರು ಜಿಲ್ಲಾ ಉಸ್ತುವಾರಿ ಸಚಿವ ಯತೀಂದ್ರ ಸಿದ್ದರಾಮಯ್ಯ**

# ಮೈಸೂರು ದಸರಾ ಉದ್ಘಾಟನೆ: ಸಿಎಂಗೆ ಅಧಿಕೃತ ಆಹ್ವಾನ



**ಬೆಂಗಳೂರು, ಅ.1:** ವಿಶ್ವವಿಖ್ಯಾತ ಮೈಸೂರು ದಸರಾ ಮಹೋತ್ಸವದ ಉದ್ಘಾಟನೆಗೆ ಮುಖ್ಯಮಂತ್ರಿ ಡಿ.ಕೆ. ಶಿವಕುಮಾರ್ ಅವರನ್ನು ನಗರಾಭಿವೃದ್ಧಿ ಹಾಗೂ ಮೈಸೂರು ಜಿಲ್ಲಾ ಉಸ್ತುವಾರಿ ಸಚಿವ ಯತೀಂದ್ರ ಸಿದ್ದರಾಮಯ್ಯ ಗುರುವಾರ ಭೇಟಿಮಾಡಿ ಅಧಿಕೃತವಾಗಿ ಆಹ್ವಾನಿಸಿದರು.

ಬೆಂಗಳೂರಿನ ಮುಖ್ಯಮಂತ್ರಿಗಳ ನಿವಾಸದಲ್ಲಿ ಮೈಸೂರು ಜಿಲ್ಲಾಡಳಿತದ ನಿಯೋಗದೊಂದಿಗೆ ಮುಖ್ಯಮಂತ್ರಿ ಅವರನ್ನು ಭೇಟಿಯಾದ ಯತೀಂದ್ರ ಸಿದ್ದರಾಮಯ್ಯ, ಈ ಬಾರಿಯ ನಾಡಹಬ್ಬ ಮೈಸೂರು ದಸರಾ ಮಹೋತ್ಸವದ ಸಿದ್ಧತೆಗಳು, ವಿವಿಧ ಕಾರ್ಯಕ್ರಮಗಳ ಆಯೋಜನೆ ಹಾಗೂ ಪೂರ್ವಭಾವಿ ಕ್ರಮಗಳ ಕುರಿತು ಸೌಹಾರ್ದಯುತವಾಗಿ ಚರ್ಚಿಸಿದರು.

ದಸರಾ ಮಹೋತ್ಸವವನ್ನು ಅರ್ಥಪೂರ್ಣವಾಗಿ ಹಾಗೂ ವೈಭವದಿಂದ ಆಚರಿಸುವ ನಿಟ್ಟಿನಲ್ಲಿ ಜಿಲ್ಲಾಡಳಿತ ಕೈಗೊಂಡಿರುವ ಸಿದ್ಧತೆ ಕುರಿತು ಮುಖ್ಯಮಂತ್ರಿಗೆ ಮಾಹಿತಿ ನೀಡಲಾಯಿತು.

ಈ ಸಂದರ್ಭದಲ್ಲಿ ಮೈಸೂರು ಜಿಲ್ಲಾಧಿಕಾರಿ ಲಕ್ಷ್ಮಿ ಕಾಂತ ರೆಡ್ಡಿ, ಜಿಲ್ಲಾ ಪಂಚಾಯತ್ ಮುಖ್ಯ ಕಾರ್ಯನಿರ್ವಹಣಾಧಿಕಾರಿ ಯುಕೇಶ್ ಕುಮಾರ್, ಮೈಸೂರು ನಗರ ಪೊಲೀಸ್ ಆಯುಕ್ತರಾದ ಸೀಮಾ ಲಾಟ್ಕರ್ ಸೇರಿದಂತೆ ಮೈಸೂರು ಜಿಲ್ಲಾಡಳಿತದ ಹಲವು ಹಿರಿಯ ಅಧಿಕಾರಿಗಳು ಹಾಜರಿದ್ದರು.

# ತುಮಕೂರಿನಲ್ಲಿ 5 ಸಾವಿರ ಕೋಟಿ ಹೂಡಿಕೆಗೆ ರೆನ್ನೆಸಾನ್ಸ್ ಆಸಕ್ತಿ: ಸಚಿವ ಎಂ.ಬಿ.ಪಾಟೀಲ್

**ಬೆಂಗಳೂರು, ಅ.1:** 2025ರಲ್ಲಿ ನಡೆದಿದ್ದ ಇನ್ವೆಸ್ಟ್ ಕರ್ನಾಟಕ ಸಮಾವೇಶದಲ್ಲಿ ಘೋಷಿಸಿದ್ದಂತೆ ಭಾರತ-ಅಮೆರಿಕ ಪಾಲುದಾರಿಕೆಯುಳ್ಳ ರೆನ್ನೆಸಾನ್ಸ್ ಸೋಲಾರ್ ಅಂಡ್ ಎಲೆಕ್ಟ್ರಾನಿಕ್ ಮೆಟೀರಿಯಲ್ಸ್ ಕಂಪನಿಯು ತುಮಕೂರಿನ ಚೆನ್ನೈ- ಬೆಂಗಳೂರು ಇಂಡಸ್ಟ್ರಿಯಲ್ ಕಾರಿಡಾರ್ (ಸಿಬಿಐಸಿ) ಪ್ರದೇಶದಲ್ಲಿ 5,000 ಕೋಟಿ ರೂಪಾಯಿ ಬಂಡವಾಳ ಹೂಡಲು ಆಸಕ್ತಿ ತೋರಿದೆ ಎಂದು ಬೃಹತ್ ಮತ್ತು ಮಧ್ಯಮ ಕೈಗಾರಿಕಾ ಸಚಿವ ಎಂ ಬಿ ಪಾಟೀಲ ಹೇಳಿದ್ದಾರೆ.

ಇಲ್ಲಿನ ಖನಿಜ ಭವನದಲ್ಲಿ ಗುರುವಾರ ತಮ್ಮನ್ನು ಭೇಟಿಯಾದ ರೆನ್ನೆಸಾನ್ಸ್ ಕಂಪನಿಯ ಅಧ್ಯಕ್ಷ ಮತ್ತು ಸಿಇಒ ಡಾ.ಮಿಲಿಂದ್ ಎಸ್ ಕುಲಕರ್ಣಿ ಜತೆ ಅವರು ಸುದೀರ್ಘ ಮಾತುಕತೆ ನಡೆಸಿದರು.

ಈ ಬಗ್ಗೆ ಮಾತನಾಡಿರುವ ಅವರು, ಕಂಪನಿಯು ಸೋಲಾರ್ ಕ್ಷೇತ್ರದಲ್ಲಿ ಸಿಂಗಲ್ ಕ್ರಿಸ್ಟಲ್ ಸಿಲಿಕಾನ್ ಮತ್ತು ವೇಫರ್ ತಯಾರಿಕೆಯಲ್ಲಿ ಹೆಸರು ಮಾಡಿದೆ. ಅದು ಸಿಬಿಐಸಿ ಪ್ರದೇಶದಲ್ಲಿ 5 ಗಿಗಾವ್ಯಾಟ್ ಸಾಮರ್ಥ್ಯದ ಸೋಲಾರ್ ಇನ್-ಗಾಟ್ ಮತ್ತು ವೇಫರ್ ತಯಾರಿಕೆ ಘಟಕ ಸ್ಥಾಪಿಸಲು 100 ಎಕರೆ ಜಾಗ ಕೇಳಿದೆ. ಕಂಪನಿಯ ಉಳಿದ ಬೇಡಿಕೆಗಳನ್ನು ಕುರಿತು ಚರ್ಚಿಸಿ ಅಂತಿಮ ತೀರ್ಮಾನಕ್ಕೆ ಬರಲಾಗುವುದು ಎಂದಿದ್ದಾರೆ.ರೆನ್ನೆಸಾನ್ಸ್ ಕಂಪನಿಯು ತಂತ್ರಜ್ಞರ ನೇಮಕಾತಿ ಆರಂಭಿಸಿರುವ ಉದ್ಯಮ ವಾಗಿದ್ದು, ಚೆನ್ನೈನಲ್ಲಿ ತನ್ನ ಪ್ರಧಾನ ಕಚೇರಿಯನ್ನು ಹೊಂದಿದೆ. ಉದ್ದೇಶಿತ ಸ್ಥಾವರಕ್ಕೆ ಅದು 80 ಮೆಗಾವ್ಯಾಟ್ ವಿದ್ಯುತ್ ಮತ್ತು 1 ಕೋಟಿ ಎಂಎಲ್ ಡಿ ನೀರು ಬೇಕಾಗುತ್ತದೆ ಎಂಬ ಎರಡು ಪ್ರಮುಖ ಅಗತ್ಯಗಳನ್ನು ನಮ್ಮ ಗಮನಕ್ಕೆ ತರಲಾಗಿದೆ. ಇವುಗಳನ್ನು ಸಕಾರಾತ್ಮಕವಾಗಿ ಪರಿಗಣಿಸಲಾಗುವುದು. ಎಲ್ಲವೂ ನಿರೀಕ್ಷೆಯಂತೆ ನಡೆದರೆ 2028ರ ಮಧ್ಯ ಭಾಗದ ವೇಳೆಗೆ ಕಂಪನಿಯು ತನ್ನ ತಯಾರಿಕಾ ಚಟುವಟಿಕೆ ಆರಂಭಿಸಲಿದೆ ಎಂದು ಅವರು ತಿಳಿಸಿದ್ದಾರೆ. ಕಂಪನಿಯು ರಾಜ್ಯ ಸರಕಾರದ ಕಡೆಯಿಂದ ವಿಶೇಷ ಪ್ರೋತ್ಸಾಹನಾ ಭತ್ಯೆಗೂ ಮನವಿ ಮಾಡಿಕೊಂಡಿದೆ. ಈ ಕುರಿತು ಉನ್ನತ ಮಟ್ಟದಲ್ಲಿ ಚರ್ಚೆ ಪ್ರಗತಿಯಲ್ಲಿದೆ ಎಂದು ಪಾಟೀಲ ನುಡಿದಿದ್ದಾರೆ. ಈ ಸಂದರ್ಭದಲ್ಲಿ ಕೈಗಾರಿಕಾ ಇಲಾಖೆಯ ಪ್ರಧಾನ ಕಾರ್ಯದರ್ಶಿ ಸೆಲ್ವಕುಮಾರ್, ಆಯುಕ್ತ ಮಿಷ್ಟ್ಯೂ ಗೋಯಲ್ ಮತ್ತು ಕೆಐಎಡಿಬಿ ಸಿಇಒ ಗೋವಿಂದ ರೆಡ್ಡಿ, ಕೈಗಾರಿಕಾ ಸಚಿವರ ತಾಂತ್ರಿಕ ಸಲಹೆಗಾರ ಅರವಿಂದ ಗಲಗಲಿ ಹಾಜರಿದ್ದರು.



# ಭೀಕರ ಬರ: ತುರ್ತು ಪರಿಹಾರ ಕೋರಿ ಕೇಂದ್ರ ಗೃಹ, ಕೃಷಿ ಸಚಿವರಿಗೆ ಡಿಸಿಎಂ ಪ್ರತ್ಯೇಕ ಪತ್ರ

**ಬೆಂಗಳೂರು, ಅ.1:** ಕರ್ನಾಟಕದಲ್ಲಿ ಭೀಕರ ಬರ ಎದುರಾಗಿದ್ದು, ತುರ್ತು ಪರಿಹಾರ ಕೋರಿ ಕೇಂದ್ರ ಗೃಹ ಸಚಿವ ಅಮಿತ್‌ಶಾ ಹಾಗೂ ಕೃಷಿ ಸಚಿವ ಶಿವರಾಜ್ ಸಿಂಗ್ ಚೌಹಾನ್ ಅವರಿಗೆ ಪ್ರತ್ಯೇಕವಾಗಿ ಪತ್ರ ಬರೆದಿರುವ ರಾಜ್ಯ ಡಿಸಿಎಂ ಡಾ.ಜಿ.ಪರಮೇಶ್ವರ್ ಅವರು, ಕರ್ನಾಟಕಕ್ಕೆ ತುರ್ತು ನೆರವು ಒದಗಿಸುವಂತೆ ಕೋರಿದ್ದಾರೆ.

ಬರದಿಂದ ರೈತರು ಹಾಗೂ ಗ್ರಾಮೀಣ ಜನರ ಜೀವನೋಪಾಯದ ಮೇಲೆ ಉಂಟಾಗುತ್ತಿರುವ ಪರಿಣಾಮವನ್ನು ವಿವರಿಸಿರುವ ಅವರು, ರೈತರಿಗೆ ಸಮಯೋಚಿತ ಹಾಗೂ ಸಮರ್ಪಕ ಪರಿಹಾರ ಒದಗಿಸಲು ರಾಜ್ಯ ಮತ್ತು ಕೇಂದ್ರ ಸರ್ಕಾರಗಳು ಸಮನ್ವಯದಿಂದ ಕಾರ್ಯನಿರ್ವಹಿಸಬೇಕಾದ ಅಗತ್ಯದ ಬಗ್ಗೆ ಪ್ರಸ್ತಾಪಿಸಿದ್ದಾರೆ. ಪರಿಹಾರ ಮಾನದಂಡ ಪರಿಷ್ಕರಣೆಗೆ ಮನವಿ

ಅಮಿತ್ ಶಾ ಅವರಿಗೆ ಬರೆದ ಪತ್ರದಲ್ಲಿ ಎಸ್‌ಡಿಆರ್‌ಎಫ್ ಮತ್ತು ಎನ್‌ಡಿಆರ್‌ಎಫ್ ಅಡಿಯಲ್ಲಿ ನೀಡಲಾಗುವ ನೆರವಿನ ಅಂಶಗಳು ಹಾಗೂ ಮಾನದಂಡಗಳನ್ನು, ವಿಶೇಷವಾಗಿ ರೈತರಿಗೆ ನೀಡುವ ಇನ್ಪುಟ್ ಸಬ್ಸಿಡಿಗೆ ಸಂಬಂಧಿಸಿದ ಮಾನದಂಡಗಳನ್ನು ಶೀಘ್ರ ಪರಿಷ್ಕರಿಸುವಂತೆ ಡಾ. ಜಿ. ಪರಮೇಶ್ವರ ಅವರು ಪತ್ರದಲ್ಲಿ ಮನವಿ ಮಾಡಿದ್ದಾರೆ. ಪ್ರಸ್ತುತ ಜಾರಿಯಲ್ಲಿರುವ ಇನ್ಪುಟ್ ಸಬ್ಸಿಡಿ ಮೊತ್ತವು ಇಂದಿನ ಕೃಷಿವೆಚ್ಚಕ್ಕೆ ಹೋಲಿಸಿದರೆ ಸಮರ್ಪಕವಾಗಿಲ್ಲ. ರೈತರು ಅನುಭವಿಸುವ ನೈಜ ನಷ್ಟದ ಅಲ್ಪಭಾಗವನ್ನಷ್ಟೇ ಇದು ಭರಿಸುತ್ತದೆ ಎಂಬುದನ್ನು ಅವರು ಕೇಂದ್ರದ ಗಮನಕ್ಕೆ ತಂದಿದ್ದಾರೆ. 16ನೇ ಹಣಕಾಸು ಆಯೋಗದ ಅವಧಿ ಆರಂಭವಾಗಿದ್ದು, ಬಾಕಿ ಇರುವ ಪರಿಹಾರ ಮಾನದಂಡಗಳ ಪರಿಷ್ಕರಣೆಯನ್ನು ಆದ್ಯತೆಯ ಮೇರೆಗೆ ಕೈಗೆತ್ತಿಕೊಳ್ಳುವಂತೆ ಕೇಂದ್ರ ಸರ್ಕಾರವನ್ನು ಕೋರಿದ್ದಾರೆ. ರೈತರಿಗೆ ನೀಡಲಾಗುವ ಪರಿಹಾರವು ಪ್ರಸ್ತುತ ಕೃಷಿವೆಚ್ಚ ಹಾಗೂ ಬೆಳೆಹಾನಿಯಿಂದ ಉಂಟಾಗುವ ನೈಜ ಆರ್ಥಿಕ ಪರಿಣಾಮವನ್ನು ಹೆಚ್ಚು ವಾಸ್ತವಿಕವಾಗಿ ಪ್ರತಿಬಿಂಬಿಸಬೇಕು ಎಂದು ಅವರು ಒತ್ತಿ ಹೇಳಿದ್ದಾರೆ. ಕರ್ನಾಟಕದ ಬರ ಸ್ಥಿತಿ ಅಧ್ಯಯನಕ್ಕೆ ಕೇಂದ್ರ ತಂಡ ಆಗಮಿಸಿರುವುದನ್ನು ಪರಮೇಶ್ವರ್ ಸ್ವಾಗತಿಸಿದ್ದಾರೆ. ಬರದ ತೀವ್ರತೆ ಮತ್ತು ವ್ಯಾಪ್ತಿಯನ್ನು ಗಮನದಲ್ಲಿಟ್ಟುಕೊಂಡು ಕೇಂದ್ರದ ಮೌಲ್ಯಮಾಪನ ಪ್ರಕ್ರಿಯೆಯನ್ನು ತ್ವರಿತಗೊಳಿಸಿ, ರಾಜ್ಯಕ್ಕೆ ಅಗತ್ಯ ನೆರವನ್ನು ನೀಡುವ ನಮ್ಮ ಮನವಿಯನ್ನು ಪರಿಗಣಿಸಿ ಶೀಘ್ರವೇ ಪರಿಹಾರ ಬಿಡುಗಡೆಯಾಗುವಂತೆ ಕ್ರಮ ಕೈಗೊಳ್ಳಬೇಕೆಂದು ಅವರು ಕೋರಿದ್ದಾರೆ.

# ಮಳೆ ಕೊರತೆ: ಗ್ರಾಮೀಣ ಅಂತರ್ಜಲ ಮಟ್ಟದ ವಿವರ ಸಂಗ್ರಹಕ್ಕೆ ಖಂಡ್ರೆ ಸೂಚನೆ

**ಬೆಂಗಳೂರು, ಅ.1:** ಮಳೆಯ ಕೊರತೆಯಿಂದ ಗ್ರಾಮೀಣ ಭಾಗದಲ್ಲಿ ಕುಡಿಯುವ ನೀರಿನ ಸಮಸ್ಯೆ ಉಲ್ಬಣಿಸುತ್ತಿರುವ ಹಿನ್ನೆಲೆಯಲ್ಲಿ 5927 ಪಂಚಾಯತಿಗಳ ವ್ಯಾಪ್ತಿಯಲ್ಲಿ ಅಂತರ್ಜಲ ಮಟ್ಟದ ವಿವರವನ್ನು ಸಮರೋಪಾದಿಯಲ್ಲಿ ಸಂಗ್ರಹಿಸುವಂತೆ ಗ್ರಾಮೀಣಾಭಿವೃದ್ಧಿ ಮತ್ತು ಪಂಚಾಯತ್ ರಾಜ್ ಸಚಿವ ಈಶ್ವರ ಖಂಡ್ರೆ ಸೂಚನೆ ನೀಡಿದ್ದಾರೆ.

ವಿಕಾಸಸೌಧದಲ್ಲಿಂದು ಹಿರಿಯ ಅಧಿಕಾರಿಗಳೊಂದಿಗೆ ಸಭೆ ನಡೆಸಿದ ಅವರು, ಕುಡಿಯುವ ನೀರಿನ ಸಮಸ್ಯೆ ಇರುವ ಗ್ರಾಮಗಳ ಸಂಖ್ಯೆಯಲ್ಲಿ ದಿನದಿಂದ ದಿನಕ್ಕೆ ಹೆಚ್ಚಳ ಆಗುತ್ತಿದೆ. ಬೇಸಿಗೆಯಲ್ಲಿ ಪರಿಸ್ಥಿತಿ ಇನ್ನೂ ಬಿಗಡಾಯಿಸುತ್ತದೆ. ಹೀಗಾಗಿ ಮುಂದಿನ ಮುಂಗಾರಿನವರೆಗೆ ಎದುರಾಗಬಹುದಾದ ಕುಡಿಯುವ ನೀರಿನ ಸಮಸ್ಯೆಯನ್ನು ಅಂದಾಜಿಸಿ, ಸಮರ್ಪಕ ಯೋಜನೆ ರೂಪಿಸಿ ಎಂದು ನಿರ್ದೇಶನ ನೀಡಿದರು.

ಪ್ರಸ್ತುತ ಎಷ್ಟು ಗ್ರಾಮಗಳಿಗೆ ಕೊಳವೆಬಾವಿ ಮೂಲಕ ಕುಡಿಯುವ ನೀರು ಪೂರೈಸಲಾಗುತ್ತಿದೆ. ಬೇಸಿಗೆಯಲ್ಲಿ ಎಷ್ಟು ಕೊಳವೆ ಬಾವಿಗಳು ಬತ್ತಿಹೋಗುವ ಸಾಧ್ಯತೆ ಇದೆ. ಇಲ್ಲಿ ಪರ್ಯಾಯ ಜಲ ಮೂಲವೇನು. ಮೇಲ್ಮೈ ನೀರಿನ ಲಭ್ಯತೆ ಇದ್ದಲ್ಲಿ ಅಥವಾ ಖಾಸಗಿ ಕೊಳವೆ ಬಾವಿಗಳನ್ನು ಬಾಡಿಗೆಗೆ ಪಡೆದರೆ ಜಲಪೂರೈಕೆಗೆ ಎಷ್ಟು ಟ್ಯಾಂಕರ್ ಗಳನ್ನು ಬಾಡಿಗೆಗೆ ಪಡೆಯಬೇಕಾಗುತ್ತದೆ ಎಂಬ ಸಂಪೂರ್ಣ ಯೋಜನೆ ರೂಪಿಸುವಂತೆ ತಿಳಿಸಿದರು.

ಅಂತರ್ಜಲ ಹಾಗೂ ಮೇಲ್ಮೈ ಜಲ ಎರಡೂ ಲಭ್ಯವಿಲ್ಲದಂತಹ ಸೂಕ್ಷ್ಮ ಪ್ರದೇಶಗಳಿಗೆ ಸಮೀಪದಲ್ಲಿ ಎಲ್ಲಿ ನೀರಿನ ಲಭ್ಯತೆ ಇದೆ. ಅದನ್ನು ಗ್ರಾಮಗಳಿಗೆ ಪೂರೈಸಲು ಏನೆಲ್ಲಾ ಕ್ರಮ ಕೈಗೊಳ್ಳಬೇಕು ಎಂಬ ಬಗ್ಗೆ ಈಗಿನಿಂದಲೇ ಯೋಜನೆ ರೂಪಿಸುವಂತೆ ತಿಳಿಸಿದರು.

ರಾಜ್ಯದ ಬಹುತೇಕ ಕಡೆ ಮಳೆಯ ಕೊರತೆಯಿಂದ ಕುಡಿಯುವ ನೀರಿನ ಸಮಸ್ಯೆ ಇದ್ದು, ಗ್ರಾಮೀಣ ಜನರಿಗೆ, ಕೈಗಾರಿಕೆ, ಶಾಲೆ, ಕಾಲೇಜು, ವಿವಿಧ ಸಂಸ್ಥೆಗಳಿಗೆ ಹಿತಮಿತವಾಗಿ ನೀರು ಬಳಸುವಂತೆ ಜಾಗೃತಿ ಮೂಡಿಸಲು ಈಶ್ವರ ಖಂಡ್ರೆ ಸೂಚಿಸಿದರು.

# ಗೃಹಜ್ಯೋತಿ ಯೋಜನೆ: ಫಲಾನುಭವಿಗಳ ಪರಿಶೀಲನೆಗೆ 15 ದಿನ ಕಾಲಾವಕಾಶ ಕೋರಿದ ಬೆಸ್ಕಾಂ

**ಬೆಂಗಳೂರು, ಅ.1:** ರಾಜ್ಯ ಕಾಂಗ್ರೆಸ್ ಸರ್ಕಾರದ ಪ್ರಮುಖ ಗ್ಯಾರಂಟಿ ಯೋಜನೆಗಳಲ್ಲಿ ಒಂದಾದ ಗೃಹ ಜ್ಯೋತಿ ಯೋಜನೆಯ ಫಲಾನುಭವಿಗಳ ಪರಿಶೀಲನಾ ಪ್ರಕ್ರಿಯೆ ಬಹುತೇಕ ಪೂರ್ಣಗೊಂಡಿದ್ದು, ಇನ್ನೂ ಪರಿಶೀಲನೆಗೆ ಒಳಪಡದ ಗ್ರಾಹಕರಿಗೆ 15 ದಿನಗಳ ಹೆಚ್ಚುವರಿ ಕಾಲಾವಕಾಶ ನೀಡುವಂತೆ ಬೆಸ್ಕಾಂ ರಾಜ್ಯ ಸರ್ಕಾರಕ್ಕೆ ಮನವಿ ಮಾಡಿದೆ.

ಅರ್ಹ ಕುಟುಂಬಗಳಿಗೆ ತಿಂಗಳಿಗೆ 200 ಯೂನಿಟ್‌ವರೆಗೆ ಉಚಿತ ವಿದ್ಯುತ್ ನೀಡುವ ಗೃಹಜ್ಯೋತಿ ಯೋಜನೆಯ ದುರುಪಯೋಗ ತಡೆಯುವ ಉದ್ದೇಶದಿಂದ ರಾಜ್ಯ ಸರ್ಕಾರ ಫಲಾನುಭವಿಗಳ ಮನೆ–ಮನೆ ಪರಿಶೀಲನೆ ಆರಂಭಿಸಿತ್ತು. ಆರಂಭದಲ್ಲಿ ಒಂದು ತಿಂಗಳ ಕಾಲಾವಕಾಶ ನೀಡಲಾಗಿದ್ದು, ಬಳಿಕ ಸೆಪ್ಟೆಂಬರ್‌ವರೆಗೆ ವಿಸ್ತರಿಸಲಾಗಿತ್ತು.

ಬೆಸ್ಕಾಂ ವ್ಯಾಪ್ತಿಯಲ್ಲಿ ಒಟ್ಟು 95.8 ಲಕ್ಷ ಗೃಹಬಳಕೆ ವಿದ್ಯುತ್ ಗ್ರಾಹಕರಿದ್ದು, ಅವರಲ್ಲಿ 68.9 ಲಕ್ಷ ಮಂದಿ ಗೃಹಜ್ಯೋತಿ ಯೋಜನೆಗೆ ನೋಂದಾಯಿಸಿಕೊಂಡಿದ್ದಾರೆ. ಈ ಪೈಕಿ ಶೇ.98ರಿಂದ 99ರಷ್ಟು ಫಲಾನುಭವಿಗಳ ಪರಿಶೀಲನೆ ಪೂರ್ಣಗೊಂಡಿದೆ ಎಂದು ಬೆಸ್ಕಾಂ ಅಧಿಕಾರಿಗಳು ತಿಳಿಸಿದ್ದಾರೆ. ಆದರೆ, ಪರಿಶೀಲನಾ ಪ್ರಕ್ರಿಯೆ ಯಲ್ಲಿ ಸುಮಾರು 5.5 ಲಕ್ಷ ಗ್ರಾಹಕರು ವೈಯಕ್ತಿಕ ವಿವರಗಳನ್ನು ನೀಡಲು ನಿರಾಕರಿಸಿರುವುದು ಹಾಗೂ ಸುಮಾರು 18 ಲಕ್ಷ ಮನೆಗಳು ಬೀಗ ಹಾಕಿರುವುದು, ಖಾಲಿ ಇರುವುದು ಅಥವಾ ನಿವಾಸಿಗಳನ್ನು ಸಂಪರ್ಕಿಸಲು ಸಾಧ್ಯವಾಗದಿರುವುದು ಕಂಡುಬಂದಿದೆ. ಹೀಗಾಗಿ ಈ ಫಲಾನುಭವಿಗಳ ಅರ್ಹತೆಯನ್ನು ಇನ್ನೂ ಖಚಿತಪಡಿಸಿಕೊಳ್ಳಲು ಸಾಧ್ಯವಾಗಿಲ್ಲ.

ಈ ಹಿನ್ನೆಲೆಯಲ್ಲಿ ಅಂತಹ ಗ್ರಾಹಕರಿಗೆ ಕೊನೆಯದಾಗಿ 15 ದಿನಗಳ ಕಾಲಾವಕಾಶ ನೀಡುವಂತೆ ಬೆಸ್ಕಾಂ ಸರ್ಕಾರದ ಅನುಮತಿ ಕೋರಿದೆ. ಸರ್ಕಾರ ಅನುಮತಿ ನೀಡಿದರೆ, ಸಂಬಂಧಿಸಿದ ಗ್ರಾಹಕರು ಮನೆ–ಮನೆ ಪರಿಶೀಲನೆಗಾಗಿ ಕಾಯುವ ಬದಲು ತಮ್ಮ ಸಮೀಪದ ಬೆಸ್ಕಾಂ ವಿಭಾಗ ಕಚೇರಿಗೆ ತೆರಳಿ ಅಗತ್ಯ ವೈಯಕ್ತಿಕ ವಿವರಗಳು ಹಾಗೂ ಅರ್ಹತೆಯ ದಾಖಲೆಗಳನ್ನು ಸಲ್ಲಿಸಬೇಕಾಗುತ್ತದೆ. ನಿಗದಿತ ಅವಧಿಯೊಳಗೆ ಅರ್ಹತೆಯನ್ನು ದೃಢಪಡಿಸದ ಗ್ರಾಹಕರನ್ನು ಗೃಹ ಜ್ಯೋತಿ ಯೋಜನೆಯ ಫಲಾನುಭವಿಗಳ ಪಟ್ಟಿಯಿಂದ ತೆಗೆದುಹಾಕುವ ಸಾಧ್ಯತೆ ಇದೆ ಎಂದು ಬೆಸ್ಕಾಂ ಅಧಿಕಾರಿಗಳು ತಿಳಿಸಿದ್ದಾರೆ.

# ಟ್ರಾಫಿಕ್ ನಿಯಮ ಉಲ್ಲಂಘನೆ ಪ್ರಕರಣಗಳ ದಂಡ ವಸೂಲಿ ವಿಷಯ

## ಸುಪ್ರೀಂ ಸಲಹೆ ಬಗ್ಗೆ ಸಾರಿಗೆ ಸಚಿವರ ಜತೆ ಚರ್ಚಿಸಿ ಜಾರಿಗೆ ಕ್ರಮ: ಸಚಿವ ಖರ್ಗೆ

**ಬೆಂಗಳೂರು, ಅ.1:** ಟ್ರಾಫಿಕ್ ನಿಯಮ ಉಲ್ಲಂಘನೆ ಪ್ರಕರಣಗಳ ದಂಡ ವಸೂಲಿ ವಿಚಾರದಲ್ಲಿ ಸುಪ್ರೀಂ ಕೋರ್ಟ್ ಸಲಹೆಗಳ ಹಿನ್ನೆಲೆಯಲ್ಲಿ ಮುಂದಿನ ಕ್ರಮಗಳ ಬಗ್ಗೆ ಸಾರಿಗೆ ಸಚಿವರ ಜತೆ ಸಭೆ ನಡೆಸಿ ಜಾರಿಗೆ ಸ್ಪಷ್ಟ ಕಾರ್ಯಯೋಜನೆ ರೂಪಿಸಲಾಗುವುದು ಎಂದು ಗೃಹ ಸಚಿವ ಪ್ರಿಯಾಂಕ್ ಖರ್ಗೆ ತಿಳಿಸಿದ್ದಾರೆ.

ಟ್ರಾಫಿಕ್ ನಿಯಮಗಳನ್ನು ಕಟ್ಟುನಿಟ್ಟಾಗಿ ಜಾರಿಗೆ ತರಲು ಸರ್ಕಾರ ಮುಂದಾದಾಗ ಸಾರ್ವಜನಿಕರಿಂದ ವಿರೋಧ ವ್ಯಕ್ತವಾಗುವ ಸಂದರ್ಭಗಳಿವೆ. ಹೀಗಾಗಿ ನಿಯಮ ಜಾರಿ, ದಂಡ ವಸೂಲಿ ಮತ್ತು ಸಾರ್ವಜನಿಕರ ಸಹಕಾರ ಪಡೆಯುವ ವಿಚಾರಗಳನ್ನು ಗಮನದಲ್ಲಿಟ್ಟುಕೊಂಡು ಮುಂದಿನ ಕ್ರಮ ರೂಪಿಸಬೇಕಿದೆ ಎಂದು ಹೇಳಿದ್ದಾರೆ.ಸಭೆಯಲ್ಲಿ ಟ್ರಾಫಿಕ್ ದಂಡ ವಸೂಲಿ ಮಾತ್ರವಲ್ಲದೆ, ಚಾಲನಾ ಪರವಾನಗಿ ನೀಡುವ ಪ್ರಕ್ರಿಯೆ, ಹೊಸ ನಿಯಮಗಳನ್ನು ಜಾರಿಗೆ ತರುವ ವಿಧಾನ ಹಾಗೂ ನಿಯಮ ಉಲ್ಲಂಘಿಸುವವರ ವಿರುದ್ಧ ಯಾವ ರೀತಿಯ ಕ್ರಮ ಕೈಗೊಳ್ಳಬೇಕು ಎಂಬುದರ ಕುರಿತು ಚರ್ಚೆ ನಡೆಯಲಿದೆ. ಸಭೆಯ ಬಳಿಕ ಸಮಗ್ರ 'ನೀಲಿ ನಕ್ಷೆ' ಸಿದ್ಧಪಡಿಸುವ ಉದ್ದೇಶವಿದೆ ಎಂದಿದ್ದಾರೆ. ಬೆಂಗಳೂರಿನಲ್ಲಿ ಸಂಚಾರ ನಿಯಮಗಳ ಜಾರಿ ಮತ್ತು ದಂಡ ವಸೂಲಿ ವ್ಯವಸ್ಥೆಯನ್ನು ಮತ್ತಷ್ಟು ಪರಿಣಾಮಕಾರಿಯಾಗಿಸುವುದು ಸರ್ಕಾರದ ಮುಂದಿರುವ ಪ್ರಮುಖ ವಿಚಾರವಾಗಿದೆ. ಬಾಕಿ ಇರುವ ಮೊತ್ತದ ವಸೂಲಿಯ ಜತೆಗೆ, ನಿಯಮ ಉಲ್ಲಂಘನೆ ಮರುಕಳಿಸದಂತೆ ಯಾವ ರೀತಿಯ ಕ್ರಮ ಕೈಗೊಳ್ಳಬೇಕು ಎಂಬುದರ ಬಗ್ಗೆಯೂ ಸಭೆಯಲ್ಲಿ ನಿರ್ಧಾರ ಕೈಗೊಳ್ಳುವ ನಿರೀಕ್ಷೆಯಿದೆ. ಬೆಂಗಳೂರಿನಲ್ಲಿ ಮಾತ್ರ ಸುಮಾರು 2,752 ಕೋಟಿ ಮೊತ್ತದ ಟ್ರಾಫಿಕ್ ದಂಡ ಬಾಕಿ ಇದೆ. ಈ ಪೈಕಿ ಇದುವರೆಗೆ 40 ಕೋಟಿ ರೂ. ಮಾತ್ರ ವಸೂಲಾಗಿದೆ ಎಂದು ತಿಳಿಸಿದ್ದಾರೆ.

# ಸಕ್ಕರೆ ಸಂಗ್ರಹಣೆ 1000 ಕ್ವಿಂಟಲ್; ದಾಸ್ತಾನಿಗೆ 15 ದಿನಗಳ ಕಾಲಮಿತಿ ಹಬ್ಬದ ಋತುವಿನಲ್ಲಿ ಮಾನದಂಡ ಪರಿಷ್ಕರಣೆ; ಅ.1 ರಿಂದಲೇ ಅನ್ವಯ

**ನವದೆಹಲಿ,ಅ.1:** ಹಬ್ಬದ ಋತುವಿನಲ್ಲಿ ಗ್ರಾಹಕರಿಗೆ ಸಕ್ಕರೆ ಸುಗಮ ಲಭ್ಯತೆಗಾಗಿ ಕೇಂದ್ರ ಸರ್ಕಾರ ಸಕ್ಕರೆ ದಾಸ್ತಾನು ಮತ್ತು ಸಂಗ್ರಹಣೆ ಮಾನದಂಡವನ್ನು ಪರಿಷ್ಕರಿಸಿದ್ದು, ದಾಸ್ತಾನು ಅವಧಿಯನ್ನು 15 ದಿನಗಳಿಗೆ ಮತ್ತು ಪ್ರಮಾಣವನ್ನು 1000 ಕ್ವಿಂಟಲ್‌ಗೆ ನಿಗದಿಪಡಿಸಿದೆ.

ಹಬ್ಬದ ಋತು ಹಾಗು ಹೊಸ ಸಕ್ಕರೆ ಋತುವಿನ ಆರಂಭದಲ್ಲಿ ಅಕ್ರಮವಾಗಿ ಹೆಚ್ಚಿನ ಸಂಗ್ರಹಣೆ ಹಾಗೂ ಬೆಲೆ ಏರಿಕೆ ತಡೆಗಟ್ಟುವ ನಿಟ್ಟಿನಲ್ಲಿ ಸಮಯೋಚಿತ ಹೆಜ್ಜೆಯಿರಿಸುತ್ತಿರುವ ಕೇಂದ್ರ ಸರ್ಕಾರ, ಇದೀಗ ಸಕ್ಕರೆ ದಾಸ್ತಾನು–ಸಂಗ್ರಹಣೆ ಮಾನದಂಡವನ್ನು ಅಕ್ಟೋಬರ್ 1ರಿಂದಲೇ ಅನ್ವಯಿಸುವಂತೆ ಪರಿಷ್ಕರಿಸಿದೆ.

ಸಕ್ಕರೆ ವಿತರಕರ ದಾಸ್ತಾನು ಅವಧಿಯನ್ನು 15 ದಿನಗಳಿಗೆ ಮಿತಿಗೊಳಿಸಿದ್ದು, 1,000 ಕ್ವಿಂಟಲ್ಗಳಿಗೆ ದಾಸ್ತಾನು ಮಿತಿ ನಿಗದಿಪಡಿಸಿದೆ. ಕೋಲ್ಕತ್ತಾ ಮತ್ತದರ ವಿಸ್ತೃತ ಮಹಾನಗರ ಪ್ರದೇಶಗಳು ಹಾಗೂ ಅಸ್ಸಾಂ ರಾಜ್ಯವನ್ನು ಹೊರತುಪಡಿಸಿ ದೇಶದ ಉಳಿದೆಡೆ ಅ.15ರಿಂದ ನ.30ರವರೆಗೆ ಈ ಪರಿಷ್ಕೃತ ಮಾನದಂಡವನ್ನು ಜಾರಿಗೊಳಿಸಿದೆ. ಸಕ್ಕರೆ ಅಕ್ರಮ ದಾಸ್ತಾನು ಮತ್ತು ಬೆಲೆ ಸ್ಥಿರತೆ ಕಾಪಾಡುವ ಸದುದ್ದೇಶದಿಂದ ಈ ಕ್ರಮ ಕೈಗೊಳ್ಳಲಾಗಿದೆ. ಸಕ್ಕರೆ ವ್ಯಾಪಾರಿಗಳಲ್ಲಿ ದಾಸ್ತಾನು ಸ್ವೀಕರಿಸಿದ ದಿನಾಂಕದಿಂದ 15 ದಿನ ಮೀರಿದ ಅವಧಿಗೆ ದಾಸ್ತಾನು ಇಡುವಂತಿಲ್ಲ. ದೇಶಾದ್ಯಂತ ಯಾವುದೇ ಸಮಯ–ಸ್ಥಳದಲ್ಲಿ ಸಾವಿರ ಕ್ವಿಂಟಲ್‌ಗಿಂತ ಹೆಚ್ಚಿನ ಸಕ್ಕರೆ ದಾಸ್ತಾನು ಹೊಂದಿರಬಾರದು ಎಂದೂ ಗ್ರಾಹಕ ವ್ಯವಹಾರ ಹಾಗೂ ಆಹಾರ ಮತ್ತು ನಾಗರಿಕ ಸರಬರಾಜು ಸಚಿವ ಪ್ರಲ್ಹಾದ ಜೋಶಿ ಕಟ್ಟುನಿಟ್ಟಿನ ಸೂಚನೆ ನೀಡಿದ್ದಾರೆ.

ಕೋಲ್ಕತ್ತಾ ಮತ್ತದರ ವಿಸ್ತೃತ ಮಹಾನಗರ ಪ್ರದೇಶಗಳು ಮತ್ತು ಅಸ್ಸಾಂ ರಾಜ್ಯಕ್ಕೆ ಮಾತ್ರ ಸಕ್ಕರೆ ದಾಸ್ತಾನು ಮಿತಿ 2,000 ಕ್ವಿಂಟಲ್‌ಗೆ ಇದೆ. ಕೋಲ್ಕತ್ತಾ ಉತ್ತರ ಪ್ರದೇಶ, ಮಹಾರಾಷ್ಟ್ರ ಮತ್ತು ಕರ್ನಾಟಕದಿಂದ ಸಕ್ಕರೆ ಪಡೆಯುತ್ತಿದ್ದು, ಈಶಾನ್ಯ ಪ್ರದೇಶ ಸೇರಿದಂತೆ ದೇಶದ ಪೂರ್ವ ಭಾಗಕ್ಕೆ ಪೂರೈಸುತ್ತದೆ. ಭೌಗೋಳಿಕ ನಿರ್ಬಂಧ, ಸಾರಿಗೆ ಮತ್ತು ಈಶಾನ್ಯ ಪ್ರದೇಶದ ಗ್ರಾಹಕರ ಹಿತಾಸಕ್ತಿ ಗಮನದಲ್ಲಿಟ್ಟುಕೊಂಡು ಅಸ್ಸಾಂಗೆ ಹೆಚ್ಚಿನ ಮಿತಿ ನಿಗದಿಪಡಿಸಲಾಗಿದೆ ಎಂದು ತಿಳಿಸಿದ್ದಾರೆ.

**ಚಿಲ್ಲರೆ ಸಕ್ಕರೆ ಬೆಲೆ ಶೇ.15 ಇಳಿಕೆ:** ಕೇಂದ್ರ ಸರ್ಕಾರ ಸಮಯೋಚಿತವಾಗಿ ಸಕ್ಕರೆ ಸುಗಮ ವಹಿವಾಟು ದೃಷ್ಟಿಯಿಂದ ಕೈಗೊಂಡ ಕ್ರಮದಿಂದಾಗಿ ಸಕ್ಕರೆಯ ಸರಾಸರಿ ಚಿಲ್ಲರೆ ಬೆಲೆ ಶೇ.15ರಷ್ಟು ಇಳಿಕೆ ಕಂಡಿದೆ. ಎಕ್ಸ್–ಮಿಲ್ ಸಕ್ಕರೆ ಬೆಲೆ ಸಹ ಶೇ.28ರಷ್ಟು ಇಳಿದಿದೆಯಾದರೂ ಕಳೆದ ಮೂರು ವಾರಗಳಲ್ಲಿ ಸಕ್ಕರೆ ಬೆಲೆ ಸ್ಥಿರವಾಗಿದೆ.

ಸಕ್ಕರೆ ಕಾರ್ಖಾನೆಗಳು, ಡೀಲರ್ಗಳು, ಸಗಟು ವ್ಯಾಪಾರಿಗಳು ಹಾಗೂ ಮಾರುಕಟ್ಟೆಗಳಲ್ಲಿ ಇತರೆ ವರ್ತಕರು ಹೆಚ್ಚಿನ ಸಕ್ಕರೆ ದಾಸ್ತಾನು, ಕೃತಕ ಅಭಾವ ಹಾಗೂ ಊಹಾತ್ಮಕ ವಹಿವಾಟನ್ನು ತಡೆಯಬೇಕೆಂದು ಸಚಿವ ಪ್ರಲ್ಹಾದ ಜೋಶಿ ಅವರು ಕಟ್ಟುನಿಟ್ಟಿನ ನಿರ್ದೇಶನ ನೀಡಿದ್ದಾರೆ.

**ಸಕ್ಕರೆ ಉತ್ಪಾದನೆ ಆರಂಭಿಸಲು ಸೂಚನೆ:** ಸಕ್ಕರೆ ಕಾರ್ಖಾನೆಗಳು ತಮ್ಮ ವ್ಯಾಪ್ತಿಯಲ್ಲಿ ಕೃಷಿ–ಹವಾಮಾನ ಪರಿಸ್ಥಿತಿಗೆ ಅನುಗುಣವಾಗಿ ಉತ್ಪಾದನೆ ಪ್ರಾರಂಭಿಸಲು ಈಗಾಗಲೇ ಸೂಚಿಸಲಾಗಿದೆ. ಅಲ್ಲದೆ, ಆಯಾ ರಾಜ್ಯ ಸರ್ಕಾರಗಳು ಸಹ ಕ್ಷೇತ್ರದ ಪರಿಸ್ಥಿತಿಗಳ ಆಧಾರದ ಮೇಲೆ ಸೂಕ್ತ ಕ್ರಮ ಕೈಗೊಳ್ಳುವಂತೆ ಸೂಚಿಸಲಾಗಿದೆ ಎಂದಿದ್ದಾರೆ.

**ಎಲ್ ನಿನೊ ಪರಿಣಾಮ ಮೇಲ್ವಿಚಾರಣೆ:** ಕೆಲವು ಸಕ್ಕರೆ ಉತ್ಪಾದಿತ ಪ್ರದೇಶಗಳಲ್ಲಿ ಎಲ್‌ನಿನೊ ಪರಿಣಾಮವನ್ನು ಕೇಂದ್ರ ಸರ್ಕಾರ ಮೇಲ್ವಿಚಾರಣೆ ಮಾಡುತ್ತಿದೆ ಮತ್ತು ಸಕ್ಕರೆ ದೇಶೀಯ ಲಭ್ಯತೆ, ಗ್ರಾಹಕರ ಹಿತಾಸಕ್ತಿ ಹಾಗೂ ಕಬ್ಬು ಬೆಳೆಗಾರರ ಹಿತ ಕಾಯುವಲ್ಲಿ ಸಮತೋಲನ ಕಾಯ್ದುಕೊಳ್ಳಲು ಸಕಾಲಿಕವಾಗಿ ಅಗತ್ಯ ಕ್ರಮಗಳನ್ನು ತೆಗೆದುಕೊಳ್ಳುತ್ತದೆ ಎಂದು ಸಚಿವ ಪ್ರಲ್ಹಾದ ಜೋಶಿ ಸ್ಪಷ್ಟಪಡಿಸಿದ್ದಾರೆ.

ದೇಶದ ಕಬ್ಬು ಬೆಳೆಗಾರರು ಮತ್ತು ಗ್ರಾಹಕರು ಭಾರತದ ಸಕ್ಕರೆ ನೀತಿಯ ಎರಡು ಕೇಂದ್ರ ಸ್ತಂಭಗಳು. ಕಬ್ಬು ಬೆಳೆಗಾರರಿಗೆ ಲಾಭದಾಯಕ ಆದಾಯ ದೊರೆಕಿಸಿಕೊಡುವಲ್ಲಿ ಕೇಂದ್ರ ಸರ್ಕಾರ ಬದ್ಧವಾಗಿದೆ. ಅಂತೆಯೇ ಬೆಲೆ ಏರಿಕೆಯಿಂದ ಗ್ರಾಹಕರನ್ನು ರಕ್ಷಿಸಲು ಮತ್ತು ದೇಶಾದ್ಯಂತ ಸಾಕಷ್ಟು ಸಕ್ಕರೆ ಲಭ್ಯತೆ ಇರಿಸಲೂ ಬದ್ಧವಾಗಿದೆ ಎಂದು ಸಚಿವ ಪ್ರಲ್ಹಾದ ಜೋಶಿ ಪುನರುಚ್ಚರಿಸಿದ್ದಾರೆ.

# ಪರಪ್ಪನ ಅಗ್ರಹಾರ ಜೈಲಿನಲ್ಲಿ ಮತ್ತೆ ಮೊಬೈಲ್, ಸಿಮ್‌ಕಾರ್ಡ್ ಪತ್ತೆ



**ಬೆಂಗಳೂರು, ಅ.1:** ಪರಪ್ಪನ ಅಗ್ರಹಾರ ಕೇಂದ್ರ ಕಾರಾಗೃಹದಲ್ಲಿ ಮತ್ತೆ ಹಣ, ಮೊಬೈಲ್, ಸಿಮ್‌ಕಾರ್ಡ್‌ಗಳು ಪತ್ತೆಯಾಗಿವೆ. ಈ ಬಗ್ಗೆ ಜೈಲು ಅಧಿಕಾರಿ ಕೊಟ್ರೇಶ್ ಅವರು ಪರಪ್ಪನ ಅಗ್ರಹಾರ ಪೊಲೀಸ್ ಠಾಣೆಗೆ ದೂರು ನೀಡಿದ್ದಾರೆ.ಜೈಲಿನೊಳಗೆ ನಿಷೇಧಿತ ವಸ್ತುಗಳ ಬಳಕೆ ಆರೋಪದ ಹಿನ್ನಲೆಯಲ್ಲಿ ನಿನ್ನೆ ಕೊಟ್ರೇಶ್ ಅವರು ಕಾರಾಗೃಹದ ಬ್ಯಾರಕ್‌ಗಳನ್ನು ಪರಿಶೀಲನೆ ನಡೆಸಿದಾಗ ಸಿ ಬ್ಯಾರಕ್‌ನಲ್ಲಿ ಒಂದು ಮೊಬೈಲ್, ಮೂರು ಸಿಮ್‌ಕಾರ್ಡ್‌ಗಳು ಪತ್ತೆಯಾಗಿವೆ.ಮೊನ್ನೆ ಅಡುಗೆಮನೆ ಸಮೀಪವಿರುವ ಶೌಚಾಲಯವೊಂದರ ಬಳಿ 8,400 ರೂ. ಹಣ ಪತ್ತೆಯಾಗಿದೆ. ಈ ಹಿನ್ನಲೆಯಲ್ಲಿ ಕೊಟ್ರೇಶ್ ಅವರು ನೀಡಿದ ದೂರಿನನ್ವಯ ಎರಡು ಎಫ್‌ಐಆರ್‌ಗಳು ದಾಖಲಾಗಿದ್ದು, ಪೊಲೀಸರು ತನಿಖೆ ಕೈಗೊಂಡಿದ್ದಾರೆ.ಎಷ್ಟೇ ಕಟ್ಟುನಿಟ್ಟಿನ ನಿಯಮಗಳನ್ನು ಜಾರಿಗೆ ತಂದರೂ ಪರಪ್ಪನ ಅಗ್ರಹಾರ ಜೈಲಿನಲ್ಲಿ ಅಕ್ರಮಗಳಿಗೆ ಬ್ರೇಕ್ ಹಾಕುವುದು ಸವಾಲಾಗಿದೆ.

ಕಾರಾಗೃಹದೊಳಗೆ ನಿಷೇಧಿತ ವಸ್ತುಗಳು ಹೇಗೆ ಒಳಗೆ ಹೋದವು ಎಂಬುವುದು ಪೊಲೀಸರಿಗೆ ಪತ್ತೆಹಚ್ಚುವುದು ಕಷ್ಟಸಾಧ್ಯವಾಗಿದೆ.ಈ ಹಿಂದೆಯೂ ಕಾರಾಗೃಹದ ಮೇಲೆ ಅಧಿಕಾರಿಗಳು ದಾಳಿ ಮಾಡಿದ ಸಂದರ್ಭದಲ್ಲಿ ಮೂರು ಪ್ರಕರಣಗಳಲ್ಲಿ ಆರು ಮೊಬೈಲ್‌ಗಳು ಸಿಕ್ಕಿದ್ದವು.

ಈ ಪ್ರಕರಣಕ್ಕೆ ಸಂಬಂಧಿಸಿದಂತೆ ಮೂವರು ಜೈಲು ಸಿಬ್ಬಂದಿ ಸೇರಿದಂತೆ ಒಂಬತ್ತು ಮಂದಿಯನ್ನು ಬಂಧಿಸಿದ್ದರು.ಇದೀಗ ಮತ್ತೆ ಜೈಲಿನೊಳಗೆ ಹಣ, ಮೊಬೈಲ್, ಸಿಮ್ ಕಾರ್ಡ್‌ಗಳು ಪತ್ತೆಯಾಗಿರುವುದು ಕಾರಾಗೃಹ ಸಿಬ್ಬಂದಿಗಳ ಕಾರ್ಯವೈಖರಿಯನ್ನು ಪ್ರಶ್ನಿಸುವಂತಾಗಿದೆ.

# ನಾಳೆ ವಿದುಷಿ ಶೀತಲ್ ಹೇಮಂತ್ ಅವರಿಂದ ಭಾವ, ಭಕ್ತಿ, ಲಯದ ಸಂಗಮ: ಸಮರ್ಪಣ್ ವಿಶೇಷ ಭರತನಾಟ್ಯ ನೃತ್ಯ ಸಂಜೆ

**ಬೆಂಗಳೂರು,ಅ.1:** ಭಾರತೀಯ ಶಾಸ್ತ್ರೀಯ ನೃತ್ಯದ ಭಾವಾಭಿನಯ, ಲಯಬದ್ಧ ಹೆಜ್ಜೆ ಹಾಗೂ ಸೌಂದರ್ಯವನ್ನು ಒಂದೇ ವೇದಿಕೆಯಲ್ಲಿ ಅನಾವರಣಗೊಳಿಸುವ ಸಮರ್ಪಣ್–ಭರತನಾಟ್ಯ ನೃತ್ಯ ಸಂಜೆ ಅ. 3ರಂದು ಶನಿವಾರ ಸಂಜೆ 5.30ಕ್ಕೆ ನಾಗದೇವನಹಳ್ಳಿಯ ಸರ್ ಎಂ. ವಿಶ್ವೇಶ್ವರಯ್ಯ ಲೇಔಟ್‌ನ ಎನ್‌ಪಿಎಸ್ ಕೆಂಗೇರಿ ಜೂನಿಯರ್ ವಿಂಗ್‌ನ ಎಸ್‌ಎಸ್‌ಸಿಎ ಆಡಿಟೋರಿಯಂನಲ್ಲಿ ನಡೆಯಲಿದೆ.



ಸಂಗೀತ್ ನೃತ್ಯ ಭಾರತೀ ಅಕಾಡೆಮಿ ಆಯೋಜಿಸಿರುವ ಈ ವಿಶೇಷ ಕಾರ್ಯಕ್ರಮದಲ್ಲಿ ವಿದುಷಿ ಶೀತಲ್ ಹೇಮಂತ್ ಭರತನಾಟ್ಯ ಪ್ರದರ್ಶನ ನೀಡಲಿದ್ದು, ಗುರು?ಶಿಷ್ಯ ಪರಂಪರೆಯ ಶಿಸ್ತುಬದ್ಧ ಕಲಾಸಾಧನೆ ಹಾಗೂ ಭಾರತೀಯ ನೃತ್ಯ ಸಂಪ್ರದಾಯದ ವೈಭವವನ್ನು ರಸಿಕರ ಮುಂದಿಡಲಿದ್ದಾರೆ.

ಕಾರ್ಯಕ್ರಮಕ್ಕೆ ನಟ, ನೃತ್ಯಗಾರ, ಗಾಯಕ ಹಾಗೂ ಗೀತರಚನೆಕಾರ ಕಲಾ ಆರತಿರತ್ನ ಡಾ. ಸಂಜಯ್ ಶಿವಪ್ರಿಯಾ ಮತ್ತು ದಿ ನ್ಯೂ ಕೇಂಬ್ರಿಡ್ಜ್ ಹೈ ಸ್ಕೂಲ್‌ನ ಮುಖ್ಯೋಪಾಧ್ಯಾಯಿನಿ ಶ್ರೀಮತಿ ಪಾಲಿನ್ ಪ್ರಭಾಕರ್ ಮುಖ್ಯ ಅತಿಥಿಗಳಾಗಿ ಭಾಗವಹಿಸಲಿದ್ದಾರೆ.

ನೃತ್ಯ ಪ್ರಸ್ತುತಿಗೆ ಗುರು ವಿದುಷಿ ಪದ್ಮಾ ಹೇಮಂತ್ ನಟ್ಟುವಾಂಗದಲ್ಲಿ, ವಿದುಷಿ ರೋಹಿತ್ ಭಟ್ ಉಪ್ಪೂರು ಗಾಯನದಲ್ಲಿ, ವಿದುಷಿ ಪಿ. ಜನಾರ್ದನರಾವ್ ಮೃದಂಗದಲ್ಲಿ, ವಿದುಷಿ ಶಶಾಂಕ್ ಜೋಡಿದಾರ್ ಕೊಳಲಿನಲ್ಲಿ, ವಿದುಷಿ ಹೇಮಂತ್‌ಕುಮಾರ್ ಬಿ.ಆರ್. ಪಿಟೀಲಿನಲ್ಲಿ ಹಾಗೂ ವಿದುಷಿ ಡಿ.ವಿ. ಪ್ರಸನ್ನ ಕುಮಾರ್ ರಿದಮ್ ಪ್ಯಾಡ್ಸ್‌ನಲ್ಲಿ ಸಹಕರಿಸಲಿದ್ದಾರೆ.

**ಬಾಲ್ಯದಿಂದಲೇ ಕಲಾಸಾಧನೆ**

ಐದು ವರ್ಷ ವಯಸ್ಸಿನಲ್ಲೇ ಅರಮಂಡಿ ಅಭ್ಯಾಸದ ಮೂಲಕ ಭರತನಾಟ್ಯದ ಪಯಣ ಆರಂಭಿಸಿದ ಶೀತಲ್ ಹೇಮಂತ್, ತಮ್ಮ ತಾಯಿ ಹಾಗೂ ಗುರು ವಿದುಷಿ ಪದ್ಮಾ ಹೇಮಂತ್ ಅವರ ಮಾರ್ಗದರ್ಶನದಲ್ಲಿ ನಿರಂತರ ಕಲಾಸಾಧನೆ ನಡೆಸಿದ್ದಾರೆ. 2015ರಲ್ಲಿ ರಂಗಪ್ರವೇಶ ಮಾಡಿದ ಬಳಿಕ ಭಾರತ ಹಾಗೂ ವಿದೇಶಗಳ ವಿವಿಧ ವೇದಿಕೆಗಳಲ್ಲಿ ಏಕವ್ಯಕ್ತಿ ಪ್ರದರ್ಶನಗಳನ್ನು ನೀಡಿರುವ ಅವರು, ಪ್ರದರ್ಶನದ ಜತೆಗೆ ನೃತ್ಯ ಬೋಧನೆಯಲ್ಲಿಯೂ ತೊಡಗಿಸಿಕೊಂಡಿದ್ದಾರೆ.

ವಿದ್ವತ್ ಪರೀಕ್ಷೆಯಲ್ಲಿ ಉನ್ನತ ಶ್ರೇಣಿ, ಬೆಂಗಳೂರು ವಿಶ್ವವಿದ್ಯಾಲಯದಿಂದ ಪ್ರದರ್ಶನ ಕಲೆಗಳಲ್ಲಿ ಸ್ನಾತಕೋತ್ತರ ಪದವಿ, ಅಲಂಕಾರ ಪ್ರಥಮ್ ಮತ್ತು ಪೂರ್ಣ ಪರೀಕ್ಷೆಗಳಲ್ಲಿ ರಾಜ್ಯಮಟ್ಟದ ಪ್ರಥಮ ಸ್ಥಾನ ಹಾಗೂ ಲಂಡನ್‌ನ ಗ್ರಿಫಿನ್ ಕಾಲೇಜಿನ ಪರ್ಫಾರ್ಮೆನ್ಸ್ ಡಿಪ್ಲೊಮಾದಲ್ಲಿ ಡಿಸ್ಟಿಂಕ್ಷನ್ ಸೇರಿದಂತೆ ಹಲವು ಶೈಕ್ಷಣಿಕ ಸಾಧನೆಗಳನ್ನು ಮಾಡಿದ್ದಾರೆ.

CCRT ವಿದ್ಯಾರ್ಥಿವೇತನ ಹಾಗೂ ಕರ್ನಾಟಕ ಸರ್ಕಾರದ ವಿದ್ಯಾರ್ಥಿವೇತನ ಪಡೆದಿರುವ ಅವರು, ಲಾಸ್ಯ ಮೋಹಿನಿ, ನೃತ್ಯ ದುಬೈ ಸೇರಿದಂತೆ ಚಿದಂಬರಂ, ಮುಂಬೈ, ಒಡಿಶಾ, ಕೇರಳ ಹಾಗೂ ವಿದೇಶಗಳ ವಿವಿಧ ವೇದಿಕೆಗಳಲ್ಲಿ ತಮ್ಮ ನೃತ್ಯ ಪ್ರತಿಭೆಯನ್ನು ಪ್ರದರ್ಶಿಸಿದ್ದಾರೆ.



ಪ್ರಸ್ತುತ ಸಂಗೀತ್ ನೃತ್ಯ ಭಾರತೀ ಅಕಾಡೆಮಿಯ ಕಲಾತ್ಮಕ ಹಾಗೂ ಕಾರ್ಯನಿರ್ವಾಹಕ ನಿರ್ದೇಶಕಿಯಾಗಿ ಕಾರ್ಯನಿರ್ವಹಿಸುತ್ತಿರುವ ಶೀತಲ್, ತಮ್ಮ ಗುರುಗಳ ಮಾರ್ಗದರ್ಶನದಲ್ಲಿ ಭರತನಾಟ್ಯ ಬೋಧನೆ ಮತ್ತು ಪ್ರದರ್ಶನವನ್ನು ಮುಂದುವರಿಸುತ್ತಿದ್ದಾರೆ.

ಸಮರ್ಪಣ್ ಎಂಬ ಹೆಸರಿನ ಆಶಯದಂತೆ, ಗುರು–ಶಿಷ್ಯ ಪರಂಪರೆ, ಭಾರತೀಯ ಶಾಸ್ತ್ರೀಯ ನೃತ್ಯ ಸಂಪ್ರದಾಯ ಮತ್ತು ಕಲಾಸಾಧನೆಗೆ ಅರ್ಪಿತವಾಗಿರುವ ಈ ನೃತ್ಯ ಸಂಜೆ, ಭರತನಾಟ್ಯದ ಭಾವ, ಭಕ್ತಿ, ಲಯ ಮತ್ತು ಸೌಂದರ್ಯದ ಅಪೂರ್ವ ಅನುಭೂತಿಯನ್ನು ರಸಿಕರಿಗೆ ನೀಡಲಿದೆ.

# ವಿಧಾನಸೌಧದ ಮುಂಭಾಗ ಉರ್ದು ಹಬ್ಬಕ್ಕೆ ವಿರೋಧ ಹೋರಾಟಕ್ಕೆ ಕರವೇ ನಾರಾಯಣಗೌಡ ಕರೆ

**ಬೆಂಗಳೂರು, ಅ.1:** ವಿಧಾನ ಸೌಧದ ಮೆಟ್ಟಿಲುಗಳ ಮೇಲೆ ರಾಜ್ಯ ಸರ್ಕಾರ ಉರ್ದು ಹಬ್ಬ ಆಯೋಜನೆ ಮಾಡಿರುವ ರಾಜ್ಯ ಸರ್ಕಾರದ ನಿರ್ಧಾರಕ್ಕೆ ಕನ್ನಡಿಗರ ವಲಯದಲ್ಲಿ ಹಾಗೂ ಭಾಷಾ ಪ್ರೇಮಿಗಳಲ್ಲಿ ತೀವ್ರ ಆಕ್ರೋಶ ವ್ಯಕ್ತವಾಗಿದೆ.

ಸರ್ಕಾರದ ಈ ನಡೆಗೆ ವಿರೋಧ ವ್ಯಕ್ತಪಡಿಸಿರುವ ಕರ್ನಾಟಕ ರಕ್ಷಣಾ ವೇದಿಕೆ (ಕರವೇ) ಅಧ್ಯಕ್ಷ ಟಿ.ನಾರಾಯಣಗೌಡ ಅವರು, ಯಾವುದೇ ಕಾರಣಕ್ಕೂ ವಿಧಾನಸೌಧದ ಮುಂಭಾಗ ಉರ್ದು ಹಬ್ಬ ಆಯೋಜಿಸಲು ಬಿಡುವುದಿಲ್ಲ ಎಂದು ರಾಜ್ಯ ಸರ್ಕಾರಕ್ಕೆ ನೇರ ಎಚ್ಚರಿಕೆ ನೀಡಿದ್ದಾರೆ.

ಈ ಕುರಿತು ಪತ್ರಿಕಾ ಹೇಳಿಕೆ ನೀಡಿರುವ ಟಿ. ನಾರಾಯಣಗೌಡ ಅವರು, ವಿಧಾನಸೌಧದ ಮೆಟ್ಟಿಲುಗಳ ಮೇಲೆ ಉರ್ದು ಹಬ್ಬ ಮಾಡಲು ಹೊರಟಿರುವುದು ಅತ್ಯಂತ ಅವಿವೇಕದ, ಅಪ್ರಬುದ್ಧ ಹಾಗೂ ದುರಹಂಕಾರದ ನಿರ್ಧಾರವಾಗಿದೆ. ರಾಜ್ಯ ಸರ್ಕಾರವೇ ಮುಂದೆ ನಿಂತು ನಾಡಿನ ನೆಮ್ಮದಿ ಮತ್ತು ಸೌಹಾರ್ದತೆಯನ್ನು ಹಾಳು ಗೆಡಹಲು ಹೊರಟಂತೆ ಕಾಣುತ್ತಿದೆ. ಈ ತಲೆಹರಟೆ ನಿರ್ಧಾರವನ್ನು ಯಾರು ಕೇಳಿದ್ದರು? ಇದು ಕನ್ನಡಿಗರು ಮತ್ತು ಉರ್ದು ಭಾಷಿಕರ ನಡುವೆ ವೈಷಮ್ಯ ತಂದಿಡುವ ಹುನ್ನಾರ ಎಂದು ಕಟುವಾಗಿ ವಾಗ್ದಾಳಿ ನಡೆಸಿದ್ದಾರೆ.

ನಾವು ಉರ್ದು ಸೇರಿದಂತೆ ಯಾವುದೇ ಭಾಷೆಯ ವಿರೋಧಿಗಳಲ್ಲ. ಬೆಂಗಳೂರಿನಲ್ಲಿ ಉರ್ದು ಕಾರ್ಯಕ್ರಮ ಮಾಡಲು ಸಾವಿರಾರು ಜಾಗಗಳಿವೆ. ಆದರೆ, ನಾಡಿನ ಶಕ್ತಿಸೌಧವಾದ ವಿಧಾನಸೌಧವೇ ಇದಕ್ಕೆ ಬೇಕಾಗಿಲ್ಲ. ಸರ್ಕಾರವೇ ದುಸ್ಸಾಹಸಕ್ಕೆ ಇಳಿದರೆ ಅದರ ಪರಿಣಾಮವನ್ನು ತೀವ್ರವಾಗಿ ಎದುರಿಸ ಬೇಕಾಗುತ್ತದೆ ಎಂದು ಅವರು ಎಚ್ಚರಿಸಿದ್ದಾರೆ.

ಮಾಧ್ಯಮಗಳಲ್ಲಿ ಉರ್ದು ವಾರ್ತೆ ಪ್ರಸಾರ ಮಾಡುವ ಕುರಿತು ಹಿಂದೆ ನಡೆದಿದ್ದ ಭಾಷಾ ಹಿತಾಸಕ್ತಿ ಗಲಾಟೆ ಮತ್ತು ಕೋಮು ಸೌಹಾರ್ದತೆಗೆ ಧಕ್ಕೆಯಾದ ಘಟನೆಗಳನ್ನು ಉಲ್ಲೇಖಿಸಿರುವ ಕರವೇ ಅಧ್ಯಕ್ಷರು, ಹಿಂದೆ ಉರ್ದು ವಾರ್ತೆ ಸಂಬಂಧ ರಾಜ್ಯದಲ್ಲಿ ಸಂಭವಿಸಿದ ಕಹಿ ಘಟನೆಗಳು ಮತ್ತು ಗಲಭೆಗಳನ್ನು ಸರ್ಕಾರ ಮರೆತಿದೆಯೇ? ತನ್ನ ಕಾಲ ಮೇಲೆ ತಾನೇ ಕಲ್ಲು ಹಾಕಿಕೊಳ್ಳುವ ಕೆಲಸವನ್ನು ಸರ್ಕಾರ ಮಾಡಬಾರದು.

ಇಂದು ಉರ್ದು ಹಬ್ಬ ಮಾಡಿದರೆ, ನಾಳೆ ಹಿಂದಿ, ತಮಿಳು, ತೆಲುಗು, ಮರಾಠಿ ಹಬ್ಬಗಳನ್ನು ವಿಧಾನಸೌಧದ ಮುಂದೆ ಮಾಡಿ, ಕೊನೆಗೆ ಕರ್ನಾಟಕವನ್ನು ಕನ್ನಡೇತರರಿಗೆ ಮಾರಾಟ ಮಾಡಲು ಹೊರಡು ತ್ತಾರೆಯೇ? ಎಂದು ಖಾರವಾಗಿ ಪ್ರಶ್ನಿಸಿದ್ದಾರೆ.

### ಸಿಎಂ, ಡಿಸಿಎಂಗೆ ನೇರ ಆಗ್ರಹ

ಮುಖ್ಯಮಂತ್ರಿ ಡಿ.ಕೆ.ಶಿವಕುಮಾರ್ ಅವರು ತಕ್ಷಣವೇ ಪ್ರವೇಶಿಸಿ ಈ ಉರ್ದು ಹಬ್ಬದ ನಿರ್ಧಾರವನ್ನು ಕೈಬಿಡಬೇಕು ಎಂದು ಕರವೇ ಆಗ್ರಹಿಸಿದೆ. ರಾಜ್ಯದಲ್ಲಿ ವಿವಾದಗಳನ್ನು ಸೃಷ್ಟಿಸಿ ಸೌಹಾರ್ದತೆಯನ್ನು ಹಾಳುಗೆಡಹಲು ಸಂಚು



ರೂಪಿಸುತ್ತಿರುವವರನ್ನು ಸರ್ಕಾರ ತಕ್ಷಣವೇ ದೂರವಿಡಬೇಕು. ಇಲ್ಲವಾದಲ್ಲಿ ಕನ್ನಡಿಗರ ರಕ್ಷಣೆಗಾಗಿ ಉಗ್ರ ಹೋರಾಟ ರೂಪಿಸುವುದಾಗಿ ಕರವೇ ಸರ್ಕಾರಕ್ಕೆ ಸೂಚನೆ ನೀಡಿದೆ.

### 1994ರ ಉರ್ದು ವಾರ್ತೆ ವಿವಾದದ ಹಿನ್ನೆಲೆ

ಈಗಿನ ಬೆಳವಣಿಗೆಗೆ ಹಿಂದಿನ ಘಟನೆಯನ್ನು ಹೋಲಿಸಿ ಚರ್ಚೆ ನಡೆಯುತ್ತಿರುವುದಕ್ಕೆ ಪ್ರಮುಖ ಕಾರಣ 1994ರ ಬೆಂಗಳೂರಿನ ಉರ್ದು ವಾರ್ತೆ ವಿವಾದ. ಅಂದು ಬೆಂಗಳೂರು ದೂರದರ್ಶನದಲ್ಲಿ ಕನ್ನಡ ಸುದ್ದಿಯ ನಂತರ 10 ನಿಮಿಷಗಳ ಉರ್ದು ಸುದ್ದಿ ಪ್ರಸಾರ ಆರಂಭವಾದ ವಿಚಾರಕ್ಕೆ ಕನ್ನಡಪರ ಸಂಘಟನೆಗಳಿಂದ ಪ್ರತಿಭಟನೆಗಳು ನಡೆದಿದ್ದವು. ನಂತರ ಪ್ರತಿಭಟನೆಗಳು ಹಿಂಸಾತಕ ಸ್ವರೂಪ ಪಡೆದುಕೊಂಡು ಕೋಮು ಸಂಘರ್ಷಕ್ಕೆ ತಿರುಗಿದ್ದವು. ಆ ಘಟನೆಯಲ್ಲಿ ಸಾವು–ನೋವು ಮತ್ತು ಆಸ್ತಿ ಹಾನಿ ಸಂಭವಿಸಿತ್ತು.

ಲೋಕಸಭೆಯಲ್ಲಿ 1994ರ ಡಿಸೆಂಬರ್‌ನಲ್ಲಿ ನೀಡಿದ ಕೇಂದ್ರ ಸರ್ಕಾರದ ಉತ್ತರದಲ್ಲಿಯೂ ಆ ಅವಧಿಯಲ್ಲಿ ಕರ್ನಾಟಕದಲ್ಲಿ ನಡೆದ ಹಿಂಸಾಚಾರದಲ್ಲಿ ಪೊಲೀಸ್ ಗುಂಡಿನ ದಾಳಿಯಲ್ಲಿ ನಾಲ್ವರು ಮೃತಪಟ್ಟಿದ್ದರು ಎಂಬ ಮಾಹಿತಿ ದಾಖಲಾಗಿದೆ. ಈ ಇತಿಹಾಸವನ್ನು ಉಲ್ಲೇಖಿಸಿರುವ ನಾರಾಯಣಗೌಡ, ಹಿಂದಿನ ಭಾಷಾ ವಿವಾದಗಳಿಂದ ಪಾಠ ಕಲಿಯಬೇಕಿದ್ದು, ಯಾವುದೇ ಕಾರಣಕ್ಕೂ ಹೊಸ ಸಂಘರ್ಷಕ್ಕೆ ಅವಕಾಶ ಮಾಡಿಕೊಡ ಬಾರದು ಎಂದು ಸರ್ಕಾರವನ್ನು ಒತ್ತಾಯಿಸಿದ್ದಾರೆ.

### ಭಾಷೆಗಳ ನಡುವೆ ಸಂಘರ್ಷ ಬೇಡ

ನಾರಾಯಣಗೌಡ ಅವರ ಹೇಳಿಕೆಯ ಮುಖ್ಯ ಅಂಶವೆಂದರೆ, ಉರ್ದು ಭಾಷೆಯ ವಿರುದ್ಧ ತಮ ಸಂಘಟನೆ ಇಲ್ಲ; ಆದರೆ ಸರ್ಕಾರದ ನಿರ್ಧಾರದಿಂದ ಕನ್ನಡಿಗರು ಮತ್ತು ಉರ್ದು ಭಾಷಿಕರ ನಡುವೆ ಅನಗತ್ಯ ಭಿನ್ನಾಭಿಪ್ರಾಯ ಮೂಡಬಾರದು ಎಂಬುದು. ಮುಂದೆ ಹಿಂದಿ, ತಮಿಳು, ತೆಲುಗು, ಮರಾಠಿ ಸೇರಿದಂತೆ ವಿವಿಧ ಭಾಷೆಗಳ ಕಾರ್ಯಕ್ರಮಗಳಿಗೂ ಇದೇ ರೀತಿಯ ಸರ್ಕಾರಿ ವೇದಿಕೆ ನೀಡುವ ಪ್ರಶ್ನೆಯನ್ನೂ ಅವರು ಮುಂದಿಟ್ಟಿದ್ದಾರೆ.

ಮುಖ್ಯಮಂತ್ರಿ ಡಿ.ಕೆ. ಶಿವಕುಮಾರ್ ಅವರು ಈ ನಿರ್ಧಾರವನ್ನು ತಕ್ಷಣ ಕೈಬಿಡಬೇಕು ಎಂದು ಒತ್ತಾಯಿಸಿರುವ ಅವರು, ಸರ್ಕಾರ ವಿವಾದಾತ್ಮಕ ನಿರ್ಧಾರದಿಂದ ಹಿಂದೆ ಸರಿಯದಿದ್ದರೆ ಕರ್ನಾಟಕ ರಕ್ಷಣಾ ವೇದಿಕೆ ಹೋರಾಟ ನಡೆಸಲಿದೆ ಎಂದು ಎಚ್ಚರಿಕೆ ನೀಡಿದ್ದಾರೆ.

## ಉರ್ದು ಹಬ್ಬ ಆಚರಣೆ ನಿರ್ಧಾರದಿಂದ ಹಿಂದೆಸರಿದ ಡಿಕೆಶಿ ಸರ್ಕಾರ

**ರಾಜ್ಯ ಸರ್ಕಾರ ಇದೇ ಮೊದಲ ಬಾರಿಗೆ ವಿಧಾನಸೌಧದ ಭವ್ಯ ಮೆಟ್ಟಿಲುಗಳ ಮೇಲೆ ಉರ್ದು ಹಬ್ಬವನ್ನು ಆಯೋಜಿಸಲು ಸಿದ್ಧತೆ ನಡೆಸಿದ್ದು, ಆದರೆ ಇದಕ್ಕೆ ಪ್ರತಿಪಕ್ಷ ಬಿಜೆಪಿ ಮತ್ತು ಕನ್ನಡಪರ ಸಂಘಟನೆಗಳಿಂದ ತೀವ್ರ ವಿರೋಧ ವ್ಯಕ್ತಪಡಿಸಿವೆ.**

**ಹೀಗಾಗಿ ಸರ್ಕಾರ ತನ್ನ ನಿರ್ಧಾರದಿಂದ ಹಿಂದೆ ಸರಿದಿದೆ. ವಿಧಾನಸೌಧದ ಭವ್ಯ ಮೆಟ್ಟಿಲುಗಳ ಮೇಲೆ ಯಾವುದೇ ಸರ್ಕಾರಿಯೇತರ ಅಥವಾ ಖಾಸಗಿ ಕಾರ್ಯಕ್ರಮಗಳಿಗೆ ಅವಕಾಶವಿಲ್ಲ ಎಂದು ಮುಖ್ಯಮಂತ್ರಿಗಳ ಕಚೇರಿ ಗುರುವಾರ ಪ್ರಕಟಣೆಯ ಮೂಲಕ ಸ್ಪಷ್ಟಪಡಿಸಿದೆ.**

**ಕೆಲವು ಮಾಧ್ಯಮಗಳಲ್ಲಿ ಖಾಸಗಿ ಕಾರ್ಯಕ್ರಮ ನಡೆಯಲಿದೆ ಎಂದು ಬಿಂಬಿಸುತ್ತಿರುವುದು ಸಂಪೂರ್ಣ ಸತ್ಯಕ್ಕೆ ದೂರವಾದ ಮಾತು. ಸರ್ಕಾರ ಅಂತಹ ಯಾವುದೇ ಅನುಮತಿಯನ್ನು ನೀಡಿಲ್ಲ ಎಂದು ಮುಖ್ಯಮಂತ್ರಿಗಳ ಕಚೇರಿ ಅಧಿಕೃತ ಮಾಧ್ಯಮ ಪ್ರಕಟಣೆ ಮೂಲಕ ಸ್ಪಷ್ಟನೆ ನೀಡಿದೆ.**

**ಎರಡು ದಿನಗಳ ಹಿಂದಷ್ಟೇ ಆರೋಗ್ಯ ಮತ್ತು ಕುಟುಂಬ ಕಲ್ಯಾಣ, ಅಲ್ಪಸಂಖ್ಯಾತರ ಕಲ್ಯಾಣ, ಹಜ್ ಮತ್ತು ವಕ್ಫ್ ಸಚಿವ ಯು.ಟಿ.ಖಾದರ್ ಅವರು ನವೆಂಬರ್ 9ರಂದು ಉರ್ದು ದಿನದ ಅಂಗವಾಗಿ ವಿಧಾನಸೌಧದ ಭವ್ಯ ಮೆಟ್ಟಿಲುಗಳ ಮೇಲೆ ಉರ್ದು ಹಬ್ಬ ಆಯೋಜಿಸಲಾಗುವುದು ಎಂದು ಹೇಳಿದ್ದರು.**

**ಖಾದರ್ ಹೇಳಿಕೆ ಬೆನ್ನಲ್ಲೇ ಬಿಜೆಪಿ ಹಿರಿಯ ಶಾಸಕ ಸುರೇಶ್ ಕುಮಾರ್ ಅವರು ಮಾಧ್ಯಮ ಪ್ರಕಟಣೆ ಹೊರಡಿಸಿದ್ದು, ಕನ್ನಡಿಗರ ಅನನ್ಯತೆಯ ಸಂಕೇತವಾಗಿರುವ ವಿಧಾನಸೌಧವನ್ನು ನಿರ್ದಿಷ್ಟ ಸಮುದಾಯದ ಮತಬ್ಯಾಂಕ್ ಓಲೈಕೆಗೆ ಬಳಸಿಕೊಳ್ಳಲಾಗುತ್ತಿದೆ. ಈ ನಿರ್ಧಾರವನ್ನು ತಕ್ಷಣವೇ ಹಿಂಪಡೆಯುವಂತೆ ಸರ್ಕಾರಕ್ಕೆ ಒತ್ತಾಯಿಸಿದ್ದರು. ಇಂದು ಕರವೇ ಸಹ ಇದಕ್ಕೆ ವಿರೋಧ ವ್ಯಕ್ತಪಡಿಸಿತ್ತು.**




**ಸಿಎಂ ಡಿ.ಕೆ.ಶಿವಕುಮಾರ್ ಅವರು ಬೆಂಗಳೂರು ಅಂತಾರಾಷ್ಟ್ರೀಯ ವಸ್ತು ಪ್ರದರ್ಶನ ಕೇಂದ್ರ (BIEC)ದಲ್ಲಿ ಗುರುವಾರ ನಡೆದ ಅಗ್ರಿಕಾನ್ ಇಂಡಿಯಾ ಹಾಗೂ ಹಾರ್ಟಿ ಕನೆಕ್ಟ್ ಇಂಡಿಯಾ ಕಾರ್ಯಕ್ರಮಕ್ಕೆ ಚಾಲನೆ ನೀಡಿದರು. ವಿಧಾನ ಪರಿಷತ್ ಮಾಜಿ ಸಭಾಪತಿ ವಿ.ಆರ್.ಸುದರ್ಶನ್, ಹಾರ್ಟಿಕನೆಕ್ಟ್ ಇಂಡಿಯಾ ನಿರ್ದೇಶಕ ಸತ್ಯೇಂದ್ರ ಕುಮಾರ್ ಗುಟ್ಗೂಟಿಯಾ, ಶ್ರೀಕಂಠ ಮತ್ತಿತರರು ಇದ್ದರು.**

# ಕೊತ್ತನೂರು ಪೊಲೀಸರಿಗೆ ಸೂಕ್ತ ನಿರ್ದೇಶನ ನೀಡುವಂತೆ ನಗರ ಪೊಲೀಸ್ ಆಯುಕ್ತರಿಗೆ ಹೈಕೋರ್ಟ್ ಸೂಚನೆ

**ಬೆಂಗಳೂರು,ಅ.1:** ನಕಲಿ ದಾಖಲೆ ಸಲ್ಲಿಸಿ ಜಾಮಿಯಾ ಮಹಮ್ಮದೀಯ ಮನ್ಸೂರ ಸಂಸ್ಥೆಯ ಜಾಮಿಯಾ ಮಹಮ್ಮದಿಯ ಎಜುಕೇಷನ್ ಸೊಸೈಟಿ, ಮುಂಬೈ ವಿರುದ್ಧ ಕ್ರಮ ಕೈಗೊಳ್ಳುವಂತೆ ಶಿಕ್ಷಣ ಇಲಾಖೆ ಈ ವರ್ಷ ಜನವರಿ 27 ರಂದು ಕೊತ್ತನೂರು ಪೊಲೀಸ್ ಠಾಣೆಯಲ್ಲಿ ದಾಖಲಿಸಿದ್ದ ದೂರಿಗೆ ಸಂಬಂಧಿಸಿದಂತೆ ತನಿಖೆ ನಡೆಸಿ ಆರೋಪಪಟ್ಟಿ ಸಲ್ಲಿಸಲು ವಿಳಂಬ ಮಾಡಿರುವ ಬಗ್ಗೆ ಆಕ್ಷೇಪ ವ್ಯಕ್ತಪಡಿಸಿರುವ ರಾಜ್ಯ ಹೈಕೋರ್ಟ್, ಕೊತ್ತನೂರು ಪೊಲೀಸರಿಗೆ ಬೆಂಗಳೂರು ನಗರ ಪೊಲೀಸ್ ಅಯುಕ್ತರು ತನಿಖೆ ಪೂರ್ಣಗೊಳಿಸಿ ವರದಿ ಸಲ್ಲಿಸುವಂತೆ ಸೂಕ್ತ ನಿರ್ದೇಶನ ನೀಡಬೇಕು ಎಂದು ರಾಜ್ಯ ಹೈಕೋರ್ಟ್ ಮೌಖಿಕವಾಗಿ ಆದೇಶಿಸಿದೆ.

ಅಬ್ದುಲ್ ಹಮೀದ್ ಪಾಷಾ ಸಲ್ಲಿಸಿದ ಅರ್ಜಿ ವಿಚಾರಣೆ ನಡೆಸಿದ ನ್ಯಾಯಮೂರ್ತಿಗಳಾದ ಜಯಂತ್ ಬ್ಯಾನರ್ಜಿ ಮತ್ತು ತಾರಾ ವಿತಸ್ತ ಗಂಜು ನೇತೃತ್ವದ ನ್ಯಾಯಪೀಠ ಈ ಸೂಚನೆ ನೀಡಿದೆ. ತನಿಖೆಯು ಅತಿಯಾಗಿ ದೀರ್ಘ ಸಮಯ ತೆಗೆದುಕೊಳ್ಳುತ್ತಿರುವುದರಿಂದ, ಅನಗತ್ಯ ವಿಳಂಬ ತಪ್ಪಿಸಲು ಬೆಂಗಳೂರು ಪೊಲೀಸ್ ಆಯುಕ್ತರು ಕೊತ್ತನೂರು ಪೊಲೀಸರಿಗೆ ಸೂಕ್ತ ನಿರ್ದೇಶನಗಳನ್ನು ನೀಡಬೇಕು. ಸಾಧ್ಯವಾದಷ್ಟು ಬೇಗ ವರದಿ ಸಲ್ಲಿಸಬೇಕು. ಹೆಚ್ಚುವರಿ ಸರ್ಕಾರಿ ವಕೀಲರು ಈ ಆದೇಶವನ್ನು ವಿಳಂಬವಿಲ್ಲದೇ ಪೊಲೀಸ್ ಆಯುಕ್ತರ ಗಮನಕ್ಕೆ ತರಬೇಕು ಎಂದು ಹೇಳಿದೆ.

ನೋಂದಣಿಯಾಗದ ಮದರಸಾ ಶಾಲಾ ಶಿಕ್ಷಣ ಇಲಾಖೆಯ ಕ್ಷೇತ್ರ ಶಿಕ್ಷಣಾಧಿಕಾರಿಯಾಗಿದ್ದ ಸಿ.ಎನ್. ಗೋವಿಂದಪ್ಪ ಅವರು ಸದರಿ ಶಿಕ್ಷಣ ಸಂಸ್ಥೆ ವಿರುದ್ಧ ಬಿ.ಎನ್. ಎಸ್. 318[4], 336, 340ರ ಅಡಿ ಕ್ರಮ ಜರುಗಿಸುವಂತೆ ಜನವರಿಯಲ್ಲಿ ಕೊತ್ತನೂರು ಪೊಲೀಸ್ ಠಾಣೆಯಲ್ಲಿ ಕ್ರಿಮಿನಲ್ ದೂರು ದಾಖಲಿಸಿದ್ದರು. ತನಿಖೆಯಲ್ಲಿ ಆಗಿರುವ ಪ್ರಗತಿಯ ಕುರಿತು ಸಂಬಂಧಪಟ್ಟ ತನಿಖಾಧಿಕಾರಿ ಪಡೆದಿರುವ ವರದಿ ಪ್ರಕಾರ, ತನಿಖೆ ನಡೆಯುತ್ತಿದೆ ಮತ್ತು ಇನ್ನೂ ಅಂತಿಮ ವರದಿಯನ್ನು ಸಲ್ಲಿಸಬೇಕಾಗಿದೆ. ಕ್ರಿಮಿನಲ್ ದೂರಿಗೆ ಸಂಬಂಧಿಸಿದಂತೆ ಇಲ್ಲಿಯವರೆಗೆ ಆರೋಪಪಟ್ಟಿ ಸಲ್ಲಿಸಿಲ್ಲ. ಹೀಗಾಗಿ ವಿಚಾರಣೆಯನ್ನು ನವೆಂಬರ್ 17ಕ್ಕೆ ಮುಂದೂಡಿದಿದ್ದು, ತನಿಖೆಯ ಸ್ಥಿತಿಯನ್ನು ನ್ಯಾಯಾಲಯಕ್ಕೆ ತಿಳಿಸಬೇಕು ಎಂದು ನ್ಯಾಯಪೀಠ ತಿಳಿಸಿದೆ.




ಜಾಮಿಯಾ ಮಹಮ್ಮದಿಯ ಎಜುಕೇಷನ್ ಸೊಸೈಟಿ, ಮುಂಬೈ ವಿರುದ್ಧ ಸಲ್ಲಿಸಲಾದ ನ್ಯಾಯಾಂಗ ನಿಂದನೆ ಮನವಿಯನ್ನು ಪರಿಗಣಿಸುವುದು ನ್ಯಾಯಾಲಯದ ವಿವೇಚನೆಗೆ ಬಿಟ್ಟಿದ್ದು. ಪ್ರತಿವಾದಿಗಳು ಉದ್ದೇಶ ಪೂರ್ವಕವಾಗಿ ನ್ಯಾಯಾಲಯಕ್ಕೆ ಅವಿಧೇಯತೆ ತೋರಿದ್ದಾರೆ ಎಂದು ಆರೋಪಿಸಿ ಅರ್ಜಿದಾರರು ಸಲ್ಲಿಸಿರುವ ಅರ್ಜಿ ಯನ್ನು ತಿರಸ್ಕರಿಸುತ್ತೇವೆ ಎಂದು ನ್ಯಾಯಪೀಠ ಹೇಳಿದೆ.

ನೋಂದಣಿಯಾಗದ ಮದರಸಾ ಹೆಸರಿನಲ್ಲಿ ಕಾನೂನು ಬಾಹಿರವಾಗಿ ಪಡೆದಿರುವ ರೂ 5 ಲಕ್ಷ ರೂ ವಿಚಾರದಲ್ಲಿನ ವಂಚನೆಗೆ ಸಂಬಂಧಿಸಿದಂತೆ ಅಲ್ಪಸಂಖ್ಯಾತರ ಇಲಾಖೆಯು ತನಿಖೆಗೆ ಸಂಪೂರ್ಣವಾಗಿ ಸಹಕರಿಸುತ್ತಿದೆ.

ಅಲ್ಪಸಂಖ್ಯಾತರ ನಿರ್ದೇಶನಾಲಯದ ನಿರ್ದೇಶಕರಾದ ಯಾಸ್ಮಿನ್ ಬೇಗಂ ಜಿ. ವಾಲಿಕರ್ ಅವರು ಪ್ರಮಾಣಪತ್ರ ಸಲ್ಲಿಸಿದ್ದು, ನಕಲಿ ದಾಖಲೆಗಳನ್ನು ಸಲ್ಲಿಸಿ ನಿರ್ದೇಶನಾಲಯದಿಂದ 5 ಲಕ್ಷ ರೂ. ಹಣ ಮಂಜೂರು ಮಾಡಿಸಿಕೊಂಡಿರುವ ಕುರಿತು ಸಂಬಂಧಪಟ್ಟ ಶಾಲಾ ಆಡಳಿತ ಮಂಡಳಿಯು ನಿರ್ದೇಶನಗಳನ್ನು ಪಾಲಿಸಲು ಮತ್ತು ಸರ್ಕಾರಕ್ಕೆ ಬಾಕಿ ಇರುವ ರೂ 5 ಲಕ್ಷ ಮೊತ್ತವನ್ನು ಬಡ್ಡಿ ಸಮೇತ ಪಾವತಿಸಲು ಸಮಯ ಕೋರಿತ್ತು.

ಹೀಗಾಗಿ ಸದ್ಯಕ್ಕೆ ಮಧ್ಯಂತರ ವರದಿ ಸಲ್ಲಿಸಲಾಗಿದೆ. ವಸೂಲಾತಿ ಪ್ರಕ್ರಿಯೆಗಳು ಚಾಲ್ತಿಯಲ್ಲಿವೆ. ಅಲ್ಪಸಂಖ್ಯಾತರ ನಿರ್ದೇಶನಾಲಯ ನಿಕಟವಾಗಿ ಮೇಲ್ವಿಚಾರಣೆ ಮಾಡುತ್ತಿದೆ ಎಂದು ನ್ಯಾಯಪೀಠಕ್ಕೆ ಅವರು ತಿಳಿಸಿದ್ದಾರೆ.

# 5-6 ತಿಂಗಳ ಮೊಹಮ್ಮದ್ ನಲಪಾಡ್ ಕುರಿತ ಸಿಸಿ ಟಿವಿ ದೃಶ್ಯಾವಳಿ ಪರಿಶೀಲಿಸಿ: ಬೆಂಗಳೂರು ಪೊಲೀಸರಿಗೆ ಎಚ್.ಎಂ.ರಮೇಶ್‌ಗೌಡ ಒತ್ತಾಯ

**ಕೆಲ ದಿನಗಳಿಂದ ಈತ ಕೆಲ ಅಮಾಯಕರ ಮೇಲೆ ಮಾರಣಾಂತಿಕ ಹಲ್ಲೆ ನಡೆಸಿದ್ದಾನೆ**

**ನಲಪಾಡ್ ವಿರುದ್ಧ ಕೇಸ್ ದಾಖಲಾಗಿಲ್ಲ ಏಕೆ ಎಂದು ಪ್ರಶ್ನೆ ಮಾಡಿದ ಮಾಜಿ ಶಾಸಕ**

**ಕಾಂಗ್ರೆಸ್ ಸರಕಾರ ಇರುವ ತನಕ ನಿನ್ನ ಆಟ, ಆಮೇಲೆ ಕಾದಿದೆ ಎಂದು ಎಚ್ಚರಿಕೆ**



ಬೆಂಗಳೂರು, ಅ.1 : ನಿಖಿಲ್ ಕುಮಾರಸ್ವಾಮಿ ಅವರನ್ನು ರಾಜ್ಯದಲ್ಲಿ ಎಲ್ಲಿಯೂ ಒಂದೇ ಒಂದು ಸಭೆ ಮಾಡಲು ಬಿಡುವುದಿಲ್ಲ ಎಂದು ಹೇಳಿರುವುದು ಸೇರಿ ನಮ್ಮ ಯುವ ನಾಯಕನ ಬಗ್ಗೆ ಲಘುವಾಗಿ ಮಾತನಾಡಿರುವ ಮೊಹಮ್ಮದ್ ನಲಪಾಡ್ ವಿರುದ್ಧ ಗ್ರೇಟರ್ ಬೆಂಗಳೂರು ಜೆಡಿಎಸ್ ಅಧ್ಯಕ್ಷ ಎಚ್.ಎಂ.ರಮೇಶ್ ಗೌಡ ಹರಿಹಾಯ್ದಿದ್ದಾರೆ.

ಜೆಡಿಎಸ್ ಕೇಂದ್ರ ಕಚೇರಿ ಜೆಪಿ ಭವನದಲ್ಲಿ ಮಾಧ್ಯಮಗಳ ಜತೆ ಮಾತನಾಡಿದ ಅವರು; ನಲಪಾಡ್ ದುರಹಂಕಾರ ನಡೆಯುವುದಿಲ್ಲ. ಯಾರನ್ನು ಹೊಡೆದರೂ ನನ್ನದು ನಡೆಯುತ್ತದೆ ಎಂದುಕೊಂಡರೆ ಆಗುವುದಿಲ್ಲ. ನನಗೆ ಪಾಠ ಕಲಿಸುವವರು ಯಾರೂ ಇಲ್ಲ ಎಂದು ಆತ ಭಾವಿಸಿದರೆ ತಪ್ಪು. ಕಾಂಗ್ರೆಸ್ ಪಕ್ಷ ಅಧಿಕಾರದಲ್ಲಿ ಇರುವ ತನಕ ಈತನ ಆಟ ನಡೆಯುತ್ತದೆ. ಆಮೇಲೆ ಈತನಿಗೆ ಕಾದಿದೆ ಎಂದು ಅವರು ಎಚ್ಚರಿಕೆ ನೀಡಿದರು.

ಸಿಕ್ಕ ಸಿಕ್ಕವರ ಮೇಲೆ ಈ ನಲಪಾಡ್ ಹಲ್ಲೆ, ಮಾರಣಾಂತಿಕವಾಗಿ ಹೊಡೆಯುವುದು ನಡೆಯುತ್ತಿದೆ. ಕಳೆದ ಒಂದು ವಾರದಿಂದ ಹಲವಾರು ಪಬ್ಬುಗಳಲ್ಲಿ ಈತ ಹಲವಾರು ಅಮಾಯಕರ ಮೇಲೆ ಹಲ್ಲೆ ನಡೆಸಿದ್ದಾನೆ ಎಂಬ ಮಾಹಿತಿ ನನಗಿದೆ. ಸರಿಯಾಗಿರುವವರ ಕೈಗೆ ಯಾವತ್ತಾದರೂ ಸರಿಯಾದ ಸಮಯದಲ್ಲಿ ಸರಿಯಾದ ವ್ಯಕ್ತಿಗೆ ಸಿಕ್ಕಿಹಾಕಿಕೊಂಡರೆ ಇವನಿಗೆ ಗೊತ್ತಾಗುತ್ತದೆ. ಇವತ್ತು ತಿಳ್ಕೊಂಡಿರ ಬಹುದು ಆ ಮನುಷ್ಯ, ಕಾಂಗ್ರೆಸ್ ಸರ್ಕಾರ ಇದೆ, ನಾನು ಏನು ಮಾಡಿದರೂ ನಡೆಯುತ್ತದೆ ಎಂದು. ಈತನ ಅಹಂಕಾರದ ಚಾಳಿ ಮಿತಿ ಮೀರಿದೆ ಎಂದು ಅವರು ಆಕ್ರೋಶ ವ್ಯಕ್ತಪಡಿಸಿದರು.

ಮೊದಲು ಈತ ನಮ್ಮ ನಾಯಕರುಗಳ ಬಗ್ಗೆ ಲಘುವಾಗಿ ಮಾತನಾಡುವುದನ್ನು ನಿಲ್ಲಿಸಬೇಕು. ಇಲ್ಲವಾದರೆ ನಮ್ಮ ಕಾರ್ಯಕರ್ತರು ರೊಚ್ಚಿಗೆದ್ದರೆ ಕಷ್ಟ. ಇವನಿಗೆ ಯಾವ ಮಟ್ಟದ ದುರಹಂಕಾರ ಬಂದಿದೆ ಎಂದು ಎಲ್ಲರೂ ಹೇಳುತ್ತಿದ್ದಾರೆ. ಬರೀ ಅಪರಾಧಿ ಕೃತ್ಯಗಳನ್ನು ನಡೆಸಿಕೊಂಡು ಬರುತ್ತಿದ್ದಾನೆ. ಈತನ ಬಗ್ಗೆ ಬೆಂಗಳೂರು ಪೊಲೀಸರು ಕಠಿಣ ಕ್ರಮಗಳನ್ನು ಕೈಗೊಳ್ಳಬೇಕು. ಇಲ್ಲವಾದರೆ ಏನಾದರೂ ಅವಾಂತರ ಸಂಭವಿಸಿದರೆ ಅದಕ್ಕೆ ಪೊಲೀಸರೇ ಹೊಣೆ ಆಗಬೇಕಾಗುತ್ತದೆ. ಇತ್ತೀಚಿನ ದಿನಗಳಲ್ಲಿ ನಲಪಾಡ್ ಯಾರ ಯಾರ ಮೇಲೆ ಮಾರಣಾಂತಿಕ ಹಲ್ಲೆ, ದಾಳಿ ನಡೆಸಿದ್ದಾನೆ ಎಂಬುದಕ್ಕೆ ಸಿಸಿ ಟಿವಿ ದೃಶ್ಯಾವಳಿ, ಇನ್ನಿತರ ದಾಖಲೆಗಳು ಇವೆ. ಅವುಗಳ ಆಧಾರದ ಮೇಲೆ ಪೊಲೀಸರು ಕ್ರಮ ಕೈಗೊಳ್ಳಬೇಕು ಎಂದು ರಮೇಶ್ ಗೌಡ ಆಗ್ರಹಿಸಿದರು.

ಇವತ್ತಿನವರೆಗೂ ಅವನ ಮೇಲೆ ದೂರು ಆಗಿಲ್ಲ ಅಂತ ಅಂದು ಕೊಂಡಿದ್ದಾನೆ. ಸರಿಯಾಗಿ ರೋರ ಕೈಗೆ ಸಿಕ್ಕಿಲ್ಲ ಅಷ್ಟೇ. ಅಮಾಯಕರನ್ನು ಹೊಡೆದು ತಿಂದು ಬಂದಿದ್ದಾನೆ. ಕಾಂಗ್ರೆಸ್ ಸರ್ಕಾರ ಇದೆ ಎಂದು ಮೆರೆಯುತ್ತಿದ್ದಾನೆ. ನಮ್ಮ ಪಕ್ಷದ ನಾಯಕರ ಬಗ್ಗೆ ತುಂಬಾ ಅವಹೇಳನ ಕಾರಿಯಾಗಿ ಮಾತಾಡ್ತಾ ಇದ್ದಾನೆ. ನಿಖಿಲ್ ಕುಮಾರಸ್ವಾಮಿ ಅವರು ಎಲ್ಲಾದರೂ ಸಭೆ ಮಾಡಿದರೆ ಬಿಡಲ್ಲ ಅಂತ ಹೇಳ್ತಾನೆ. ಅವನಿಗೆ ಧೈರ್ಯ ಇದ್ದರೆ ನಿಖಿಲ್ ಅವರ ಸಭೆಯನ್ನು ತಡೆಯಲಿ ಎಂದು ಸವಾಲು ಹಾಕಿದರು ಅವರು.

ಅವನ ಕ್ರಿಮಿನಲ್ ಹಿಸ್ಟರಿ ಏನು, ರೌಡಿಶೀಟರ್ ಆಗಿದ್ದಾನಾ ಅಂತ ಬೆಂಗಳೂರಿನ ಪೊಲೀಸ್ ಇಲಾಖೆ, ಪೊಲೀಸ್ ಕಮೀಷನರ್ ಅವರು ಚೆಕ್ ಮಾಡಬೇಕು. ಕಳೆದ 5–6 ತಿಂಗಳ ಸಿಸಿ ಟಿವಿ ದೃಶ್ಯಾವಳಿ ಪರಿಶೀಲನೆ ಮಾಡಬೇಕು. ಹೊಸ ಕೋಟೆ ಕಾಲೇಜಿನಲ್ಲಿ ಓದಿದ ದಿನದಿಂದ ಏನೇನು ಮಾಡಿದ್ದಾನೆ ಅಂತ ಎಲ್ಲರಿಗೂ ಗೊತ್ತು. ದೇವೇಗೌಡರ ಕುಟುಂಬ, ಕುಮಾರಸ್ವಾಮಿ ಮಗನ ಬಗ್ಗೆ ಅವಹೇಳನ ಕಾರಿಯಾಗಿ ಮಾತಾಡೋದು ಸರಿಯಲ್ಲ. ಇದನ್ನು ಸಾಮಾನ್ಯ ಜನರು ಕೂಡ ಖಂಡಿಸುತ್ತಿದ್ದಾರೆ. ಸೋಶಿಯಲ್ ಮೀಡಿಯಾದಲ್ಲಿ ಪ್ರತಿಕ್ರಿಯೆ ಹಾಕಿ ಆಕ್ರೋಶ ವ್ಯಕ್ತಪಡಿಸುತ್ತಿದ್ದಾರೆ. ಇಂಥ ದುರಹಂಕಾರ ಮುಂದುವರೆದರೆ ಸರಿಯಾಗಿ ಕಲಿಸಬೇಕಾಗುತ್ತದೆ ಎಂದು ಅವರು ಎಚ್ಚರಿಕೆ ನೀಡಿದರು.

# ಬೆಂಗಳೂರು ಆಸುಪಾಸಿನಲ್ಲಿ ಕೋಟ್ಯಂತರ ರೂ. ಮೌಲ್ಯದ ಸರ್ಕಾರಿ ಭೂಮಿ ಕಬಳಿಕೆ: ಸಚಿವ ಬಾಲಕೃಷ್ಣ ವಿರುದ್ಧ ಜೆಡಿಎಸ್ ಆರೋಪ

**ಬೆಂಗಳೂರು, ಅ.1:** ನಗರದ ಸುತ್ತಮುತ್ತ ನಕಲಿ ದಾಖಲೆ ಸೃಷ್ಟಿಸಿ ಸರ್ಕಾರಿ ಭೂಮಿ ಕಬಳಿಸುವವರಿಗೆ ರಾಜ್ಯ ಸರ್ಕಾರ ಬೆಂಬಲವಾಗಿ ನಿಂತಿದೆ ಎಂದು ಮಾಗಡಿ ಮಾಜಿ ಶಾಸಕ ಎ.ಮಂಜುನಾಥ್ ಗಂಭೀರ ಆರೋಪ ಮಾಡಿದರು.

ಸುದ್ದಿಗೋಷ್ಠಿಯಲ್ಲಿ ಆರೋಪಕ್ಕೆ ಸಂಬಂಧಿಸಿದ ಕೆಲವು ದಾಖಲೆ ಪತ್ರಗಳನ್ನು ಪ್ರದರ್ಶಿಸಿದ ಅವರು, ಸರ್ಕಾರಿ ಭೂಮಿ ನಕಲಿ ದಾಖಲೆ ಮೂಲಕ ಕಬಳಿಸುವ ಬಗ್ಗೆ ಹಿಂದಿನ ಮುಖ್ಯಮಂತ್ರಿ, ಈಗಿನ ಮುಖ್ಯಮಂತ್ರಿ, ಕಂದಾಯ ಸಚಿವರು, ಕಂದಾಯ ಇಲಾಖೆ ಪ್ರಧಾನ ಕಾರ್ಯದರ್ಶಿಗೆ ದೂರು ನೀಡಿದರೂ ಯಾವುದೇ ಪ್ರಯೋಜನವಾಗಿಲ್ಲ ಎಂದು ಬೇಸರ ವ್ಯಕ್ತಪಡಿಸಿದರು.

ಕೊಡಿಗೇಹಳ್ಳಿ ಗ್ರಾಮದ 14 ಎಕರೆ ಭೂಮಿಯನ್ನು ಚಂದ್ರನ್, ಪ್ರಸಾದ್, ದಿವ್ಯಾ, ದೇವರಾಜ್ ಎಂಬುವವರ ಹೆಸರಿನಲ್ಲಿ ಸರ್ಕಾರಿ ಜಮೀನನ್ನು ಕಬಳಿಸಲಾಗಿದೆ. ಚಂದ್ರನ್ ಎಂಬುವವರು 1957 ರಲ್ಲಿ ಜನಿಸಿರುವುದಾಗಿ ಅವರ ಆಧಾರ್ ದಾಖಲೆಯಲ್ಲಿದೆ. ಆದರೆ ಅವರಿಗೆ 1954 ರಲ್ಲೇ ಸರ್ಕಾರಿ ಭೂಮಿ ಮಂಜೂರಾಗಿರುವ ದಾಖಲೆಯಿದೆ. ಅಂದರೆ ಹುಟ್ಟುವ ಮುನ್ನವೇ ಜಮೀನು ಮಂಜೂರಾಗಿರುವ ದಾಖಲೆಯಿದೆ. ಸುಮಾರು 500 ರಿಂದ 600 ಕೋಟಿ ರೂ. ಬೆಲೆಬಾಳುವ ಜಮೀನನ್ನು ಕಬಳಿಸಲಾಗಿದೆ ಎಂದು ಆರೋಪಿಸಿದರು.



ಬೆಂಗಳೂರು ಸುತ್ತಮುತ್ತ ಈ ರೀತಿ ನಡೆಯುತ್ತಿರುವ ಹಗಲು ದರೋಡೆಗೆ ಕಡಿವಾಣ ಹಾಕಿ ತಪ್ಪಿತಸ್ಥರಿಗೆ ಕಠಿಣ ಶಿಕ್ಷೆ ವಿಧಿಸಲು ಸಾಧ್ಯವಾಗುತ್ತದೆಯೇ ಎಂದು ಸರ್ಕಾರವನ್ನು ಪ್ರಶ್ನಿಸಿದರು. ತಾವರೆಕೆರೆ ಬಳಿಯ ಕುರುಬರಹಳ್ಳಿ ಗ್ರಾಮದಲ್ಲಿ 26 ಎಕರೆ ಜಮೀನನ್ನು ನಕಲಿ ದಾಖಲೆ ಮೂಲಕ ಕಬಳಿಸ ಲಾಗಿದೆ. ಆ ಗ್ರಾಮಕ್ಕೆ ಸಂಬಂಧಿಸಿದವರ ಹೆಸರಿಗೆ ಜಮೀನು ಮಂಜೂರಾಗಿದ್ದು, ಜಮೀನು ಉಳುಮೆ ಮಾಡುವ ರೈತರಿಗೆ ಮಂಜೂರಾತಿ ಮಾಡಿಲ್ಲ ಎಂದು ಆರೋಪಿಸಿದರು.ಇಂತಹ ವಿಚಾರಗಳನ್ನು ಕೇಂದ್ರ ಸಚಿವ ಎಚ್.ಡಿ.ಕುಮಾರಸ್ವಾಮಿಯವರು ಪ್ರಶ್ನಿಸಬಾರದೇ ಎಂದ ಅವರು, ಕಾಂಗ್ರೆಸ್ ಸರ್ಕಾರ ಅಧಿಕಾರಕ್ಕೆ ಬಂದ ನಂತರ ಸರ್ಕಾರಿ ಭೂಮಿ ಕಬಳಿಕೆ ಆಗುತ್ತಿದೆ ಎಂದು ಮಂಜುನಾಥ್ ಹೇಳಿದರು.ರಾಜಕಾರಣಿಗಳ ಬೆಂಬಲಿಗರಿಗೆ, ಬೇನಾಮಿದಾರರಿಗೆ ಈ ರೀತಿ ಜಮೀನು ಮಂಜೂರಾಗಿರುವ ನಿದರ್ಶನಗಳಿದ್ದು, ಸರ್ಕಾರ ತನಿಖೆ ನಡೆಸಿ ತಪ್ಪಿತಸ್ಥರ ವಿರುದ್ಧ ಕ್ರಮ ಜರುಗಿಸಬೇಕು ಎಂದು ಅವರು ಒತ್ತಾಯಿಸಿದರು.

### ಹೋರಾಟದಿಂದ ಹಿಂದಕ್ಕೆ :

ಕೇಂದ್ರ ಸಚಿವ ಎಚ್.ಡಿ.ಕುಮಾರ ಸ್ವಾಮಿಯವರು ಮುಖ್ಯಮಂತ್ರಿಯಾಗಿದ್ದ ಅವಧಿಯಲ್ಲಿ ಬಿಡದಿ ಉಪನಗರ ಯೋಜನೆಗೆ ಅಧಿಸೂಚನೆ ಹೊರಡಿಸ ಲಾಗಿತ್ತು ಎಂಬ ದಾಖಲೆಯನ್ನು ಪೌರಾಡಳಿತ ಸಚಿವ ಎಚ್.ಸಿ.ಬಾಲಕೃಷ್ಣ ಅವರು ಒದಗಿಸಿದರೆ ಹೋರಾಟದಿಂದ ಹಿಂದೆ ಸರಿಯಲಾಗುವುದು ಎಂದು ಅವರು ಹೇಳಿದರು. ಕುಮಾರಸ್ವಾಮಿ ಯವರ ಅವಧಿಯಲ್ಲಿ ಅಧಿಸೂಚನೆ ಹೊರಡಿಸಲಾಗಿತ್ತು ಎಂದು ಆರೋಪಿಸುತ್ತಾರೆ. ಪ್ರಾಥಮಿಕ ಅಧಿಸೂಚನೆ ಹೊರಡಿಸುವ ಸಂದರ್ಭದಲ್ಲಿ ರೈತರ ವಿರೋಧ ವ್ಯಕ್ತವಾದ ಹಿನ್ನೆಲೆಯಲ್ಲಿ ಯೋಜನೆಯನ್ನು ಕೈಬಿಡಲಾಗಿತ್ತು. ಆದರೆ ಈ ಸರ್ಕಾರವೇ ಹಠಕ್ಕೆ ಬಿದ್ದು ಬಿಡದಿ ಉಪನಗರ ಯೋಜನೆಯನ್ನು ರೈತರ ವಿರೋಧದ ನಡುವೆ ಅನುಷ್ಠಾನಕ್ಕೆ ತರಲು ಮುಂದಾಗಿದೆ

# ‘ಅನ್ನಸೇವಾ’ ಮೊಬೈಲ್ ಆಪ್‌ಗೆ ಪ್ರಾಯೋಗಿಕ ಚಾಲನೆ

**ಬೆಂಗಳೂರು, ಅ.1:** ಪಡಿತರ ಚೀಟಿಯ ಫಲಾನುಭವಿಗಳು ಇ–ಕೆವೈಸಿ ಯನ್ನು ಅಪ್‌ಡೇಟ್ ಮಾಡಿಸಲು ಅನುಕೂಲವಾಗುವಂತೆ, ಹಾಗೂ ನ್ಯಾಯಬೆಲೆ ಅಂಗಡಿ ಮುಂದೆ ಸರತಿ ಸಾಲ್ಲಿನಲ್ಲಿ ನಿಲ್ಲುವುದನ್ನು ತಪ್ಪಿಸುವ ಸಲುವಾಗಿ ನೂತನವಾಗಿ ಅಭಿವೃದ್ಧಿಪಡಿಸಲಾಗಿರುವ ಅನ್ನ ಸೇವಾ ಮೊಬೈಲ್ ಆಪ್‌ಗೆ ಆಹಾರ ನಾಗರಿಕ ಸರಬರಾಜು ಗ್ರಾಹಕರ ವ್ಯವಹಾರಗಳ ಹಾಗೂ ಕಾನೂನು ಮಾಪನಶಾಸ್ತ್ರ ಇಲಾಖೆಯ ಸಚಿವ ರಿಜ್ವಾನ್ ಅರ್ಷದ್ ಅವರು ಗುರುವಾರ ಪ್ರಾಯೋಗಿಕವಾಗಿ ಚಾಲನೆ ನೀಡಿದರು.

ಶಿವಾಜಿನಗರದ ರಾಜೀವ್ ಗಾಂಧಿ ಕಾಲೋನಿಯಲ್ಲಿ ಗುರುವಾರ ಆಯೋಜಿಸಿದ್ದ ಕಾರ್ಯಕ್ರಮದಲ್ಲಿ ಆಪ್‌ಗೆ ಚಾಲನೆ ನೀಡಿ ಮಾತನಾಡಿದ ಅವರು. ಪಡಿತರ ಫಲಾನುಭವಿಗಳು ಸರಳ, ಅನುಕೂಲಕರ ಹಾಗೂ ಸುಲಭವಾಗಿ ಇ–ಕೆವೈಸಿ ಪ್ರಕ್ರಿಯೆಯನ್ನು ತಾವೇ ಖುದ್ದಾಗಿ ಮೊಬೈಲ್ ಆಪ್ ಮೂಲಕ ಡೌನ್‌ಲೋಡ್ ಮಾಡಿಕೊಂಡು ಅ.20ರವರೆಗೆ ಇ–ಕೆವೈಸಿ



ಅಪ್‌ಡೇಟ್ ಮಾಡಲು ಅವಧಿಯನ್ನು ವಿಸ್ತರಿಸಲಾಗಿದೆ ಎಂದರು.

### 30 ವರ್ಷ ಸೇವೆ ಸಲ್ಲಿಸಿದ ಕಾರ್ಮಿಕರಿಗೆ ಭದ್ರತೆ ಕಲ್ಪಿಸಲು ಸಚಿವ ಚಲುವರಾಯಸ್ವಾಮಿ ಸೂಚನೆ

# ಕಾರ್ಮಿಕರ ಬಾಕಿ ವೇತನ, ಪಿಎಫ್, ಇಎಸ್‌ಐ ಸಮಸ್ಯೆ ಬಗೆಹರಿಸಲು ರಾಜ್ಯ ಸರ್ಕಾರ ಬದ್ಧ

**ಬೆಂಗಳೂರು, ಅ.1:** ತುಂಗಭದ್ರಾ ನೀರಾವರಿ ಯೋಜನೆಯಡಿ ಹಲವು ವರ್ಷಗಳಿಂದ ಸೇವೆ ಸಲ್ಲಿಸುತ್ತಿರುವ ಕಾರ್ಮಿಕರ ವಿವಿಧ ಸಮಸ್ಯೆಗಳನ್ನು ಪರಿಹರಿಸಲು ಸರ್ಕಾರ ಬದ್ಧವಾಗಿದ್ದು, ಕಾರ್ಮಿಕರ ನ್ಯಾಯಸಮ್ಮತ ಬೇಡಿಕೆಗಳನ್ನು ನಿಯಮಾನುಸಾರ ಪರಿಶೀಲಿಸಿ ಸೂಕ್ತ ಕ್ರಮ ಕೈಗೊಳ್ಳಲಾಗುವುದು ಎಂದು ಬೃಹತ್ ಮತ್ತು ಮಧ್ಯಮ ನೀರಾವರಿ ಸಚಿವ ಎನ್. ಚಲುವರಾಯಸ್ವಾಮಿ ತಿಳಿಸಿದರು.

ವಿಕಾಸಸೌಧದ ಜಲಸಂಪನ್ಮೂಲ ಸಚಿವರ ಕಚೇರಿಯಲ್ಲಿ ತುಂಗಭದ್ರಾ ನೀರಾವರಿ ಕಾರ್ಮಿಕರ ವಿವಿಧ ಸಮಸ್ಯೆಗಳ ಕುರಿತು ಸಚಿವ ಎನ್. ಚಲುವರಾಯಸ್ವಾಮಿ ಅವರ ಅಧ್ಯಕ್ಷತೆಯಲ್ಲಿ ಸಭೆ ನಡೆಯಿತು. ಸಭೆಯಲ್ಲಿ ಸಣ್ಣ ನೀರಾವರಿ, ವಿಜ್ಞಾನ ಮತ್ತು ತಂತ್ರಜ್ಞಾನ ಹಾಗೂ ರಾಯಚೂರು ಜಿಲ್ಲಾ ಉಸ್ತುವಾರಿ ಸಚಿವ ಡಾ.ಅಜಯ್ ಧರ್ಮಸಿಂಗ್, ವಿಧಾನಪರಿಷತ್ ಸದಸ್ಯ ಎನ್. ಎಸ್.ಭೋಸರಾಜು, ಕರ್ನಾಟಕ ನೀರಾವರಿ ನಿಗಮದ ವ್ಯವಸ್ಥಾಪಕ ನಿರ್ದೇಶಕ ರಾಥೋಡ್, ಸಚಿವರ ಆಪ್ತ ಕಾರ್ಯದರ್ಶಿ ಎ.ಆರ್.ರವಿ ಹಾಗೂ ತುಂಗಭದ್ರಾ ನೀರಾವರಿ ಕಾರ್ಮಿಕರ ಸಂಘದ ಕೇಂದ್ರ ಸಮಿತಿಯ ಅಧ್ಯಕ್ಷರು ಮತ್ತು ಪದಾಧಿಕಾರಿಗಳು ಭಾಗವಹಿಸಿದ್ದರು.

ಸಭೆಯಲ್ಲಿ ಕಾರ್ಮಿಕ ಸಂಘದ ಪದಾಧಿಕಾರಿಗಳು ತಮ್ಮ ಪ್ರಮುಖ ಬೇಡಿಕೆಗಳನ್ನು ಸಚಿವರ ಗಮನಕ್ಕೆ ತಂದರು. 25 ರಿಂದ 30 ವರ್ಷಗಳಿಂದ ತುಂಗಭದ್ರಾ ನೀರಾವರಿ ವ್ಯಾಪ್ತಿಯಲ್ಲಿ ಸೇವೆ ಸಲ್ಲಿಸುತ್ತಿರುವ ಕಾರ್ಮಿಕರಿಗೆ ಉದ್ಯೋಗ ಭದ್ರತೆ ಕಲ್ಪಿಸಬೇಕು, ವರ್ಷಪೂರ್ತಿ ಕೆಲಸ ನೀಡಬೇಕು ಎಂದು ಮನವಿ ಮಾಡಿದರು. ಸುದೀರ್ಘ ಅವಧಿಯಿಂದ ಸೇವೆ ಸಲ್ಲಿಸುತ್ತಿದ್ದರೂ ಗುತ್ತಿಗೆ ಆಧಾರದ ಮೇಲೆ ಕಾರ್ಯನಿರ್ವಹಿಸುತ್ತಿರುವುದರಿಂದ ಕಾರ್ಮಿಕರಿಗೆ ಸೇವಾ ಭದ್ರತೆ ಇಲ್ಲದಂತಾಗಿದೆ ಎಂದು ತಿಳಿಸಿದರು.

ಹಲವು ತಿಂಗಳಿಂದ ಬಾಕಿ ಉಳಿದಿರುವ ವೇತನವನ್ನು ಕೂಡಲೇ ಬಿಡುಗಡೆ ಮಾಡಬೇಕು ಹಾಗೂ ಕಾರ್ಮಿಕರ ವೇತನವನ್ನು ಹೆಚ್ಚಿಸಬೇಕು ಎಂದು ಸಚಿವರಲ್ಲಿ ಮನವಿ ಮಾಡಲಾಯಿತು. ಪ್ರಸ್ತುತ ದೊರೆಯುತ್ತಿರುವ ವೇತನವು ಜೀವನ ನಿರ್ವಹಣೆಗೆ ಸಾಕಾಗುತ್ತಿಲ್ಲ. ವೇತನ ಪಾವತಿಯಲ್ಲಿ ವಿಳಂಬವಾಗುತ್ತಿರುವುದ



ರಿಂದ ಕಾರ್ಮಿಕರು ಮತ್ತು ಅವರ ಕುಟುಂಬಗಳು ಆರ್ಥಿಕ ಸಂಕಷ್ಟ ಎದುರಿಸುತ್ತಿವೆ ಎಂದು ಸಂಘದ ಪದಾಧಿಕಾರಿಗಳು ಗಮನಕ್ಕೆ ತಂದರು.

ಕಾರ್ಮಿಕರಿಗೆ ಸೌಲಭ್ಯಗಳನ್ನು ಸಮರ್ಪಕವಾಗಿ ಕಲ್ಪಿಸಬೇಕು, ವೇತನವನ್ನು ನೇರವಾಗಿ ಕಾರ್ಮಿಕರ ಖಾತೆಗೆ ಪಾವತಿಸುವ ವ್ಯವಸ್ಥೆ ಮಾಡಬೇಕು ಸೇರಿದಂತೆ ವಿವಿಧ ಬೇಡಿಕೆಗಳನ್ನು ಸಭೆಯಲ್ಲಿ ಪ್ರಸ್ತಾಪಿಸಲಾಯಿತು. ಕಾರ್ಮಿಕರ ಅಹವಾಲುಗಳನ್ನು ಆಲಿಸಿದ ಸಚಿವ ಎನ್. ಚಲುವರಾಯಸ್ವಾಮಿ ಅವರು, ಕಾರ್ಮಿಕರು ಹಲವು ವರ್ಷಗಳಿಂದ ಸಲ್ಲಿಸುತ್ತಿರುವ ಸೇವೆಯನ್ನು ಪರಿಗಣಿಸಿ ಅವರ ಸಮಸ್ಯೆಗಳನ್ನು ಗಂಭೀರವಾಗಿ ಪರಿಶೀಲಿಸಲಾಗುವುದು ಎಂದು ತಿಳಿಸಿದರು.

# ಸಮಾಜಸೇವಕ ವೂಡೇ ಪಿ. ಕೃಷ್ಣಗೆ ಮಹಾತ್ಮಗಾಂಧಿ ಸೇವಾ ಪ್ರಶಸ್ತಿ

**ಬೆಂಗಳೂರು, ಅ.1:** ಗಾಂಧಿ ಜಯಂತಿ ಅಂಗವಾಗಿ ನೀಡಲಾಗುವ ಪ್ರತಿಷ್ಠಿತ 'ಮಹಾತ್ಮ ಗಾಂಧಿ ಸೇವಾ ಪ್ರಶಸ್ತಿ–ಕರ್ನಾಟಕ 2026'ಕ್ಕೆ ಸಮಾಜ ಸೇವಕ 'ಡಾ. ವೂಡೇ ಪಿ. ಕೃಷ್ಣ' ಭಾಜನರಾಗಿದ್ದಾರೆ.

ಕರ್ನಾಟಕ ಸರ್ಕಾರದ ವಾರ್ತಾ ಮತ್ತು ಸಾರ್ವಜನಿಕ ಸಂಪರ್ಕ ಇಲಾಖೆಯ ವತಿಯಿಂದ ರಾಜ್ಯಾದ್ಯಂತ ಗಾಂಧಿ ಜಯಂತಿಯನ್ನು ಅರ್ಥಪೂರ್ಣವಾಗಿ ಆಚರಿಸಲು ಹಾಗೂ ಗಾಂಧೀಜಿಯವರ ತತ್ವಾದರ್ಶಗಳನ್ನು ಪಾಲಿಸುತ್ತಿರುವ ಶ್ರೇಷ್ಠ ವ್ಯಕ್ತಿಗಳು ಅಥವಾ ಸಂಸ್ಥೆಗಳಿಗೆ ಈ



ಪ್ರಶಸ್ತಿಯನ್ನು ನೀಡಿ ಗೌರವಿಸಲಾಗುತ್ತಿದೆ.

ಉಚ್ಚ ನ್ಯಾಯಾಲಯದ ನಿವೃತ್ತ ನ್ಯಾಯಮೂರ್ತಿ ಟಿ. ಜಿ. ಶಿವಶಂಕರೇಗೌಡ ಅವರ ಅಧ್ಯಕ್ಷತೆಯಲ್ಲಿ ರಚಿಸಲಾಗಿದ್ದ ಆಯ್ಕೆ ಸಮಿತಿಯು ಪ್ರಶಸ್ತಿಗಾಗಿ ಸ್ವೀಕರಿಸಲಾಗಿದ್ದ ಒಟ್ಟು 06 ಸಂಸ್ಥೆಗಳು ಹಾಗೂ 24 ವ್ಯಕ್ತಿಗಳ ಅರ್ಹತೆ ಹಾಗೂ ಸೇವಾ ವಿವರಗಳನ್ನು ಸುದೀರ್ಘವಾಗಿ ಪರಿಶೀಲಿಸಿ ಡಾ. ವೂಡೇ ಪಿ. ಕೃಷ್ಣ ಅವರನ್ನು 2026ನೇ ಸಾಲಿನ ಪ್ರಶಸ್ತಿಗೆ ಸರ್ವಾನುಮತದಿಂದ ಆಯ್ಕೆ ಮಾಡಿದೆ.

## ಶಿಕ್ಷಣ ಸಂಸ್ಥೆಗಳಿಗೆ ಭೇಟಿನೀಡಿ ಶೈಕ್ಷಣಿಕ ಪ್ರಗತಿ ವಿಚಾರ ವಿನಿಮಯ ನಡೆಸಿದ ಮಾಜಿ ಶಾಸಕ ಸೋಮಶೇಖರರೆಡ್ಡಿ



ಬಳ್ಳಾರಿ ಅ 01. ಬಳ್ಳಾರಿಯ ಕೌಲ್ ಬಜಾರ್ ಮಂಡಲದ ವ್ಯಾಪ್ತಿಯ ವಿವಿಧ ಶಿಕ್ಷಣ ಸಂಸ್ಥೆಗಳಿಗೆ ಭೇಟಿ ನೀಡಿ, ಶಿಕ್ಷಕರು ಹಾಗೂ ಶಿಕ್ಷಣ ಕ್ಷೇತ್ರದ ಪ್ರಮುಖರೊಂದಿಗೆ ಆತ್ಮೀಯವಾಗಿ ಸಮಾಲೋಚನೆ ನಡೆಸಿ, ಶಿಕ್ಷಣ ಕ್ಷೇತ್ರದ ಅಭಿವೃದ್ಧಿ, ಶಿಕ್ಷಕರ ಹಿತಾಸಕ್ತಿ ಹಾಗೂ ಶೈಕ್ಷಣಿಕ ಪ್ರಗತಿಯ ಕುರಿತು ಮಾಜಿ ಶಾಸಕ ಗಾಲಿ ಸೋಮಶೇಖರರೆಡ್ಡಿ ವಿಚಾರ ವಿನಿಮಯ ನಡೆಸಿದರು.

ಶಿಕ್ಷಣ ಕ್ಷೇತ್ರದಿಂದ ಭಾರತೀಯ ಜನತಾ ಪಕ್ಷದ ಅಭ್ಯರ್ಥಿಯಾಗಿ ಸ್ಪರ್ಧಿಸುತ್ತಿರುವ ಶಶಿಲ್ ಜಿ. ನಮೋಶಿ ಅವರ ಪರವಾಗಿ ಶಿಕ್ಷಕರು ಹಾಗೂ ಶಿಕ್ಷಣ ಕ್ಷೇತ್ರದ ಮತದಾರರಲ್ಲಿ ಮತಯಾಚಿಸಿ, ಅವರ ಬೆಂಬಲವನ್ನು ಕೋರಲಾಯಿತು.

ಶಿಕ್ಷಣ ಕ್ಷೇತ್ರದ ಧ್ವನಿಯನ್ನು ವಿಧಾನ ಪರಿಷತ್ತಿನಲ್ಲಿ ಸಮರ್ಥವಾಗಿ ಪ್ರತಿನಿಧಿಸುವ ಸಂಕಲ್ಪದೊಂದಿಗೆ, ಶಶಿಲ್ ನಮೋಶಿ ಅವರ ಪರವಾಗಿ ಒಗ್ಗಟ್ಟಿನಿಂದ ಬೆಂಬಲ ನೀಡುವಂತೆ ಮನವಿ ಮಾಡಲಾಯಿತು.

## 25 ಸಾವಿರ ಬರ ಪರಿಹಾರ, ಸಾಲಮನ್ನಾಕ್ಕೆ ಜೆಡಿಎಸ್ ಆಗ್ರಹ




**ರಾಯಚೂರು, ಅ. 1:** ಬರ ಪರಿಹಾರವಾಗಿ ಪ್ರತಿ ಎಕರೆಗೆ 25 ಸಾವಿರ ನೀಡಬೇಕು. ರೈತರ ಸಂಪೂರ್ಣ ಸಾಲಮನ್ನಾ ಮಾಡಬೇಕು ಹಾಗೂ ಕೃಷಿ ಚಟುವಟಿಕೆಗಳಿಗೆ ದಿನಕ್ಕೆ 12 ತಾಸು ವಿದ್ಯುತ್ ಪೂರೈಸಬೇಕು ಎಂದು ಒತ್ತಾಯಿಸಿ, ಜಾತ್ಯಾತೀತ ಜನತಾದಳ (ಜೆಡಿಎಸ್) ಕಾರ್ಯಕರ್ತರು ನಗರದ ಡಾ.ಬಿ.ಆರ್. ಅಂಬೇಡ್ಕರ್ ವೃತ್ತದಲ್ಲಿ ಪ್ರತಿಭಟನೆ ನಡೆಸಿದರು.

ಪ್ರತಿಭಟನೆಯಲ್ಲಿ ಭಾಗವಹಿಸಿದ್ದ ನೂರಾರು ರೈತರು ಸರ್ಕಾರದ ವಿರುದ್ಧ ಆಕ್ರೋಶ ವ್ಯಕ್ತಪಡಿಸಿದರು. ಸಂಕಷ್ಟಕ್ಕೊಳಗಾದ ಪ್ರತಿ ರೈತರಿಗೆ 2,500 ನೀಡುವುದಾಗಿ ಸರ್ಕಾರ ಘೋಷಿಸಿರುವುದು ರೈತರಿಗೆ ಮಾಡಿದ ಅವಮಾನವಾಗಿದೆ ಎಂದು ಆರೋಪಿಸಿದರು.

ದೇವದುರ್ಗ ಶಾಸಕಿ ಜಿ. ಕರೆಮ್ಮ ನಾಯಕ ಮಾತನಾಡಿ, ಕಾಂಗ್ರೆಸ್ ಸರ್ಕಾರ ಅಧಿಕಾರಕ್ಕೆ ಬರುವ ಮುನ್ನ ವಿವಿಧ ಗ್ಯಾರಂಟಿ ಯೋಜನೆಗಳನ್ನು ಘೋಷಿಸಿ, ಅಧಿಕಾರಕ್ಕೆ ಬಂದ ಬಳಿಕ ಅವುಗಳ ಅನುಷ್ಠಾನದಲ್ಲಿ ತಾರತಮ್ಯ ಮಾಡುತ್ತಿದೆ. ರೈತರ ಸಮಸ್ಯೆಗಳಿಗೆ ಸರ್ಕಾರ ಪ್ರಾಮಾಣಿಕವಾಗಿ ಸ್ಪಂದಿಸುತ್ತಿಲ್ಲ ಎಂದು ದೂರಿದರು.

ರಾಜ್ಯದಲ್ಲಿ ಬರ ಪರಿಸ್ಥಿತಿ ನಿರ್ಮಾಣವಾಗಿದ್ದರೂ ರೈತರಿಗೆ ಸಮರ್ಪಕ ಪರಿಹಾರ ನೀಡುವಲ್ಲಿ ಸರ್ಕಾರ ವಿಫಲವಾಗಿದೆ. ಬರಪೀಡಿತ ತಾಲ್ಲೂಕುಗಳನ್ನು ಘೋಷಿಸಿದ ಬಳಿಕ ಪ್ರತಿ ಎಕರೆಗೆ ಕನಿಷ್ಠ ?25 ಸಾವಿರ ಪರಿಹಾರ ನೀಡಬೇಕು ಎಂಬುದು ರೈತರ ಪ್ರಮುಖ ಬೇಡಿಕೆಯಾಗಿದೆ. ಈ ಕುರಿತು ವಿಧಾನಸಭೆಯ ವಿಶೇಷ ಅಧಿವೇಶನದಲ್ಲಿಯೂ ಶಾಸಕರು ಧ್ವನಿ ಎತ್ತಿದ್ದರೂ ಸರ್ಕಾರ ಸಮರ್ಪಕವಾಗಿ ಸ್ಪಂದಿಸಿಲ್ಲ ಎಂದರು.

> ಉತ್ತರ ಕರ್ನಾಟಕದಲ್ಲಿ ಕೈಗಾರಿಕೆಗಳನ್ನು ಸ್ಥಾಪಿಸಿ ಸ್ಥಳೀಯವಾಗಿ ಉದ್ಯೋಗ ಸೃಷ್ಟಿಸಬೇಕು. ರೈತರು, ಯುವಕರು ಗುಳೆ ಹೋಗುವ ಪರಿಸ್ಥಿತಿ ತಪ್ಪಿಸಲು ಸರ್ಕಾರ ವಿಶೇಷ ಕ್ರಮ ಕೈಗೊಳ್ಳಬೇಕು– ಜಿ. ಕರೆಮ್ಮ ನಾಯಕ, ದೇವದುರ್ಗ ಶಾಸಕಿ.

ರೈತ ಕುಟುಂಬಕ್ಕೆ ರೂ.2,500 ಪರಿಹಾರ ನೀಡುವುದರಿಂದ ಅವರ ಸಮಸ್ಯೆ ಬಗೆಹರಿಯುವುದಿಲ್ಲ. ಬೆಳೆ ನಷ್ಟದ ಪ್ರಮಾಣವನ್ನು ವೈಜ್ಞಾನಿಕವಾಗಿ ಅಂದಾಜಿಸಿ, ಅದಕ್ಕೆ ಅನುಗುಣವಾಗಿ ಪರಿಹಾರ ನೀಡಬೇಕು ಎಂದು ಆಗ್ರಹಿಸಿದರು.

ಮಾಜಿ ಮುಖ್ಯಮಂತ್ರಿ ಎಚ್.ಡಿ.ಕುಮಾರಸ್ವಾಮಿ ಅವರ ಆಡಳಿತಾವಧಿಯಲ್ಲಿ ರೈತರ ಸಾಲಮನ್ನಾ ಸೇರಿದಂತೆ ರೈತಪರ ಕಾರ್ಯಕ್ರಮಗಳಿಗೆ ಆದ್ಯತೆ ನೀಡಲಾಗಿತ್ತು. ರೈತರ ಆತ್ಮಹತ್ಯೆ ಪ್ರಕರಣಗಳಲ್ಲಿ ಕುಟುಂಬಕ್ಕೆ ನೆರವು ನೀಡುವ ಮೂಲಕ ಮಾನವೀಯತೆ ಮೆರೆದಿದ್ದರು' ಎಂದರು.

ರೈತರು ಜಾತಿ, ಪಕ್ಷಭೇದ ಮರೆತು ಒಗ್ಗಟ್ಟಾಗಿ ತಮ್ಮ ಹಕ್ಕುಗಳಿಗಾಗಿ ಹೋರಾಟ ನಡೆಸಬೇಕು. ಜಿಲ್ಲೆಯ ವಿವಿಧೆಡೆ ರೈತರ ಸಮಸ್ಯೆಗಳ ಕುರಿತು ಪ್ರತಿಭಟನೆಗಳು ನಡೆಯುತ್ತಿದ್ದು, ಸರ್ಕಾರ ಕೂಡಲೇ ಎಚ್ಚೆತ್ತುಕೊಂಡು ರೈತರ ಬೇಡಿಕೆಗಳನ್ನು ಈಡೇರಿಸಬೇಕು ಎಂದು ಆಗ್ರಹಿಸಿದರು.

## ಪ್ರಲ್ಹಾದ್ ಜೋಶಿ ಕುಟುಂಬದ ಕುರಿತು ಅವಹೇಳನಕಾರಿ ಹೇಳಿಕೆಗೆ ಕ್ಷಮೆಯಾಚಿಸಿದ ರಾಜ್ಯ ರೈತಸಂಘ



**ಹುಬ್ಬಳ್ಳಿ, ಅ.1:** ಕೇಂದ್ರ ಸಚಿವ ಪ್ರಹ್ಲಾದ್ ಜೋಶಿ ಅವರ ಕುಟುಂಬದ ಕುರಿತು ರೈತ ಮುಖಂಡ ಶಶಿಕಾಂತ ಗುರೂಜಿ ನೀಡಿದ್ದ ಅವಹೇಳನಕಾರಿ ಹೇಳಿಕೆ ತೀವ್ರ ವಿವಾದಕ್ಕೆ ಕಾರಣವಾಗಿದ್ದು, ಇದೀಗ ಕರ್ನಾಟಕ ರಾಜ್ಯ ರೈತ ಸಂಘವು ಕ್ಷಮೆಯಾಚಿಸಿದೆ.

ಹುಬ್ಬಳ್ಳಿಯ ಚೆನ್ನಮ್ಮ ವೃತ್ತದಲ್ಲಿ ಇತ್ತೀಚೆಗೆ ನಡೆದ ಪ್ರತಿಭಟನಾ ಸಭೆಯಲ್ಲಿ ಪಾಲ್ಗೊಂಡಿದ್ದ ರೈತ ಮುಖಂಡ ಶಶಿಕಾಂತ ಗುರೂಜಿ, ಕೇಂದ್ರ ಸಚಿವ ಪ್ರಹ್ಲಾದ್ ಜೋಶಿ ಅವರ ವಿರುದ್ಧ ತೀವ್ರ ಆಕ್ರೋಶ ವ್ಯಕ್ತಪಡಿಸಿದ್ದರು.

ಈ ವೇಳೆ ಜೋಶಿ ಅವರನ್ನು ಏಕವಚನದಲ್ಲಿ ವಾಗ್ದಾಳಿ ನಡೆಸಿದ್ದಲ್ಲದೆ, ಅವರ ಕುಟುಂಬದ ಕುರಿತು ಅನುಚಿತವಾಗಿ ಮಾತನಾಡಿದ್ದರು. ಗುರೂಜಿ ಅವರ ಹೇಳಿಕೆಯು ರಾಜಕೀಯ ವಲಯ ಹಾಗೂ ಸಚಿವರ ಅಭಿಮಾನಿಗಳಲ್ಲಿ ತೀವ್ರ ಆಕ್ರೋಶಕ್ಕೆ ಎಡೆ ಮಾಡಿಕೊಟ್ಟಿತ್ತು. ಶಶಿಕಾಂತ ಗುರೂಜಿ ಅವರ ಈ ಹೇಳಿಕೆಯು ಸಾರ್ವಜನಿಕವಾಗಿ ಮತ್ತು ಸಂಘಟನೆಯ ವಲಯದಲ್ಲಿ ತೀವ್ರ ಚರ್ಚೆಗೆ ಗ್ರಾಸವಾಗುತ್ತಿದ್ದಂತೆ ಎಚ್ಚೆತ್ತ ಕರ್ನಾಟಕ ರಾಜ್ಯ ರೈತಸಂಘ ಕ್ಷಮೆಯಾಚಿಸಿದೆ.

ರಾಜ್ಯ ರೈತಸಂಘಟನೆ ರಾಜ್ಯಾಧ್ಯಕ್ಷ ಚೂನ್ನಪ್ಪ ಕ್ಷಮೆಯಾಚಿಸಿ, ಯಾರೂ ಅನ್ಯತಾ ಭಾವಿಸಬೇಡಿ ಎಂದು ವಿಷಾದ ವ್ಯಕ್ತಪಡಿಸಿದ್ದಾರೆ.

## ಎಂಆರ್‌ಪಿಎಲ್ ದುರ್ಘಟನೆ: ಕಾರ್ಮಿಕನ ಸಾವಿಗೆ ಗರಿಷ್ಠ ಪರಿಹಾರಕ್ಕೆ ಆಗ್ರಹಿಸಿ ಕಾರ್ಮಿಕ ಸಂಘಟನೆಗಳಿಂದ ಸತ್ಯಾಗ್ರಹ




**ಮಂಗಳೂರು, ಅ.1:** ಮಂಗಳೂರು ರಿಫೈನರಿ ಆಂಡ್ ಪೆಟ್ರೋಕೆಮಿಕಲ್ಸ್ ಲಿಮಿಟೆಡ್ (ಎಂಆರ್‌ಪಿಎಲ್) ಸಂಸ್ಥೆಯ ಕೋಕರ್ ಹೈಡ್ರೋಟ್ರೀಟರ್ ಘಟಕದಲ್ಲಿ ಬುಧವಾರ ಸಂಭವಿಸಿದ ಭೀಕರ ಸ್ಫೋಟದಲ್ಲಿ ಬಲಿಯಾದ ಮೂಲ್ಕಿ ಮೂಲದ ಯುವ ಗುತ್ತಿಗೆ ಕಾರ್ಮಿಕ ಮನೀಶ್ ಕರ್ಕಡ ಸಾವಿಗೆ ನ್ಯಾಯ ಮತ್ತು ಗರಿಷ್ಠ ಪರಿಹಾರಕ್ಕೆ ಆಗ್ರಹಿಸಿ ಎಂಆರ್‌ಪಿಎಲ್ ಮುಖ್ಯ ದ್ವಾರದ ಮುಂಭಾಗ ಕಾರ್ಮಿಕ ಸಂಘಟನೆಗಳು ಗುರುವಾರ ಬೆಳಗ್ಗೆಯಿಂದಲೇ ಬೃಹತ್ ಧರಣಿ ಸತ್ಯಾಗ್ರಹ ನಡೆಸಿದವು.

ಎಂಆರ್‌ಪಿಎಲ್–ಒಎನ್‌ಜಿಸಿ ಕರ್ಮಚಾರಿ ಸಂಘ ಹಾಗೂ ಎಂಆರ್‌ಪಿಎಲ್ ಲೇಬರ್ ಯೂನಿಯನ್ ನೇತೃತ್ವದಲ್ಲಿ ನೂರಾರು ಕಾರ್ಮಿಕರು ಜಮಾಯಿಸಿ ಆಡಳಿತ ಮಂಡಳಿಯ ವಿರುದ್ಧ ತೀವ್ರ ಆಕ್ರೋಶ ಹೊರಹಾಕಿ, ಸ್ಥಳಕ್ಕೆ ಎಂಡಿ ಆಗಮಿಸುವಂತೆ ಪಟ್ಟುಹಿಡಿದರು. ಈ ವೇಳೆ ಮೂಡುಬಿದಿರೆ ಶಾಸಕ ಉಮಾನಾಥ ಕೋಟ್ಯಾನ್ ಅವರು ಆಡಳಿತ ಮಂಡಳಿ ಮತ್ತು ಕಾರ್ಮಿಕ ಸಂಘಟನಗಳ ನಡುವೆ ಸತತ ಸಂಧಾನ ನಡೆಸಿ, ಯೂನಿಯನ್‌ಗಳ ಪ್ರಮುಖ ಬೇಡಿಕೆಗಳನ್ನು ಈಡೇರಿಸು ವಲ್ಲಿ ಯಶಸ್ವಿಯಾಗಿದ್ದಾರೆ. ಸ್ಫೋಟದಲ್ಲಿ ಜೀವ ಕಳೆದುಕೊಂಡ ಗುತ್ತಿಗೆ ಕಾರ್ಮಿಕ ಮನೀಶ್ ಕರ್ಕಡ ಅವರ ಕುಟುಂಬಕ್ಕೆ ಎಂಆರ್‌ಪಿಎಲ್ ವತಿಯಿಂದ 90 ಲಕ್ಷ ರೂ. ನಷ್ಟ ಪರಿಹಾರ ನೀಡಲು ಸಂಸ್ಥೆಯ ಮ್ಯಾನೇಜಿಂಗ್ ಡೈರೆಕ್ಟರ್ ಅಧಿಕೃತವಾಗಿ ಸಮ್ಮತಿಸಿದ್ದಾರೆ ಸಂಸ್ಥೆ ಆವರಣದಲ್ಲಿ ಕೆಲಸ ಮಾಡುತ್ತಿರುವ ಕಾಯಂ ಉದ್ಯೋಗಿಗಳಷ್ಟೇ ಅಲ್ಲದೆ, ಅಪಾಯದ ನಡುವೆ ದುಡಿಯುತ್ತಿರುವ ಎಲ್ಲ ಗುತ್ತಿಗೆ ಕಾರ್ಮಿಕರ ಕುಟುಂಬಗಳಿಗೂ ಅನ್ವಯವಾಗುವಂತೆ ತಲಾ 10 ಲಕ್ಷ ರೂ. ಮೊತ್ತದ ಆರೋಗ್ಯ ವಿಮಾ ಸೌಲಭ್ಯವನ್ನು ಮುಂದಿನ 15 ದಿನಗಳ ಒಳಗಾಗಿ ಜಾರಿಗೆ ತರಲು ಒಪ್ಪಿಗೆ ನೀಡಿದ್ದಾರೆ ಎಂದು ಶಾಸಕರು ಮಾಹಿತಿ ನೀಡಿದ್ದಾರೆ.

ಧರಣಿ ಸ್ಥಳದಲ್ಲಿದ್ದ ಗೊಂದಲವನ್ನು ಶಮನಗೊಳಿಸಿ ಕಾರ್ಮಿಕರ ಹಿತರಕ್ಷಣೆ ಮಾಡಿರುವ ಕುರಿತು ಶಾಸಕ ಉಮಾನಾಥ ಕೋಟ್ಯಾನ್, ನಾನು ಕಾರ್ಮಿಕರಿಗೆ ನ್ಯಾಯ ಕೊಡಿಸಲು ಮಧ್ಯಸ್ಥಿಕೆ ವಹಿಸಿದೆ. ಎಂಆರ್‌ಪಿಎಲ್ ಎಂಡಿ ಜೊತೆ ಮುಖಾಮುಖಿ ಚರ್ಚೆ ನಡೆಸಿ ಕಾರ್ಮಿಕರ ಪರವಾಗಿ ನಿಂತೆ. ಎಂಆರ್‌ಪಿಎಲ್ ಎಂಡಿ ಅವರು ಮೃತನ ಕುಟುಂಬಕ್ಕೆ 90 ಲಕ್ಷ ರೂಪಾಯಿ ಪರಿಹಾರ ನೀಡುವುದಾಗಿ ಸ್ಪಷ್ಟಪಡಿಸಿದ್ದಾರೆ.ಗುತ್ತಿಗೆ ನೌಕರರೂ ಒಳಗೊಂಡಂತೆ ಎಲ್ಲ ಸಿಬ್ಬಂದಿ ಕುಟುಂಬಗಳಿಗೆ 15 ದಿನಗಳ ಒಳಗಾಗಿ 10 ಲಕ್ಷ ರೂ ಮೊತ್ತದ ಮೆಡಿಕಲ್ ಕ್ಲೈಮ್ ಇನ್ಶೂರೆನ್ಸ್ ಒದಗಿಸುವುದಾಗಿ ಭರವಸೆ ನೀಡಿದ್ದಾರೆ. ಕಾರ್ಮಿಕ ಸಂಘಟನೆಗಳ ಈ ಎರಡೂ ಪ್ರಮುಖ ಬೇಡಿಕೆಗಳನ್ನು ಪಾಸ್ ಮಾಡಿಸಲಾಗಿದೆ. ಎಲ್ಲ ಮುಖಂಡರ ಸಮ್ಮುಖದಲ್ಲೇ ಈ ತೀರ್ಮಾನವಾಗಿದ್ದು, ಈ ಎರಡೂ ಬೇಡಿಕೆಗಳ ಒಪ್ಪಿಗೆ ವಿವರವನ್ನು ಅಧಿಕೃತವಾಗಿ ಕಳುಹಿಸಿಕೊಡಲಿದ್ದಾರೆ ಎಂದರು.

### ಹತ್ತು ವರ್ಷಗಳಲ್ಲಿ ದಾಖಲಾದ ಅಸ್ವಾಭಾವಿಕ ಸಾವುಗಳ ಬಗ್ಗೆ ವಿವರ ಬಹಿರಂಗ

## 2025ರಿಂದ 2026ರ ನಡುವೆ 681 ಅಸ್ವಾಭಾವಿಕ ಮರಣ ಪ್ರಕರಣ ದಾಖಲು: ಪೊಲೀಸರ ಮಾಹಿತಿ



**ಧರ್ಮಸ್ಥಳ, ಅ.1:** ಧರ್ಮಸ್ಥಳ ಪೊಲೀಸ್ ಠಾಣೆ ವ್ಯಾಪ್ತಿಯಲ್ಲಿ ಕಳೆದ 10 ವರ್ಷಗಳ ಅವಧಿಯಲ್ಲಿ (2015 ರಿಂದ 2026ರ ಆರಂಭದವರೆಗೆ) ದಾಖಲಾದ ಅಸ್ವಾಭಾವಿಕ ಮರಣ ಪ್ರಕರಣಗಳು ಹಾಗೂ ಅಪರಿಚಿತ ಶವಗಳ ಮರಣೋತ್ತರ ಪರೀಕ್ಷೆಗೆ ಸಂಬಂಧಿಸಿದ ಮಾಹಿತಿ ಬಹಿರಂಗಗೊಂಡಿದೆ.

ಧರ್ಮಸ್ಥಳ ಪೊಲೀಸ್ ಉಪ ನಿರೀಕ್ಷಕರು (ಪಿಎಸ್‌ಐ) ನೀಡಿರುವ ಅಧಿಕೃತ ವರದಿಯ ಪ್ರಕಾರ, ಈ ಅವಧಿಯಲ್ಲಿ ಠಾಣೆಯಲ್ಲಿ ಒಟ್ಟು 681 ಅಸ್ವಾಭಾವಿಕ ಮರಣ ಪ್ರಕರಣಗಳು ದಾಖಲಾಗಿವೆ. ಇದರಲ್ಲಿ 123 ಅಪರಿಚಿತ ವ್ಯಕ್ತಿಗಳ ಶವಗಳು ಪತ್ತೆಯಾಗಿದ್ದು, ಇವುಗಳ ಪೈಕಿ 84 ಶವಗಳನ್ನು ಹೆಚ್ಚಿನ ಪೋಸ್ಟ್ ಮಾರ್ಟಮ್‌ಗಾಗಿ ಮಂಗಳೂರಿನ ಕೆ.ಎಸ್. ಹೆಗ್ಡೆ ಆಸ್ಪತ್ರೆಗೆ ರವಾನಿಸಲಾಗಿದೆ.

2015ರಲ್ಲಿ ಯಾವುದೇ ಪ್ರಕರಣಗಳನ್ನು ದಾಖಲಿಸಲಾಗಿಲ್ಲ. 2016ರಲ್ಲಿ 48 ಅಸ್ವಾಭಾವಿಕ ಮರಣ, 10 ಅಪರಿಚಿತ ಶವ ಪ್ರಕರಣ ದಾಖಲಾಗಿದೆ. ಈ ಪೈಕಿ 9 ಶವ ಕೆ.ಎಸ್. ಹೆಗ್ಡೆ ಆಸ್ಪತ್ರೆಗೆ ರವಾನಿಸಿ ಮರಣೋತ್ತರ ಪರೀಕ್ಷೆ ಮಾಡಿಸಲಾಗಿದೆ. 2017ರಲ್ಲಿ 56 ಅಸ್ವಾಭಾವಿಕ ಮರಣ ನಡೆದಿದ್ದರೆ, 10 ಅಪರಿಚಿತ ಶವ ಪತ್ತೆಯಾಗಿದೆ. ಈ ಪೈಕಿ 7 ಶವಗಳ ಮರಣೋತ್ತರ ಪರೀಕ್ಷೆ ಕೆ ಎಸ್ ಹೆಗ್ಡೆ ಆಸ್ಪತ್ರೆಯಲ್ಲಿ ನಡೆದಿದೆ.

2018ರಲ್ಲಿ 63 ಅಸ್ವಾಭಾವಿಕ ಸಾವು ನಡೆದಿದೆ. 12 ಅಪರಿಚಿತ ಶವ ಪತ್ತೆಯಾಗಿದ್ದು 10 ಶವಗಳನ್ನು ಕೆ.ಎಸ್. ಹೆಗ್ಡೆ ಆಸ್ಪತ್ರೆಗೆ ರವಾನಿಸಿ ಮರಣೋತ್ತರ ಪರೀಕ್ಷೆ ನಡೆಸಲಾಗಿದೆ. 2019ರಲ್ಲಿ 59 ಅಸ್ವಾಭಾವಿಕ ಮರಣ ಸಂಭವಿಸಿದ್ದು, 7 ಅಪರಿಚಿತ ಶವ ಪ್ರಕರಣವಾಗಿದೆ. 4 ಶವಗಳನ್ನು ಕೆ.ಎಸ್. ಹೆಗ್ಡೆ ಆಸ್ಪತ್ರೆಗೆ ರವಾನಿಸಲಾಗಿದೆ. 2020ರಲ್ಲಿ 51 ಅಸ್ವಾಭಾವಿಕ ಮರಣ ನಡೆದಿದೆ. 8 ಅಪರಿಚಿತ ಶವವಾಗಿದ್ದು ಈ ಪೈಕಿ 3 ಶವಗಳನ್ನು ಕೆ.ಎಸ್. ಹೆಗ್ಡೆ ಆಸ್ಪತ್ರೆಗೆ ಸಾಗಿಸಿ ಪೋಸ್ಟ್ ಮಾರ್ಟಮ್ ಮಾಡಲಾಗಿದೆ.

2021ರಲ್ಲಿ 67 ಅಸ್ವಾಭಾವಿಕ ಮರಣವಾಗಿದ್ದು, 14 ಅಪರಿಚಿತ ಶವ ಪ್ರಕರಣ ದಾಖಲಾಗಿದೆ. ಈ ಪೈಕಿ10 ಶವ ಕೆ.ಎಸ್. ಹೆಗ್ಡೆ ಆಸ್ಪತ್ರೆಗೆ ಸಾಗಿಸಲಾಗಿದೆ. 2022ರಲ್ಲಿ 74 ಅಸ್ವಾಭಾವಿಕ ಸಾವು ಪ್ರಕರಣ ದಾಖಲಾಗಿದ್ದು, 12 ಅಪರಿಚಿತ ಶವ ಪತ್ತೆಯಾಗಿದೆ. ಈ ಪೈಕಿ 9 ಶವ ಕೆ.ಎಸ್. ಹೆಗ್ಡೆ ಆಸ್ಪತ್ರೆಗೆ ರವಾನಿಸಿ ಮರಣೋತ್ತರ ಪರೀಕ್ಷೆ ನಡೆಸಲಾಗಿದೆ.

2023ರಲ್ಲಿ 88 ಅಸ್ವಾಭಾವಿಕ ಮರಣ ನಡೆದಿದ್ದು, 11 ಅಪರಿಚಿತ ಶವಗಳಾಗಿವೆ. ಈ ಪೈಕಿ 6 ಶವ ಕೆ.ಎಸ್. ಹೆಗ್ಡೆ ಆಸ್ಪತ್ರೆಗೆ ರವಾನಿಸಲಾಗಿದೆ. 2024ರಲ್ಲಿ ಅತ್ಯಂತ ಹೆಚ್ಚು ಅಂದರೆ 97 ಅಸ್ವಾಭಾವಿಕ ಸಾವು ಪ್ರಕರಣಗಳು ದಾಖಲಾಗಿವೆ. 26 ಅಪರಿಚಿತ ಶವಗಳು ಪತ್ತೆಯಾಗಿದ್ದು, 17 ಶವಗಳನ್ನು ಕೆ.ಎಸ್. ಹೆಗ್ಡೆ ಆಸ್ಪತ್ರೆಗೆ ರವಾನಿಸಲಾಗಿದೆ.

2025ರಲ್ಲಿ 67 ಅಸ್ವಾಭಾವಿಕ ಮರಣ ಸಂಭವಿಸಿದ್ದು, 11 ಅಪರಿಚಿತ ಶವ ಪತ್ತೆಯಾಗಿದೆ. ಈ ಪೈಕಿ 7 ಶವ ಕೆ.ಎಸ್. ಹೆಗ್ಡೆ ಆಸ್ಪತ್ರೆಗೆ ದಾಖಲಿಸಲಾಗಿದೆ. 2026ರ ಆರಂಭದಿಂದ ಫೆಬ್ರವರಿ 2ರವರೆಗೆ 11 ಅಸ್ವಾಭಾವಿಕ ಸಾವು ಸಂಭವಿಸಿದೆ. 2 ಅಪರಿಚಿತ ಶವ ಪತ್ತೆಯಾಗಿದ್ದು, ಇವೆರಡೂ ಶವಗಳನ್ನು ಕೆ.ಎಸ್. ಹೆಗ್ಡೆ ಆಸ್ಪತ್ರೆಗೆ ಸಾಗಿಸಿ ಮರಣೋತ್ತರ ಪರೀಕ್ಷೆ ನಡೆಸಲಾಗಿದೆ.

## ನೋಟಿಸ್ ಜಾರಿ ಮಾಡುವಂತೆ ಸುಪ್ರೀಂ ಆದೇಶ, ಅ.9ಕ್ಕೆ ವಿಚಾರಣೆ

### ಯೋಗೇಶ್ ಕೊಲೆ ಪ್ರಕರಣ: ಶಾಸಕ ವಿನಯ್‌ಕುಲಕರ್ಣಿಗೆ ಮತ್ತೆ ಕಾನೂನು ಸಂಕಷ್ಟ



**ಧಾರವಾಡ, ಅ.1:** ಧಾರವಾಡ ಜಿಲ್ಲಾ ಪಂಚಾಯಿತಿ ಬಿಜೆಪಿ ಸದಸ್ಯ ಯೋಗೇಶ್ ಗೌಡ ಕೊಲೆ ಪ್ರಕರಣಕ್ಕೆ ಸಂಬಂಧಿಸಿದಂತೆ ಮಾಜಿ ಸಚಿವ ಹಾಗೂ ಕಾಂಗ್ರೆಸ್ ಶಾಸಕ ವಿನಯ್ ಕುಲಕರ್ಣಿಗೆ ಮತ್ತೆ ಕಾನೂನು ಸಂಕಷ್ಟ ಎದುರಾಗಿದೆ. ಜನಪ್ರತಿನಿಧಿಗಳ ವಿಶೇಷ ನ್ಯಾಯಾಲಯ ವಿಧಿಸಿದ್ದ ಜೀವಾವಧಿ ಶಿಕ್ಷೆಗೆ ಹೈಕೋರ್ಟ್ ನೀಡಿದ್ದ ತಡೆಯಾಜ್ಞೆ ಹಾಗೂ ಮಂಜೂರು ಮಾಡಿದ್ದ ಜಾಮೀನನ್ನು ಪ್ರಶ್ನಿಸಿ ಸಿಬಿಐ ಮತ್ತು ಯೋಗೇಶ್ ಗೌಡ ಅವರ ಸಹೋದರ ಗುರುನಾಥಗೌಡ ಸುಪ್ರೀಂ ಕೋರ್ಟ್ ಮೆಟ್ಟಿಲೇರಿದ್ದಾರೆ.

ಈ ಮೇಲ್ಮನವಿ ಅರ್ಜಿಯನ್ನು ವಿಚಾರಣೆಗೆ ಕೈಗೆತ್ತಿಕೊಂಡ ನ್ಯಾಯಮೂರ್ತಿ ಪ್ರಶಾಂತ್‌ಕುಮಾರ್ ಮಿಶ್ರಾ ಹಾಗೂ ನ್ಯಾಯಮೂರ್ತಿ ಚಂದ್ರಶೇಖರ್ ಅವರಿದ್ದ ಸುಪ್ರೀಂ ಕೋರ್ಟ್‌ನ ದ್ವಿಸದಸ್ಯ ಪೀಠವು ಹೈಕೋರ್ಟ್ ಆದೇಶದ ಬಗ್ಗೆ ತೀವ್ರ ಅಸಮಾಧಾನ ಮತ್ತು ಕಳವಳ ವ್ಯಕ್ತಪಡಿಸಿದೆ.

ಕೊಲೆ ಪ್ರಕರಣದಲ್ಲಿ ಶಿಕ್ಷೆಗೆ ಹೀಗೆ ತಡೆಯಾಜ್ಞೆ ನೀಡುತ್ತಾ ಹೋದರೆ ಅಸೆಂಬ್ಲಿಗಳಲ್ಲಿ ಹಂತಕರು ಮತ್ತು ಅಪರಾಧಿಗಳೇ ತುಂಬಿರುತ್ತಾರೆ ಎಂದು ಪೀಠವು ತೀಕ್ಷ್ಣವಾಗಿ ಅಭಿಪ್ರಾಯಪಟ್ಟಿದೆ. ವಿಚಾರಣೆ ವೇಳೆ ವಿನಯ್ ಕುಲಕರ್ಣಿ ಪರವಾಗಿ ಹಿರಿಯ ವಕೀಲರಾದ ಅಭಿಷೇಕ್ ಮನು ಸಿಂಘ್ವಿ ಹಾಗೂ ಮುಕುಲ್ ರೋಹ್ಟಗಿ ವಾದ ಮಂಡಿಸಿದರು. ಅಂತಿಮವಾಗಿ ಸುಪ್ರೀಂ ಕೋರ್ಟ್, ವಿನಯ್ ಕುಲಕರ್ಣಿ ಸೇರಿದಂತೆ ಇತರ ಆರೋಪಿಗಳಿಗೆ ನೋಟಿಸ್ ಜಾರಿ ಮಾಡಲು ಆದೇಶಿಸಿದ್ದು, ಪ್ರಕರಣದ ಮುಂದಿನ ವಿಚಾರಣೆಯನ್ನು ಅಕ್ಟೋಬರ್ 9ಕ್ಕೆ ಮುಂದೂಡಿದೆ.

## ಗಡಿ ವಿಷಯದಲ್ಲಿ ಮಹಾಜನ್ ವರದಿಯೇ ಅಂತಿಮ: ಬೆಳಗಾವಿ ಮಹಾನಗರ ಪಾಲಿಕೆ ನಿರ್ಣಯ ಹೋರಾಟಕ್ಕೆ ಸಿಕ್ಕ ಜಯ: ಚಂದರಗಿ



**ಬೆಳಗಾವಿ, ಅ.1:** ಗಡಿ ವಿಷಯದಲ್ಲಿ ಮಹಾಜನ್ ವರದಿಯೇ ಅಂತಿಮ ಎಂಬ ಐತಿಹಾಸಿಕ ನಿರ್ಣಯವನ್ನು ರಾಜ್ಯ ಸರ್ಕಾರದ ನಿರ್ದೇಶನದ ಮೇರೆಗೆ, ಇಲ್ಲಿನ ಮಹಾನಗರ ಪಾಲಿಕೆ ಸಾಮಾನ್ಯ ಸಭೆಯಲ್ಲಿ ಅಂಗೀಕರಿಸಿದ್ದನ್ನು ಸಮಾನ ಮನಸ್ಕ ಕನ್ನಡ ಸಂಘಟನೆಗಳು ಸ್ವಾಗತಿಸಿವೆ.

ಸುದ್ದಿಗೋಷ್ಠಿಯಲ್ಲಿ, ಜಿಲ್ಲಾ ಕನ್ನಡ ಸಂಘಟನೆಗಳ ಕ್ರಿಯಾ ಸಮಿತಿ ಅಧ್ಯಕ್ಷ ಅಶೋಕ ಚಂದರಗಿ, 'ಬೆಳಗಾವಿ ಕರ್ನಾಟಕದ ಅವಿಭಾಜ್ಯ ಅಂಗ ಎಂದು ಘೋಷಿಸುವ ನಿರ್ಣಯವನ್ನು ಪಾಲಿಕೆಯಲ್ಲಿ ಅಂಗೀಕರಿಸಬೇಕೆಂದು ಕಳೆದ ಆರು ತಿಂಗಳುಗಳಿಂದ ಹೋರಾಟ ನಡೆಸಿದ್ದೆವು. ಆದರೆ, ವಿವಿಧ ಕಾರಣಗಳಿಂದಾಗಿ ಈ ಬೇಡಿಕೆ ಈಡೇರದೆ ವಿಳಂಬವಾಗಿತ್ತು. ಮಹಾಜನ್ ಆಯೋಗದ ಶಿಫಾರಸುಗಳೇ ಅಂತಿಮ ಎಂಬ ಶಾಸಕಾಂಗದ ನಿರ್ಣಯದಂತೆ, ಪಾಲಿಕೆಯಲ್ಲೂ ನಿರ್ಣಯ ಅಂಗೀಕರಿಸುವಂತೆ ಸರ್ಕಾರವು ಆಗಸ್ಟ್ 29ರಂದು ಪಾಲಿಕೆಗೆ ಪತ್ರ ಬರೆದಿತ್ತು' ಎಂದರು.

2005ರಲ್ಲಿ ಮಹಾರಾಷ್ಟ್ರ ಏಕೀಕರಣ ಸಮಿತಿ ಬೆಂಬಲಿತ ಸದಸ್ಯರು ಬಹುಮತದಲ್ಲಿ ಇದ್ದಾಗ, ಬೆಳಗಾವಿ ಸೇರಿದಂತೆ ರಾಜ್ಯದ ಇತರೆ ಮರಾಠಿ ಭಾಷಿಕ ಪ್ರದೇಶಗಳನ್ನು ಮಹಾರಾಷ್ಟ್ರದೊಂದಿಗೆ ವಿಲೀನಗೊಳಿಸಬೇಕು ಎಂದು ಆಗ್ರಹಿಸುವ ನಿರ್ಣಯವನ್ನು ಪಾಲಿಕೆಯಲ್ಲಿ ಅಂಗೀಕರಿಸಲಾಗಿತ್ತು. ಕರ್ನಾಟಕ–ಮಹಾರಾಷ್ಟ್ರ ಗಡಿ ವಿವಾದ ಬಗೆಹರಿಸಲು 2004ರಲ್ಲಿ ಮಹಾರಾಷ್ಟ್ರವು ಸುಪ್ರೀಂಕೋರ್ಟ್‌ನಲ್ಲಿ ಹೂಡಿರುವ ದಾವೆಯಲ್ಲಿ, ಈ ನಿರ್ಣಯವನ್ನು ಒಂದು ದಾಖಲೆಯಾಗಿ ಬಳಸಲಾಗಿದೆ. ಈಗ ಪಾಲಿಕೆಯಲ್ಲಿ ಅಂಗೀಕರಿಸಿದ ನಿರ್ಣಯ ಅದಕ್ಕೆ ಪ್ರತ್ಯುತ್ತರ ಕೊಡಲಿದೆ' ಎಂದು ತಿಳಿಸಿದರು.

ಈ ನಿರ್ಣಯದ ಪ್ರತಿಯಲ್ಲಿ 'ಬೆಳಗಾವಿ ಕರ್ನಾಟಕದ ಅವಿಭಾಜ್ಯ ಅಂಗ' ಎಂದು ಸ್ಪಷ್ಟವಾಗಿ ಉಲ್ಲೇಖಿಸಿಲ್ಲವಲ್ಲ' ಎಂಬ ಪ್ರಶ್ನೆಗೆ, 'ಗಡಿ ವಿಷಯದಲ್ಲಿ ಮಹಾಜನ್ ವರದಿಯೇ ಅಂತಿಮ ಎಂಬ ನಿರ್ಣಯದ ಅರ್ಥವೂ ಇದೇ ಆಗಿದೆ' ಎಂದರು. ಮಹಾರಾಷ್ಟ್ರದ ಕೆಲವು ನಾಯಕರ ಒತ್ತಡದ ಕಾರಣಕ್ಕಾಗಿಯೂ ಪಾಲಿಕೆಯಲ್ಲಿ ನಾಡಿನ ಪರ ನಿರ್ಣಯ ಅಂಗೀಕಾರಕ್ಕೆ ತಡವಾಯಿತು'. ಬೆಳಗಾವಿ ಉಪವಿಭಾಗಾಧಿಕಾರಿ ಶ್ರವಣ ನಾಯಕ ಅವರನ್ನು ಪಾಲಿಕೆ ಸಭೆಯ ವೀಕ್ಷಕರಾಗಿ ನೇಮಿಸಿದ ಜಿಲ್ಲಾಧಿಕಾರಿ ನಡೆ ಕಾನೂನುಬಾಹಿರ. ಇದನ್ನು ಖಂಡಿಸಿ ಏಕೆ ಹೀಗೆ ನೇಮಿಸಿದ್ದೀರಿ ಎಂದು ಸರ್ಕಾರದಿಂದ ಉತ್ತರ ಕೇಳುತ್ತೇವೆ ಎಂದು ಮೇಯರ್ ಪ್ರೀತಿ ಕಾಮಕರ್ ನಿರ್ಣಯ ಅಂಗೀಕರಿಸಿದ್ದು ಖಂಡನೀಯ' ಎಂದರು.

## ಬರಗಾಲದ ಬವಣೆಗೆ ಕಾವ್ಯದ ಧ್ವನಿ–ರೈತರ ಆತ್ಮಸ್ಥೈರ್ಯಕ್ಕೆ ಕವಿಗಳ ಕಾವ್ಯದ ನುಡಿ



**ಕಲಬುರಗಿ, ಅ. 1:** ಅಕ್ಷರ ಕಲಿಸುವ ಶಿಕ್ಷಕ ಕೇವಲ ಪಾಠ ಹೇಳುವ ವ್ಯಕ್ತಿಯಲ್ಲ. ವಿದ್ಯಾರ್ಥಿಯ ಬದುಕಿಗೆ ದಿಕ್ಕು ತೋರಿಸುವ ಮಾರ್ಗದರ್ಶಕ, ಸಮಾಜದ ಭವಿಷ್ಯ ರೂಪಿಸುವ ಶಿಲ್ಪಿ. ಅಂತಹ ಶಿಕ್ಷಕರ ಸೇವೆಯನ್ನು ಸ್ಮರಿಸುವುದರೊಂದಿಗೆ, ಬರಗಾಲದಿಂದ ಸಂಕಷ್ಟಕ್ಕೊಳಗಾದ ರೈತರ ಬದುಕಿನ ನೋವು, ಹತಾಶೆ ಮತ್ತು ಆತ್ಮಸ್ಥೈರ್ಯಕ್ಕೆ ಕಾವ್ಯದ ಮೂಲಕ ಧ್ವನಿ ನೀಡಿದ ಅರ್ಥಪೂರ್ಣ ಕಾರ್ಯಕ್ರಮ ಜಿಲ್ಲೆಯ ಜೇವರ್ಗಿಯಲ್ಲಿ ಜರುಗಿತು.

ಜೇವರ್ಗಿ ತಾಲ್ಲೂಕು ಕನ್ನಡ ಸಾಹಿತ್ಯ ಪರಿಷತ್ತು ಶಿಕ್ಷಕರ ದಿನಾಚರಣೆ ಅಂಗವಾಗಿ ಸಾರ್ಥಕ 'ಶಿಕ್ಷಕ ಪ್ರಶಸ್ತಿ ಹಾಗೂ ಬರಗಾಲ ಬವಣೆ ಕವಿಗೋಷ್ಠಿ' ಕಾರ್ಯಕ್ರಮ ಸೊನ್ನದ ಡಾ. ಶಿವಾನಂದ್ ಮಹಾಸ್ವಾಮೀಜಿ ಸಾನಿಧ್ಯದಲ್ಲಿ ಜರುಗಿತು. ಗಣ್ಯರು, ಸಾಹಿತಿಗಳು ಮಾತನಾಡಿ, ಶಿಕ್ಷಣದ ಮೌಲ್ಯ, ಶಿಕ್ಷಕರ ಜವಾಬ್ದಾರಿ, ವಿದ್ಯಾರ್ಥಿಗಳ ಭವಿಷ್ಯ ರೂಪಿಸುವಲ್ಲಿ ಗುರುವಿನ ಪಾತ್ರ ಹಾಗೂ ಸಮಾಜಮುಖಿ ಶಿಕ್ಷಣದ ಅಗತ್ಯದ ಕುರಿತು ಹೇಳಿದರಲ್ಲದೇ ವಿದ್ಯಾರ್ಥಿಯ ಕೈಗೆ ಪುಸ್ತಕ ನೀಡುವುದಷ್ಟೇ ಶಿಕ್ಷಕರ ಕರ್ತವ್ಯವಲ್ಲ. ಉತ್ತಮ ಮೌಲ್ಯಗಳು, ಶಿಸ್ತು, ಮಾನವೀಯತೆ, ದೇಶಪ್ರೇಮ, ಸಾಮಾಜಿಕ ಜವಾಬ್ದಾರಿ ಹಾಗೂ ಜೀವನವನ್ನು ಎದು–ರಿಸುವ ಆತ್ಮಸ್ಥೈರ್ಯವನ್ನು ಬೆಳೆಸುವುದು ಶಿಕ್ಷಕರ ಮಹತ್ವದ ಹೊಣೆಗಾರಿಕೆ ಎಂದರು.

ಶಿಕ್ಷಣದ ಜೊತೆಗೆ ಸಂಸ್ಕಾರ ನೀಡುವ ಶಿಕ್ಷಕರ ಸೇವೆಯನ್ನು ಗುರುತಿಸಿ ಗೌರವಿಸುವುದು ಸಮಾಜದ ಕರ್ತವ್ಯವಾಗಿದ್ದು, ಇದೇ ಆಶಯದೊಂದಿಗೆ ಶಿಕ್ಷಣ ಕ್ಷೇತ್ರದಲ್ಲಿ ಸಾರ್ಥಕ ಸೇವೆ ಸಲ್ಲಿಸಿದ ಶಿಕ್ಷಕರಿಗೆ ಸಾರ್ಥಕ ಶಿಕ್ಷಕ ಪ್ರಶಸ್ತಿ ನೀಡಿ ಗೌರವಿಸಲಾಯಿತು. ಕಾರ್ಯಕ್ರಮದ ಪ್ರಮುಖ ಆಕರ್ಷಣೆಯಾಗಿದ್ದ ಬರಗಾಲದ ಬವಣೆ ಮತ್ತು ರೈತರ ಆತ್ಮಸ್ಥೈರ್ಯ ವಿಷಯಾಧಾರಿತ ಶಿಕ್ಷಕರ ಕವಿಗೋಷ್ಠಿ ಸುದೀರ್ಘವಾಗಿ ನಡೆಯಿತು. ಮಳೆ ಕೈಕೊಟ್ಟಾಗ ಹೊಲ ಒಣಗುತ್ತದೆ; ಹೊಲ ಒಣಗಿದಾಗ ರೈತನ ಕನಸುಗಳು ಬಾಡುತ್ತವೆ. ಬಿತ್ತನೆಗೆ ಮಾಡಿದ ಸಾಲ, ಬೆಳೆಗಾಗಿ ಹಾಕಿದ ಶ್ರಮ, ಆಕಾಶದತ್ತ ನೋಡುವ ಕಣ್ಣುಗಳು, ಮಳೆಯ ನಿರೀಕ್ಷೆಯಲ್ಲಿ ಕಳೆಯುವ ದಿನಗಳು–ಬರಗಾಲ ರೈತನ ಬದುಕಿನ ಮೇಲೆ ಬೀರುವ ಪರಿಣಾಮವನ್ನು ಕವಿಗಳು ತಮ್ಮ ಕವನಗಳ ಮೂಲಕ ಸರ್ಕಾರಕ್ಕೆ ಮನಮುಟ್ಟುವಂತೆ ಕವನ ವಾಚನ ಮಾಡಿದರು.ರೈತನ ನೋವನ್ನು ಕೇವಲ ಅಂಕಿ–ಅಂಶಗಳಲ್ಲಿ ಅಳೆಯಲು ಸಾಧ್ಯವಿಲ್ಲ. ಮಣ್ಣಿನೊಂದಿಗೆ ಬದುಕು ಕಟ್ಟಿಕೊಂಡಿರುವ ರೈತನಿಗೆ ಬೆಳೆ ಎಂದರೆ ಕೇವಲ ಉತ್ಪನ್ನ ವಲ್ಲ; ಅದು ಕುಟುಂಬದ ಭವಿಷ್ಯ, ಮಕ್ಕಳಶಿಕ್ಷಣ, ಬದುಕಿನ ಭರವಸೆ ಹಾಗೂ ಹಲವುತಿಂಗಳ ಪರಿಶ್ರಮದ ಫಲ. ಈ ಭಾವನೆ ಗಳನ್ನು ಕವಿಗಳು ತಮ್ಮ ಕಾವ್ಯದಲ್ಲಿ ತೆರೆದಿಟ್ಟರು. ಅದೇ ವೇಳೆ ಸಂಕಷ್ಟದ ನಡುವೆ ಯೂ ರೈತ ಕುಗ್ಗದೆ ಬದುಕನ್ನು ಎದುರಿಸಬೇಕು, ಆತ್ಮಸ್ಥೈರ್ಯ ಕಳೆದುಕೊಳ್ಳಬಾರದು, ಸಮಾಜವೂ ರೈತರ ಸಂಕಷ್ಟಕ್ಕೆ ಸ್ಪಂದಿಸಬೇಕು ಎಂಬ ಆಶಯವೂ ಕವಿಗೋಷ್ಠಿಯಲ್ಲಿ ಪ್ರತಿಧ್ವನಿಸಿತು.

ಕವಿಗೋಷ್ಠಿಯಲ್ಲಿ ಶಿಕ್ಷಕ ಕವಿಗಳು ಬರಗಾಲ, ರೈತರ ಬದುಕು, ಮಳೆಯ ನಿರೀಕ್ಷೆ, ಕೃಷಿ ಸಂಕಷ್ಟ, ಗ್ರಾಮೀಣ ಜೀವನ ಹಾಗೂ ಸಾಮಾಜಿಕ ಬದಲಾವಣೆಗಳ ಕುರಿತು ಕವನಗಳನ್ನು ವಾಚಿಸಿದರು. ಕೆಲ ಕವನಗಳು ರೈತನ ಕಣ್ಣೀರಿನ ನೋವನ್ನು ಕಟ್ಟಿಕೊಟ್ಟರೆ, ಇನ್ನು ಕೆಲವು ಕವನಗಳು ಸಂಕಷ್ಟದ ನಡುವೆಯೂ ಬದುಕನ್ನು ಕಟ್ಟಿಕೊಳ್ಳುವ ರೈತನ ಧೈರ್ಯವನ್ನು ಬಿಂಬಿಸಿದವು. ಕವಿಗೋಷ್ಠಿಯ ಮೂಲಕ ಸಾಹಿತ್ಯವು ಕೇವಲ ಮನರಂಜನೆಯ ಸಾಧನವಲ್ಲ. ಅದು ಸಮಾಜದ ನೋವಿಗೆ ಧ್ವನಿಯಾಗಬಲ್ಲ ಶಕ್ತಿಯಾಗಿದೆ ಎಂಬ ಸಂದೇಶವೂ ಮೂಡಿಬಂತು.

## ಪ್ರೇಕ್ಷಕರ ಮನಸೂರೆಗೊಂಡ ಶಾಂತರಸರ ಸಣ್ಣಗೌಡಸಾನಿ ನಾಟಕ



**ಬೀದರ್, ಅ. 1:** ನಗರದ ಚನ್ನಬಸವ ಪಟ್ಟದ್ದೇವರು ಜಿಲ್ಲಾ ರಂಗಮಂದಿರದಲ್ಲಿ ಆಯೋಜಿಸಿದ್ದ ಸಾಹಿತಿ ಶಾಂತರಸ ಅವರ ಕಾದಂಬರಿ ಆಧಾರಿತ 'ಸಣ್ಣಗೌಡಸಾನಿ' ನಾಟಕ ಪ್ರದರ್ಶನ ಸಭಿಕರ ಮನಸೂರೆಗೊಳಿಸಿತು.

ಬಹುಭಾಷೆ, ವೈವಿಧ್ಯ ಹಾಗೂ ಸೌಹಾರ್ದತೆಯಿಂದ ಕೂಡಿರುವ ಕಲ್ಯಾಣ ಕರ್ನಾಟಕ ಭಾಗದ ಬದುಕಿನ ಹಲವು ಆಯಾಮಗಳ ಮೇಲೆ ಬೆಳಕು ಚೆಲ್ಲಿತು. ಹಿಂದೆ ಸಮಾಜದಲ್ಲಿ ಬೇರೂರಿದ್ದ ಅಸ್ಪೃಶ್ಯತೆ, ಜಾತಿ ಜನಾಂಗದ ಮಧ್ಯೆ ಒಳಜಗಳ, ಸಂಚು, ದರ್ಪ ಇವೆಲ್ಲವೂ ಮನುಷ್ಯರನ್ನು ಒಡೆದಾಡುವ ಸಾಮಾಜಿಕ ವ್ಯವಸ್ಥೆಯ ಕರಾಳ ಮುಖಗಳನ್ನು ತೆರೆದಿಟ್ಟಿತು. ಒಬ್ಬಂಟಿ ಹೆಣ್ಣಿನ ನೋವು, ವ್ಯಥೆ ಹಾಗೂ ಹೋರಾಟವೂ ಗಮನ ಸೆಳೆಯಿತು.

ನಾಟಕದ ರಂಗರೂಪಕವನ್ನು ಮಹಾಂತೇಶ ನವಲಕಲ್ ನಿರ್ವಹಿಸಿದರು. ರಾಘವ ಕಮ್ಮಾರ ಸಂಗೀತ ಸಂಯೋಜನೆ ಮಾಡಿದರು. ಪ್ರವೀಣ ರೆಡ್ಡಿ ಗುಂಜಹಳ್ಳಿ ಅವರು ರಂಗಪಠ್ಯ ವಿನ್ಯಾಸ ಹಾಗೂ ನಿರ್ದೇಶನದ ಹೊಣೆ ಹೊತ್ತಿದ್ದರು. ರಾಜಕುಮಾರ ಎಸ್.ಕೆ. ರಂಗಸಜ್ಜಿಕೆ, ಶ್ರೀನಿವಾಸ ದೋರನಹಳ್ಳಿ ಸಹ ನಿರ್ದೇಶನ, ಬೆಳಕಿನ ವಿನ್ಯಾಸ ಮಾಡಿದರು.

ಇದಕ್ಕೂ ಮುನ್ನ ಕನ್ನಡ ಮತ್ತು ಸಂಸ್ಕೃತಿ ಇಲಾಖೆ, ರಂಗಾಯಣ ಕಲಬುರಗಿ, ಜನಪದ ಕಲಾವಿದರ ಬಳಗ, ಮಹರ್ಷಿ ವಾಲ್ಮೀಕಿ ಸೋಶಿಯಲ್ ಅಂಡ್ ಕಲ್ಚರಲ್ ಟ್ರಸ್ಟ್ ಹಾಗೂ ರಂಗ ತರಂಗ ಸಾಮಾಜಿಕ ಮತ್ತು ಸಾಂಸ್ಕೃತಿಕ ಟ್ರಸ್ಟ್ ಸಹಯೋಗದಲ್ಲಿ ಏರ್ಪಡಿಸಿದ್ದ ನಾಟಕ ಪ್ರದರ್ಶನವನ್ನು ಉದ್ಘಾಟಿಸಿದ ರಂಗಾಯಣ ಕಲಬುರಗಿ ನಿರ್ದೇಶಕಿ ಸುಜಾತಾ ಜಂಗಮಶೆಟ್ಟಿ, ಕಲ್ಯಾಣ ಕರ್ನಾಟಕ ಭಾಗದಲ್ಲಿ ಅನೇಕ ಸಾಹಿತಿಗಳು, ಲೇಖಕರು ಹಾಗೂ ಬರಹಗಾರರಿದ್ದಾರೆ. ಅವರ ಪ್ರತಿಭೆಗೆ ಸೂಕ್ತ ವೇದಿಕೆ ಕಲ್ಪಿಸಿದಾಗ ಉತ್ತಮ ನಾಟಕ, ರಂಗ ರೂಪಕಗಳು ಮೂಡಿಬರುತ್ತವೆ ಎಂದು ಹೇಳಿದರು.

### ಸ್ವಾತಂತ್ರ್ಯಹೋರಾಟಗಾರ ರಾಮಾಚಾರ್ಯ ನವಲಿ ಜೊತೆ ಆತ್ಮೀಯ ಸಂವಾದ

## ಸ್ವಾತಂತ್ರ್ಯ ಹೋರಾಟಗಾರರ ಆದರ್ಶ ರಾಷ್ಟ್ರಸೇವೆಯ ಸಂಕಲ್ಪಕ್ಕೆ ಬಲ: ಡಾ. ಜಾಧವ್

**ಕಲಬುರಗಿ,ಅ.1– :** ಸ್ವಾತಂತ್ರ್ಯ ಯೋಧರ ಆದರ್ಶ ಅವರ ಸಮಾಜಸೇವೆ ಜನಸೇವೆಯು ರಾಷ್ಟ್ರಸೇವಾ ಸಂಕಲ್ಪಕ್ಕೆ ಶಕ್ತಿ ತುಂಬುತ್ತದೆ ಯುವ ಜನತೆ ಅಂತಹ ಮಹಾನ್ ವ್ಯಕ್ತಿಗಳ ಹೆಜ್ಜೆಯಲ್ಲಿ ನಡೆದು ರಾಷ್ಟ್ರ ಸೇವೆಗೆ ಮುಂದಾಗಬೇಕು ಎಂದು ಮಾಜಿ ಲೋಕಸಭಾ ಸದಸ್ಯರಾದ ಡಾ.ಉಮೇಶ್ ಜಾಧವ್ ಹೇಳಿದರು.



ಕಲಬುರ್ಗಿಯಲ್ಲಿ ಗುರುವಾರ ಅಕ್ಟೋಬರ್ ಒಂದರಂದು ಸಂತ ಸೇವಾಲಾಲ್ ಪ್ರಭಾತ ಸಪ್ತಾಹ ಶಾಖೆಯ ಶಾಖೆಯು ಯಶಸ್ವಿಯಾಗಿ ಪೂರ್ಣಗೊಂಡ ಹಿನ್ನೆಲೆಯಲ್ಲಿ ಮನೆ ಮನೆ ಸಂಪರ್ಕ ಅಭಿಯಾನದ ಅಂಗವಾಗಿ 99ರ ಹರೆಯದ, ವಯೋವೃದ್ಧರು ಜ್ಞಾನ ವೃದ್ಧರು ಆಗಿರುವ ಸ್ವಾತಂತ್ರ್ಯ ಹೋರಾಟ ಗಾರ ರಾಮಾಚಾರ್ಯ ನವಲಿ ಅವರ ಮನೆಗೆ ಭೇಟಿ ಮಾಡಿ ಆಶೀರ್ವಾದ ಪಡೆದ ನಂತರ ಮಾತನಾಡಿ ಸ್ವಾತಂತ್ರ್ಯ ಯೋಧರ ಜೊತೆ ಅವರ ಜೀವನ ಅನುಭವ ದೇಶಕ್ಕಾಗಿ ಅವರ ತ್ಯಾಗಮಯ ಜೀವನ ಸವೆಸಿದ ನೆನಪುಗಳನ್ನು ಆತ್ಮೀಯವಾಗಿ ಹಂಚಿಕೆ ಮಾಡಿಕೊಳ್ಳುವ ಸದಾ ಅವಕಾಶ ಲಭಿಸಿದ್ದಕ್ಕೆ ಧನ್ಯನಾಗಿದ್ದೇನೆ. ಸಮಾಜವನ್ನು ರಾಷ್ಟ್ರೀಯ ವಿಚಾರಧಾರೆಗಳೊಂದಿಗೆ ಕಟ್ಟುವ ಹಾಗೂ ವ್ಯಕ್ತಿ ಮತ್ತು ಪಕ್ಷಕ್ಕಿಂತ ರಾಷ್ಟ್ರ ಮುಖ್ಯ ಎಂಬ ಸಂಕಲ್ಪವನ್ನು ಬೋಧಿಸಿದ ನವಲಿ ಯವರ ಅನುಭವದ ಮಾತು ಯುವ ಜನತೆಗೆ ಪ್ರೇರಣೆಯಾಗಲಿ ಮತ್ತು ಬಲಿಷ್ಠ ರಾಷ್ಟ್ರ ನಿರ್ಮಾಣಕ್ಕೆ ತ್ಯಾಗ ಬದ್ಧತೆಯಿಂದ ಯುವಕರು ಜೀವನ ನಡೆಸಿ ಆದರ್ಶ ಬದುಕು ನಡೆಸುವಂತಾಗಲಿ ಎಂದು

## ಬಿಮ್ಸ್ ನಿರ್ದೇಶಕ ಡಾ.ಮರಿರಾಜ್‌ಗೆ ಮಾನವ ಹಕ್ಕುಗಳ ಕಾವಲು ಸಮಿತಿ ಸನ್ಮಾನ



**ಬಳ್ಳಾರಿ, ಅ 01:** ಬಳ್ಳಾರಿಯ ಬಿಮ್ಸ್ ನಿರ್ದೇಶಕರಾಗಿ ಇತ್ತೀಚೆಗೆ ಅಧಿಕಾರ ಸ್ವೀಕರಿಸಿರುವ ಡಾ.ಮರಿರಾಜರವರಿಗೆ ಕರ್ನಾಟಕ ಮಾನವ ಹಕ್ಕುಗಳ ಕಾವಲು ಸಮಿತಿ ವತಿಯಿಂದ ಆತ್ಮೀಯವಾಗಿ ಸನ್ಮಾನಿಸಲಾಯಿತು.

ಕರ್ನಾಟಕ ಪ್ರದೇಶ ಕಾಂಗ್ರೆಸ್ ಸಮಿತಿಯ ಪರಿಶಿಷ್ಟ ಪಂಗಡ ವಿಭಾಗದ ರಾಜ್ಯ ಉಪಾಧ್ಯಕ್ಷರು ಹಾಗೂ ವಾಲ್ಮೀಕಿ ಸಮುದಾಯದ ಹಿರಿಯ ಧುರೀಣ ಸದಾಶಿವಪ್ಪ ಮತ್ತು ಕರ್ನಾಟಕ ಮಾನವ ಹಕ್ಕುಗಳ ಕಾವಲು ಸಮಿತಿಯ ಸಂಸ್ಥಾಪಕ ರಾಜ್ಯಾಧ್ಯಕ್ಷರು ಮತ್ತು ಉಪ್ಪಾರ ಸಮುದಾಯದ ಹಿರಿಯ ಮುಖಂಡರೂ ಆದ ಉರುಕುಂದ ರೆಡ್ಡಿರವರು ಬಿಮ್ಸ್‌ನ ಆಡಳಿತ ಕಛೇರಿಗೆ ತೆರಳಿ ನಿರ್ದೇಶಕ ಡಾ. ಮರಿರಾಜರವ–ರಿಗೆ ಆತ್ಮೀಯವಾಗಿ ಸನ್ಮಾನಿಸಿ, ಸತ್ಕರಿಸಿದರು.

ಈ ಸಂದರ್ಭದಲ್ಲಿ ಉಪನ್ಯಾಸಕರು, ಕರ್ನಾಟಕ ಮಾನವ ಹಕ್ಕುಗಳ ಕಾವಲು ಸಮಿತಿಯ ಪದಾಧಿಕಾರಿಗಳು, ಯುವ ಮುಖಂಡರು ಉಪಸ್ಥಿತರಿದ್ದರು.

## ಹಿಂದಿ ಭಾಷೆಯಿಂದ ಉದ್ಯೋಗಾವಕಾಶಗಳ ವಿಸ್ತಾರ: ಡಾ.ರಾಮಲಿಂಗ ಭೋಸ್ಲೆ



**ಕಲಬುರಗಿ, ಅ. 1:** ಇಂದಿನ ಜಾಗತೀಕರಣದ ಯುಗದಲ್ಲಿ ಹಿಂದಿ ಭಾಷೆಯು ಕೇವಲ ಸಂವಹನದ ಮಾಧ್ಯಮವಾಗಿದೆ. ಯುವಜನತೆಗೆ ಉದ್ಯೋಗದ ಬಾಗಿಲುಗಳನ್ನು ತರೆಯುವ ಪ್ರಮುಖ ಅಸ್ತ್ರವಗಿದೆ ಎಂದು ಸರ್ಕಾರಿ ಮಹಾವಿದ್ಯಾಲಯದ ಹಿಂದಿ ವಿಭಾಗದ ಮುಖ್ಯಸ್ಥ ಡಾ.ರಾಮಲಿಂಗ ಭೋಸ್ಲೆ ಹೇಳಿದರು.

ನಗರದ ಹೈದರಾಬಾದ್ ಕರ್ನಾಟಕ ಶಿಕ್ಷಣ ಸಂಸ್ಥೆಯ ಶ್ರೀಮತಿ ವೀರಮ್ಮ ಗಂಗಸಿರಿ ಮಹಿಳಾ ಮಹಾ ವಿದ್ಯಾಲಯದ ಹಿಂದಿ ವಿಭಾಗದ ವತಿಯಿಂದ ಕಾಲೇಜಿನಲ್ಲಿ 'ಹಿಂದಿ ದಿವಸ' ಕಾರ್ಯಕ್ರಮ ಸಂದರ್ಭದಲ್ಲಿ ಏರ್ಪಡಿಸಿದ್ದ ಅಂತರ ಮಹಾವಿದ್ಯಾಲಯ ಮಟ್ಟದ ವಿವಿಧ ಸ್ಪರ್ಧೆಗಳಲ್ಲಿ 'ಹಿಂದಿ ಭಾಷೆ ಮತ್ತು ಉದ್ಯೋಗಾವಕಾಶ' ಕುರಿತು ವಿಶೇಷ ಉಪನ್ಯಸದ ಮುಖ್ಯ ಅತಿಥಿಗಳಾಗಿ ಆಗಮಿಸಿದ್ದ ಡಾ.ಭೋಸ್ಲೆ ಅವರು ಉಪನ್ಯಾಸ ನೀಡಿದರು.

ಅನುವಾದಕರು, ಜರ್ನಲಿಸಂ, ಕೇಂದ್ರ ಸರ್ಕಾರಿ ಇಲಾಖೆಗಳು, ಬ್ಯಾಂಕಿಂಯಿಗ್ ಕ್ಷೇತ್ರ, ಕಾರ್ಪೊರೇಟ್ ಕಂಪನಿಗಳು ಹಾಗೂ ಮಾಧ್ಯಮ ರಂಗದಲ್ಲಿ ಹಿಂದಿ ಬಲ್ಲವರಿಗೆ ಅಪಾರ ಉದ್ಯೋಗಾ ವಕಾಶಗಳು ತೆರೆದುಕೊಂಡಿವೆ ಎಂದು ವಿದ್ಯಾರ್ಥಿನಿಯರಿಗೆ ವಿವರ ಮಾರ್ಗದರ್ಶನ ನೀಡಿದರು.

ಕಾರ್ಯಕ್ರಮದ ಅಧ್ಯಕ್ಷತೆ ವಹಿಸಿದ್ದ ಪ್ರೊ. ಆರ್. ಬಿ. ಕೊಂಡಾ ಅವರು ಮಾತನಾಡಿ, ರಾಷ್ಟ್ರೀಯ ಭಾವೈಕ್ಯತೆಯನ್ನು ಬೆಸೆಯುವಲ್ಲಿ ಹಿಂದಿ ಭಾಷೆ ಯ ಪಾತ್ರ ಹಿರಿದಾದದ್ದು. ಇಂದಿನ ಸ್ಪರ್ಧಾತ್ಮಕ ಜಗತ್ತಿನಲ್ಲಿ ಮಾತೃಭಾಷೆ ಯ ಜೊತೆಗೆ ಹಿಂದಿ ಭಾಷೆಯ ಮೇಲಿನ ಪ್ರಭುತ್ವವು ವಿದ್ಯಾರ್ಥಿಗಳ ಭವಿಷ್ಯದ ವೃತ್ತಿಜೀವನಕ್ಕೆ ಹೆಚ್ಚಿನ ಬಲ ತುಂಬುತ್ತದೆ ಎಂದು ಅಭಿಪ್ರಾಯಪಟ್ಟರು.

## ಅರ್ಹ ಫಲಾನುಭವಿಗಳಿಗೆ ಗೃಹಲಕ್ಷ್ಮಿ ಸೌಲಭ್ಯ ತಲುಪಿಸಿ: ಜಿಲ್ಲಾಧಿಕಾರಿ

**ಕಲಬುರಗಿ, ಅ.1:** ರಾಜ್ಯ ಸರ್ಕಾರದ ಮಹತ್ವಾಕಾಂಕ್ಷೆಯ ಗೃಹಲಕ್ಷ್ಮಿ ಯೋಜನೆಯ ಸೌಲಭ್ಯವು ಜಿಲ್ಲೆಯ ಪ್ರತಿಯೊಬ್ಬ ನೈಜ ಹಾಗೂ ಅರ್ಹ ಫಲಾನುಭವಿಗೆ ತಲುಪಿಸಬೇಕು. ತಾಂತ್ರಿಕ ಕಾರಣ, ಆಧಾರ್‌ಲಿಂಕ್ ಸಮಸ್ಯೆ ಅಥವಾ ದಾಖಲೆಗಳ ಸಣ್ಣ ಪುಟ್ಟ ಲೋಪಗಳಿಂದಾಗಿ ಯಾವುದೇ ಅರ್ಹ ಮಹಿಳೆ ಯೋಜನೆಯಿಂದ ವಂಚಿತರಾಗಬಾರದು ಎಂದು ಜಿಲ್ಲಾಧಿಕಾರಿ ಇಕ್ರಮ್ ಶರೀಫ್ ಹೇಳಿದರು.



ನಿಯಮಾವಳಿ ಉಲ್ಲಂಘಿಸಿ ಸೌಲಭ್ಯಪಡೆಯುತ್ತಿರುವ ಅನರ್ಹರನ್ನು ತಡೆದು, ಪಾರದರ್ಶಕತೆ ಕಾಯ್ದುಕೊಳ್ಳಲು ಅಧಿಕಾರಿಗಳು ಮನೆ ಮನೆ ಪರಿಶೀಲನೆ ನಡೆಸಿ ಅರ್ಜಿಗಳ ಮರು ಪರಿಶೀಲನೆಯನ್ನು ಅತ್ಯಂತ ಜವಾಬ್ದಾರಿಯಿಂದ ಪೂರ್ಣಗೊಳಿಸಬೇಕು ಎಂದು ತಿಳಿಸಿದರು.

ಸಭೆಯಲ್ಲಿ ಮಹಿಳಾ ಮತ್ತು ಮಕ್ಕಳ ಅಭಿವೃದ್ಧಿ ಇಲಾಖೆಯ ಅಧಿಕಾಯಿರಿಗಳು ಹಾಗೂ ಜಿಲ್ಲಾ ಪಂಚಾಯತ್ ಮುಖ್ಯ ಕಾರ್ಯನಿರ್ವಾಹಕ ಅಧಿಕಾರಿಗಳ ಉಪಸ್ಥಿತಿಯಲ್ಲಿ ಯೋಜನೆಯ ಪ್ರಸ್ತುತ ಸ್ಥಿತಿಗತಿ ಕುರಿತು ವಿಸ್ತತ ಚರ್ಚೆ ನಡೆಸಲಾಯಿತು.

ಜಿಲ್ಲೆಯಲ್ಲಿ ಪ್ರಸ್ತುತ 5.97 ಲಕ್ಷ ಫಲಾನುಭವಿಗಳು ನೋಂದಾಯಿಸಿಕೊಂಡಿದ್ದಾರೆ. ಕಳೆದ 36 ತಿಂಗಳ ಅವಧಿಯಲ್ಲಿ ಜಿಲ್ಲೆಗೆ ಪ್ರತಿ ತಿಂಗಳು ಸುಮಾರು 120 ಕೋಟಿ ರೂ.ಗಳಂತೆ ಒಟ್ಟು 4,000 ಕೋಟಿಗೂ ಅಧಿಕ ಹಣ ನೇರವಾಗಿ ಫಲಾನುಭವಿಗಳ ಬ್ಯಾಂಕ್ ಖಾತೆಗೆ ತಲುಪಿದೆ. ಜಿಲ್ಲೆಯ 3,237 ಅಂಗನವಾಡಿ ಕೇಂದ್ರಗಳ 1,898 ಕಾರ್ಯಕರ್ತೆಯರು ಈ ಯೋಜನೆಯ ಯಶಸ್ವಿ ಅನುಷ್ಠಾನದಲ್ಲಿ ಭಾಗವಹಿಸುವರು.

ಅಂಗನವಾಡಿ ಕಾರ್ಯಕರ್ತೆಯರು, ಆಶಾ ಸಿಬ್ಬಂದಿ ಹಾಗೂ ಗ್ರಾಮ ಪಂಚಾಯತಿ ಅಭಿವೃದ್ಧಿ ಅಧಿಕಾರಿಗಳ ಜಂಟಿ ತಂಡವು ನಗರ ಹಾಗೂ ಗ್ರಾಮೀಣ ಪ್ರದೇಶಗಳಲ್ಲಿ ಪ್ರತಿಯೊಂದು ಮನೆಗೆ ತೆರಳಿ ಫಲಾನುಭವಿಗಳ ನೈಜತೆಯನ್ನು ತಪಾಸಣೆ ನಡೆಸುವರು. ಪ್ರತಿ ಮರಣ ಹೊಂದಿದ ಪ್ರಕರಣಗಳಲ್ಲಿ ಕುಟುಂಬಕ್ಕೆ ಬೇರೆ ಯಾವುದೇ ಜೀವನೋಪಾಯದ ಆದಾಯವಿಲ್ಲದಿದ್ದರೆ, ಅಂತಹ ಅರ್ಜಿಗಳನ್ನು ನಿಯಮಾನುಸಾರ ವಿಶೇಷವಾಗಿ ಮರು ಪರಿಶೀಲಿಸಿ ಅರ್ಹ ಮಹಿಳೆಯರಿಗೆ ನೆರವು ನೀಡಲು ನಿರ್ಧರಿಸಲಾಯಿತು. ಆಧಾರ್ ಆಧಾರಿತ ಫೇಸ್ ರೆಕಗ್ನಿಷನ್ ಮತ್ತು ಜಿಪಿಎಸ್ ಮ್ಯಾಪಿಂಗ್ ತಂತ್ರಜ್ಞಾನ ಹೊಂದಿರುವ ಮೊಬೈಲ್ ಆ್ಯಪ್ ಬಳಸಿ ಸ್ಥಳದಲ್ಲೇ ದಾಖಲೆಗಳನ್ನು ಪಾರದರ್ಶಕವಾಗಿ ತಪಾಸಣೆ ಮಾಡಲಾಗುತ್ತದೆ. ಕೆಲವು ದಿನಗಳಲ್ಲಿ ಈ ಆ್ಯಪ್ ಪ್ರಾರಂಭಿಸ ಲಾವುದು ಎಂದು ಅಧಿಕಾರಿಗಳು ತಿಳಿಸಿದರು.

ಮಹಿಳಾ ಮತ್ತು ಮಕ್ಕಳ ಅಭಿವೃದ್ಧಿ ಇಲಾಖೆ ಹಾಗೂ ಜಿಲ್ಲಾ ಪಂಚಾಯತ್ ವ್ಯಾಪ್ತಿಯ ಇಲಾಖಾಧಿಕಾರಿಗಳು ಸಮನ್ವಯತೆಯಿಂದ ಕಾರ್ಯನಿರ್ವಹಿಸಿ, ಕಾಲಮಿತಿಯೊಳಗೆ ಮರು ಪರಿಶೀಲನೆ ಪೂರ್ಣಗೊಳಿಸಬೇಕೆಂದು ಜಿಲ್ಲಾಧಿಕಾರಿಗಳು ಆದೇಶಿಸಿದರು.

## ಜನವರಿಯಲ್ಲಿ ಬೀದರ್‌ನಲ್ಲಿ ಅಗ್ನಿವೀರ ಸೇನಾ ಭರ್ತಿ ರ್‍ಯಾಲಿ: ಡಿಸಿ ಶಿಲ್ಪಾ ಶರ್ಮಾ



**ಬೀದರ ನಗರದ ಜಿಲ್ಲಾಧಿಕಾರಿ ಕಚೆರಿ ಸಭಾಂಗಣದಲ್ಲಿ ಅಗ್ನಿವೀರ ಸೇನಾ ಭರ್ತಿ ರ್‍ಯಾಲಿ ನಡೆಯುವ ಹಿನ್ನೆಲೆಯ ಪೂರ್ವ ಭಾವಿ ಸಭೆಯ ಅಧ್ಯಕ್ಷತೆ ವಹಿಸಿ ಜಿಲ್ಲಾಧಿಕಾರಿ ಶಿಲ್ಪಾ ಶರ್ಮಾ ಮಾತನಡಿದರು.**

**ಬೀದರ್, ಅ. 1:** ನಗರದಲ್ಲಿ 2027ರ ಜನವರಿಯಲ್ಲಿ 15 ದಿನಗಳ ಕಾಲ ಅಗ್ನಿವೀರ ಸೇನಾ ಭರ್ತಿ ರ್‍ಯಾಲಿ ನಡೆಯಲಿದೆ. ಬಹುದೊಡ್ಡ ಪ್ರಮಣದಲ್ಲಿ ದೀರ್ಘಾಲದ ವರೆಗೆ ನಡೆಯುವ ಈ ರ್‍ಯಾಲಿಯ ಸದುಪಯೋಗವನ್ನು ಜಿಲ್ಲೆಯ ಅರ್ಹ ಅಭ್ಯರ್ಥಿಗಳು ಪಡೆದು ಕೊಳ್ಳಬೇಕು. ಸೇನಾ ಭರ್ತಿ ರ್‍ಯಾಲಿ ನಮ್ಮ ಮನೆಯ ಬಾಗಿಲಿಗೆ ಬಂದಿರುವಗ ಇದೊಂದು ಒಳ್ಳೆಯ ಅವಕಾಶವಾಗಿದೆ ಎಂದು ಜಿಲ್ಲಾಧಿಕಾರಿ ಶಿಲ್ಪಾ ಶರ್ಮಾ ತಿಳಿಸಿದರು.

ನಗರದ ಜಿಲ್ಲಾಧಿಕಾರಿ ಕಚೇರಿ ಸಭಾಂಗಣದಲ್ಲಿ ಜರುಗಿದ ಪೂರ್ವಭಾವಿ ಸಭೆಯ ಅಧ್ಯಕ್ಷತೆ ವಹಿಸಿ ಮಾತನಾಡಿ, ನಗರದ ನೆಹರೂ ಕ್ರೀಡಾಂಗಣದಲ್ಲಿ ಅಗತ್ಯ ಸಿದ್ಧತೆ ಮಾಡಿಕೊಳ್ಳಲಾಗುವುದು. ಕಲ್ಯಾಣ ಕರ್ನಾಟಕದ ವಿವಿಧ ಜಿಲ್ಲೆಗಳಿಂದ ಸುಮಾರು 12,000 ಅಭ್ಯರ್ಥಿಗಳು ರ್‍ಯಾಲಿಯಲ್ಲಿ ಪಾಲ್ಗೊಳ್ಳಲಿ ದ್ದಾರೆ.

ಸ್ವಚ್ಛತೆ, ಬಸ್ ಸಂಚಾರದ ಅನುಕೂಲತೆಗಳೂ ಸೇರಿದಂತೆ ಅಗತ್ಯ ವೈದ್ಯಕೀಯ ತಂಡ, ಆಂಬುಲೆನ್ಸ್ ಕುಡಿಯುವ ನೀರು, ಭದ್ರತೆ, ಇಂಟರ್‌ನೆಟ್, ವಿದ್ಯುತ್, ಶಾಮಿ ಯಾನ್, ಟೆಂಟ್, ಅಗ್ನಿಶಾಮಕ ವಾಹನ, ಪೊಲೀಸ್ ಬಂದೋಬಸ್ತ್ ಸೇರಿ ಅಗತ್ಯ ವ್ಯವಸ್ಥೆ ಮಾಡಿಕೊಳ್ಳುವಂತೆ ಅಧಿಕಾರಿಗಳಿಗೆ ಸೂಚಿಸಿದರು.

ಬೆಳಗಾವಿಯ ಡೈರೆಕ್ಟರ್ ಆರ್ಮಿ ರಿಕ್ರುಟಿಂಗ್ ಕಚೇರಿಯ ಕರ್ನಲ್ ಜಸವೀರ್ ಸಿಂಗ್ ಎಸ್. ಎಂ. ಮಾತನಾಡಿ, ಪ್ರತಿ ದಿನ 800 ರಿಂದ 1,000 ಅಭ್ಯರ್ಥಿಗಳು ದೈಹಿಕ ಹಾಗೂ ವೈದ್ಯಕೀಯ ಪರೀಕ್ಷೆಗೆ ಒಳಪಡುತ್ತಾರೆ. ಬೀದರ್, ಕಲಬುರಗಿ, ಯಾದಗಿರಿ, ರಾಯಚೂರು, ಕೊಪ್ಪಳ, ಬೆಳಗಾವಿ ಜಿಲ್ಲೆಗಳ 12,100 ಅಭ್ಯರ್ಥಿಗಳು ಈ ರ್‍ಯಾಲಿಯಲ್ಲಿ ಪಾಲ್ಗೊಳ್ಳಲಿದ್ದಾರೆ ಎಂದರು.

## ಹವಾಮಾನ ಬದಲಾವಣೆ–ಶೀತ, ಕೆಮ್ಮು, ಜ್ವರ ಪ್ರಕರಣಗಳು ಹೆಚ್ಚಳ




**ರಾಯಚೂರು, ಅ. 1:** ಹವಾಮಾನ ಬದಲಾವಣೆಯಿಂದಾಗಿ ಕಳೆದ 15 ದಿನಗಳಿಂದ ಜನರಲ್ಲಿ ಶೀತ, ಕೆಮ್ಮು, ಜ್ವರ ಮತ್ತು ಮೈ ಕೈ ನೋವು ಪ್ರಕರಣಗಳು ಹೆಚ್ಚಾಗಿವೆ. ನಗರದ ರಿಮ್ಸ್ ಆಸ್ಪತ್ರೆಯೂ ಸೇರಿದಂತೆ ಜಿಲ್ಲೆಯ ಪ್ರಾಥಮಿಕ ಆರೋಗ್ಯ ಕೇಂದ್ರ, ಸಮುದಾಯ ಆರೋಗ್ಯ ಕೇಂದ್ರದಲ್ಲಿ ಚಿಕಿತ್ಸೆ ಪಡೆಯುವ ಹೊರ ರೋಗಿಗಳ ಸಂಖ್ಯೆ ಮಿತಿಮೀರಿ ಹೆಚ್ಚಾಗಿದೆ.

ಬಿಸಿಲು ಹೆಚ್ಚಳ ಹಾಗೂ ಜೋರಾಗಿ ಬೀಸುವ ಗಾಳಿಯಿಂದಾಗಿ ವೃದ್ಧರು, ಮಹಿಳೆಯರು, ಮಕ್ಕಳು ಸೇರಿದಂತೆ ವಯಸ್ಕರರಿಗೂ ಶೀತ, ನೆಗಡಿ, ಕೆಮ್ಮು ಮತ್ತು ಜ್ವರ ಹರಡುತ್ತಿದೆ. ಸಮುದಾಯ ಆರೋಗ್ಯ ಕೇಂದ್ರ ಸೇರಿದಂತೆ ಖಾಸಗಿ ಆಸ್ಪತ್ರೆಗಳಲ್ಲಿ ರೋಗಿಗಳು ಚಿಕಿತ್ಸೆ ಪಡೆಯುತ್ತಿರುವುದು ಸಾಮಾನ್ಯವಾಗಿ ಕಂಡು ಬಂದಿದೆ.

ಸಣ್ಣ ಮಕ್ಕಳಲ್ಲಿ ತೀವ್ರ ಆರೋಗ್ಯ ಸಮಸ್ಯೆ ಕಾಡುತ್ತಿದ್ದು ಪಟ್ಟಣ ಸೇರಿದಂತೆ ಸುತ್ತಲಿನ ಹಳ್ಳಿಗಳ ಪಾಲಕರು ತಮ್ಮ ಮಕ್ಕಳನ್ನು ಸಿಂಧನೂರು, ಲಿಂಗಸುಗೂರು ಮತ್ತು ರಾಯಚೂರು ಸೇರಿದಂತೆ ವಿವಿಧೆಡೆ ಮಕ್ಕಳ ತಜ್ಞರ ಬಳಿ ಹೆಚ್ಚಿನ ಚಿಕಿತ್ಸೆಗೆ ಕರೆದುಕೊಂಡು ಹೋಗುತ್ತಿದ್ದಾರೆ.

ಸಮುದಾಯ ಆರೋಗ್ಯ ಕೇಂದ್ರಗಳಲ್ಲಿ ಸಾಮಾನ್ಯ ದಿನಗಳಲ್ಲಿ ನಿತ್ಯ ಅಂದಾಜು 200 ಜನ ಹೊರ ರೋಗಿಗಳು ಚಿಕಿತ್ಸೆ ಪಡೆಯುತ್ತಿದ್ದರು. ಕಳೆದ ಒಂದು ವಾರದಿಂದ ನಿತ್ಯ 300 ರಿಂದ 350 ಜನ ಹೊರರೋಗಿಗಳು ಚಿಕಿತ್ಸೆಗೆ ಪಡೆಯುತ್ತಿದ್ದಾರೆ. ಬಹುತೇಕ ನೆಗಡಿ, ಕೆಮ್ಮು, ಜ್ವರ ಪ್ರಕರಣಗಳು ಹೆಚ್ಚಿವೆ ಎಂದು ಆಸ್ಪತ್ರೆ ಮೂಲಗಳು ತಿಳಿಸಿವೆ.

ನಾಲ್ಕು ದಿನಗಳಿಂದ ನೆಗಡಿ, ಕೆಮ್ಮು, ಜ್ವರ ಕಾಣಿಸಿಕೊಂಡಿತ್ತು ಇದೀಗ ಮನೆಯಲ್ಲಿ ನಾಲ್ವರು ಜ್ವರದಿಂದ ಬಳಲುತ್ತಿದ್ದು ಚಿಕಿತ್ಸೆ ಪಡೆಯಲು ಬಂದಿದ್ದಾಗಿ ಅಯ್ಯಮ್ಮ ಮತ್ತು ಪಾರ್ವತಿ ತಿಳಿಸಿದರು.

> **ನೆಗಡಿ, ಕೆಮ್ಮು, ಜ್ವರ ಪ್ರಕರಣಗಳು ಸಾಮಾನ್ಯವಾಗಿದ್ದು, ಆರೋಗ್ಯದ ಬಗ್ಗೆ ನಿರ್ಲಕ್ಷ್ಯ ವಹಿಸದೇ ಆಸ್ಪತ್ರೆಯಲ್ಲಿ ಚಿಕಿತ್ಸೆ ಪಡೆಯಬೇಕು.**
> **–ಡಾ.ಪ್ರವೀಣಕುಮಾರ, ವೈದ್ಯ ಸಮುದಾಯ ಆರೋಗ್ಯ ಕೇಂದ್ರ**

## ಕಲಬುರಗಿಯಲ್ಲಿ ಯುವಜನೋತ್ಸವ: ಎಚ್‌ಐವಿ ಜಾಗೃತಿಗೆ ಜಿಲ್ಲಾಮಟ್ಟದ ಮ್ಯಾರಥಾನ್

**ಕಲಬುರಗಿ, ಅ. 1:** ಎಚ್‌ಐವಿ ಏಡ್ಸ್ ಕುರಿತು ಸಮಾಜದಲ್ಲಿರುವ ತಪ್ಪು ಪರಿಕಲ್ಪನೆಗಳನ್ನು ಹೋಗಲಾಡಿಸಲು ಮತ್ತು ಸರಿಯಾದ ಮಾಹಿತಿಗಳೊಂದಿಗೆ ಜಗೃತಿ ಮೂಡಿಸಲು ಯುವಜನೋತ್ಸವ ಮತ್ತು ಮ್ಯಾರಥಾನ್‌ನಂತಹ ಕ್ರೀಡಾ ಚಟುವಟಿಕೆಗಳು ಹಾಗೂ ವಿದ್ಯಾರ್ಥಿಗಳ ಪಾತ್ರ ಪ್ರಮುಖವಾಗಿದೆ. ಆರೋಗ್ಯಕರ ಜೀವನ ಹಾಗೂ ಎಚ್‌ಐವಿ ಮುಕ್ತ ಸಮಾಜ ನಿರ್ಮಾಣಕ್ಕೆ ಸಾರ್ವಜನಿಕರೆಲ್ಲರೂ ಕೈಜೋಡಿಸಬೇಕು ಎಂದು ವಿಭಾಗೀಯ ಜಂಟಿ ನಿರ್ದೇಶಕರ ಕಚೇರಿ ಸಹ ನಿರ್ದೇಶಕ ಡಾ. ಶಂಕರಪ್ಪ ಮೈಲಾರಿ ಹೇಳಿದರು.



ಯುವಜನೋತ್ಸವ–2026ರ ಅಂಗವಾಗಿ ಎಚ್.ಐ.ವಿ/ಏಡ್ಸ್ ನಿಯಂತ್ರಣಕ್ಕಾಗಿ 5 ಕಿ. ಮೀ ಜಿಲ್ಲಾ ಮಟ್ಟದ ಮ್ಯಾರಥಾನ್ ಓಟದ ಸ್ಪರ್ಧೆಗೆ ನಗರದ ಸರ್ದಾರ್ ವಲ್ಲಭಾಯಿ ಪಟೇಲ್ ವೃತ್ತದಲ್ಲಿ ಹಸಿರು ನಿಶಾನೆ ತೋರುವ ಮೂಲಕ ಚಾಲನೆ ನೀಡಿದರು.

ಓಟದಲ್ಲಿ ಭಾಗವಹಿಸಿದ್ದ ವಿದ್ಯಾರ್ಥಿಗಳು ಸರ್ದಾರ್ ವಲ್ಲಭಾಯಿ ಪಟೇಲ್ ವೃತ್ತದಿಂದ ಆರಂಭಿಸಿ ಜಗತ್ ವೃತ್ತ ಹಾಗೂ ಗೋವಾ ಹೋಟೆಲ್ ಮಾರ್ಗವಾಗಿ ಆನಂದ್ ಹೋಟೆಲ್ ತಲುಪಿ, ಮರಳಿ ಸರ್ದಾರ್ ವಲ್ಲಭಾಯಿ ಪಟೇಲ್ ವೃತ್ತಕ್ಕೆ ತಲುಪುವ ಮೂಲಕ ಮ್ಯಾರಥಾನ್ ಪೂರ್ಣಗೊಳಿಸಿದರು.

ಮ್ಯಾರಥಾನ್ ವಿಜೇತರಾದ ಅಜಯ್ ಹಾಗೂ ಅಂಬಿಕಾ ಪ್ರಥಮ 5,000 ರೂ. ಸಾಗರ ಹಾಗೂ ಸ್ವಪ್ನ ದ್ವಿತೀಯ 3,000 ರೂ. ಮತ್ತು ಇಮ್ರಾನ್ ಹಾಗೂ ಸಂಗೀತ ತೃತೀಯ ಬಹುಮಾನ 2,500 ರೂ. ಹಾಗೂ ಪದಕ, ಪ್ರಮಾಣಪತ್ರ ಪಡೆದರು.

## ಈಶಾನ್ಯ ಶಿಕ್ಷಕರ ಕ್ಷೇತ್ರದ ಚುನಾವಣೆ ಎದುರಿಸಲು ಸಿದ್ಧರಾಗಿ: ರವಿಕುಮಾರ್ ಕರೆ



**ಬೀದರ್, ಅ. 1:** ಈಶಾನ್ಯ ಶಿಕ್ಷಕರ ಮತಕ್ಷೇತ್ರ ರಚನೆಯಾದಾಗಿನಿಂದ ಈ ಕ್ಷೇತ್ರವನ್ನು ಕೇವಲ ಒಂದು ಬಾರಿಯಹೊರತಾಗಿ ಉಳಿದೆಲ್ಲ ಸಮಯದಲ್ಲೂ ಬಿಜೆಪಿ ಅಭ್ಯರ್ಥಿಗಳೇ ಗೆಲ್ಲುತ್ತ ಬಂದಿದ್ದಾರೆ. ಅಂದರೆ 70ರ ದಶಕದಿಂದಲೂ ಬಿಜೆಪಿ ಗೆಲ್ಲುತ್ತ ಬಂದಿದ್ದು, ಈಗಲೂ ಕೂಡ ಇಲ್ಲಿ ಬಿಜೆಪಿಯೇ ಗೆಲ್ಲಬೇಕು. ಅದಕ್ಕಾಗಿ ಇಡೀ ಬಿಜೆಪಿಯ ಕಾರ್ಯಕರ್ತರು ಶಕ್ತಿ ತುಂಬಿ ಕಾರ್ಯ ನಿರ್ವಹಿಸಬೇಕೆಂದು ವಿಧಾನ ಪರಿಷತ್ ಬಿಜೆಪಿ ಮುಖ್ಯ ಸಚೇತಕ ಎನ್.ರವಿಕುಮಾರ ಕರೆ ನೀಡಿದ್ದಾರೆ.

ಬೀದರ ಬಿಜೆಪಿ ಜಿಲ್ಲಾ ಕಚೆರಿಯಲ್ಲಿ ನಡೆದ ಪೂರ್ವಭಾವಿ ಸಿದ್ಧತಾ ಸಭೆಯಲ್ಲಿ ಬಿಜೆಪಿ ರಾಜ್ಯ ಪ್ರಧಾನ ಕಾರ್ಯದರ್ಶಿಯೂ ಆದ ವಿಧಾನ ಪರಿಷತ್ ಸದಸ್ಯ ಹಾಗೂ ಚುನಾವಣೆಯ ಕ್ಷೇತ್ರದ ಪ್ರಭಾರಿ ಎನ್. ರವಿಕುಮಾರ ಅವರು ಮಾತನಾಡಿ, ಈಶಾನ್ಯ ಶಿಕ್ಷಕರ ಮತಕ್ಷೇತ್ರದ ಚುನಾವಣೆ ಎದುರಿಸಲು ಈಗಿನಿಂದಲೇ ಸಿದ್ಧತೆ ಮಾಡಿಕೊಳ್ಳಬೇಕು. ಇದರಲ್ಲಿ ಸಾಮಾನ್ಯ ಮತದಾರರು ಇರುವುದಿಲ್ಲ. ಶಿಕ್ಷಕರು ಮಾತ್ರ ಇರುತ್ತಾರೆ. ಹಾಗಾಗಿ ಶಿಕ್ಷಕರನ್ನು ನಮ್ಮ ಪಕ್ಷದ ಅಭ್ಯರ್ಥಿ ತಲುಪದಿದ್ದರೂ ಕಾರ್ಯಕರ್ತರು ಮತದಾರರವರೆಗೆ ತಲುಪಿ ಪಕ್ಷದ ಸಂದೇಶ ತಲುಪಿಸಬೇಕು. ಅದಕ್ಕಾಗಿ ತಂಡಗಳನ್ನು ರಚಿಸಿ ಕಾರ್ಯ ನಿರ್ವಹಿಸಬೇಕು ಎಂದು ಸಲಹೆ ಮಾಡಿದರು.

ಚುನಾವಣೆಗೆ ಕಾರ್ಯತಂತ್ರ ರೂಪಿಸಿ ಕೆಲಸ ಮಾಡಬೇಕು. ಪಕ್ಷ ಸಂಘಟನೆಯನ್ನು ಮತ್ತಷ್ಟು ಬಲಪಡಿಸಬೇಕು. ಚುನಾವಣಾ ಸಂಬಂಧಿತ ಎಲ್ಲಾ ಕೆಲಸಗಳು ಕಾಲಕ್ಕೆ ಅನುಗುಣವಾಗಿ ನಡೆಯಬೇಕು. ಒಟ್ಟಿನಲ್ಲಿ ಚುನಾವಣಾ ಕೆಲಸ ಯಶಸ್ವಿಯಾಗಿ ನೆರವೇರಿಸಿಕೊಂಡು ಹೋಗಬೇಕು ಎಂದು ಸೂಚನೆ ನೀಡಿದರು.

## ಹಿರಿಯರ ಜೀವನಾನುಭವ ಕಿರಿಯರಿಗೆ ಸದಾ ಮಾರ್ಗದರ್ಶಿ

### ಜಿಲ್ಲಾ ಕಾನೂನು ಸೇವೆಗಳ ಪ್ರಾಧಿಕಾರದ ಸದಸ್ಯ ಕಾರ್ಯದರ್ಶಿ ಅರವಿಂದ ಹಾಗರಗಿ ಅಭಿಮತ

**ವಿಜಯಪುರ, ಅ.1:** ಜೀವನದ ಮುಸ್ಸಂಜೆಯಲ್ಲಿರುವ ಹಿರಿಯ ನಾಗರಿಕರು ಸಮಾಜದ ಅಮೂಲ್ಯ ಆಸ್ತಿ. ಅವರ ಜೀವನಾನುಭವ, ಜ್ಞಾನ ಮತ್ತು ಮಾರ್ಗದರ್ಶನ ಸದೃಢ ಸಮಾಜ ನಿರ್ಮಾಣಕ್ಕೆ ಅಗತ್ಯವಾಗಿದೆ ಎಂದು ಜಿಲ್ಲಾ ಕಾನೂನು ಸೇವೆಗಳ ಪ್ರಾಧಿಕಾರದ ಸದಸ್ಯ ಕಾರ್ಯದರ್ಶಿ ಅರವಿಂದ ಹಾಗರಗಿ ಹೇಳಿದರು.

ಜಿಲ್ಲಾ ಪಂಚಾಯಿತಿ ಕಚೇರಿಯ ಸಭಾಂಗಣದಲ್ಲಿ ಗುರುವಾರ ದೀರ್ಘಾಯುಷ್ಯದ ಯುಗ, ಸುದೀರ್ಘ ಜೀವನಕ್ಕಾಗಿ ಜೀವನ ಕ್ರಮಗಳ ಮರುಚಿಂತನೆ ಧ್ಯೇಯ ವಾಕ್ಯದಡಿ ಜಿಲ್ಲಾಡಳಿತ, ಜಿಲ್ಲಾ ಪಂಚಾಯಿತಿ, ಜಿಲ್ಲಾ ಕಾನೂನು ಸೇವೆಗಳ ಪ್ರಾಧಿಕಾರ, ಜಿಲ್ಲಾ ಆರೋಗ್ಯ ಮತ್ತು ಕುಟುಂಬ ಕಲ್ಯಾಣ ಇಲಾಖೆ, ಮಹಿಳಾ ಮತ್ತು ಮಕ್ಕಳ ಅಭಿವೃದ್ಧಿ ಇಲಾಖೆ, ವಿಕಲಚೇತನರ ಹಾಗೂ ಹಿರಿಯ ನಾಗರಿಕರ ಸಬಲೀಕರಣ ಇಲಾಖೆ, ನಿವೃತ್ತ ನೌಕರರ ಸಂಘ ಹಾಗೂ ಹಿರಿಯ ನಾಗರಿಕರ ಕ್ಷೇತ್ರದಲ್ಲಿ ಕಾರ್ಯನಿರ್ವಹಿಸುತ್ತಿರುವ ಸ್ಥಳೀಯ ಸಂಘ–ಸಂಸ್ಥೆಗಳ ಸಹಯೋಗದಲ್ಲಿ ಆಯೋಜಿಸಿದ್ದ ವಿಶ್ವ ಹಿರಿಯ ನಾಗರಿಕರ ದಿನಾಚರಣೆ ಕಾರ್ಯಕ್ರಮ ಉದ್ಘಾಟಿಸಿ ಅವರು ಮಾತನಾಡಿದರು.

ಯುವ ಜನಾಂಗ ಹಿರಿಯರ ನಾಗರಿಕರ ಅನುಭವ ಹಾಗೂ ಅವರ ಜೀವನದ ಮೌಲ್ಯಗಳನ್ನು ಜೀವನದಲ್ಲಿ ಮೈಗೂಡಿಸಿಕೊಳ್ಳುವುದರೊಂದಿಗೆ ಅವರನ್ನು ಗೌರವದಿಂದ ಕಾಣುವ ಮನೋಭಾವ ಬೆಳೆಸಿಕೊಳ್ಳಬೇಕು ಎಂದು ಕಿವಿಮಾತು ಹೇಳಿದ ಅವರು, ಹಿರಿಯರ ನಾಗರಿಕರಬೇಕು–ಬೇಡಿಕೆಗಳ ಬಗ್ಗೆ ಕಾನೂನು ಸೇವೆಗಳ ಪ್ರಾಧಿಕಾರ ಸದಾ ಹಿರಿಯ ರೊಂದಿಗೆ ಇರುತ್ತದೆ ಎಂದು ಅರವಿಂದ ಹಾಗರಗಿ ಭರವಸೆ ನೀಡಿದರು. ಹಿರಿಯರು ತಮ್ಮ ಜೀವನದಲ್ಲಿ ಹಲವು ಏಳು–ಬೀಳುಗಳನ್ನು ಕಂಡು ಅನುಭವ ಸಂಪಾದಿಸಿರುತ್ತಾರೆ. ಅವರ ಜೀವನಾನುಭವಗಳು ಕಿರಿಯರಿಗೆ ಸದಾ ಮಾರ್ಗದರ್ಶಿಯಾಗಿವೆ. ಜೀವನದಲ್ಲಿ ಎದುರಾಗುವ ಸವಾಲುಗಳನ್ನು ಎದುರಿಸಲು ಸಹಕಾರಿಯಾಗುತ್ತವೆ. ಹಿರಿಯರಿಗೆ ಕುಟುಂಬದಲ್ಲಿ ಪ್ರೀತಿ, ಗೌರವ ಮತ್ತು ಸೂಕ್ತ ಸ್ಥಾನಮಾನ ನೀಡಬೇಕು. ಅವರ ಭಾವನೆಗಳನ್ನು ಅರ್ಥೈಸಿಕೊಂಡು, ಅವರ ಅಗತ್ಯಗಳಿಗೆ ಸ್ಪಂದಿಸುವುದು ಪ್ರತಿಯೊಬ್ಬರ ಜವಾಬ್ದಾರಿಯಾಗಿದೆ ಎಂದರು.




ನಿವೃತ್ತ ನೌಕರರ ಸಂಘದ ಅಧ್ಯಕ್ಷರಾದ ಎಸ್.ಪಿ.ಬಿರಾದಾರ ಕಡ್ಲೇವಾಡ ಅಧ್ಯಕ್ಷತೆ ವಹಿಸಿ, ಹಿರಿಯ ನಾಗರಿಕರಿಗಾಗಿ ಸರಕಾರ ಹಲವು ಸೌಲಭ್ಯಗಳನ್ನು ಕಲ್ಪಿಸಿದೆ. ಆ ಸೌಲಭ್ಯ ಗಳನ್ನು ಹಿರಿಯರು ನಾಗರಿಕರು ಸದ್ಬಳಕೆ ಮಾಡಿಕೊಳ್ಳಬೇಕು ಎಂದರು.

ಜಿಲ್ಲಾ ಪಂಚಾಯಿತಿಯ ಮುಖ್ಯ ಯೋಜನಾಧಿಕಾರಿ ಸಿ.ಬಿ. ಕುಂಬಾರ ಮಾತನಾಡಿ, ಅನುಭವದ ಮಾತುಗಳನ್ನು ಆಲಿಸುವುದರಿಂದ ಜೀವನಕ್ಕೆ ಅಮೂಲ್ಯ ಪಾಠಗಳು ದೊರೆಯುತ್ತವೆ. ಹಿರಿಯರ ಸಲಹೆ ಮತ್ತು ಮಾರ್ಗದರ್ಶನ ಕುಟುಂಬದ ಬೆಳವಣಿಗೆಗೆ ಮಾತ್ರವಲ್ಲದೆ, ಸಮಾಜದ ಪ್ರಗತಿಗೂ ಸಹಕಾರಿಯಾಗಿದೆ ಎಂದರು.

ಮಹಿಳಾ ಮತ್ತು ಮಕ್ಕಳ ಅಭಿವೃದ್ಧಿ ಇಲಾಖೆಯ ಉಪನಿರ್ದೇಶಕ ಸಂತೋಷ ಎಚ್. ಮಾತನಾಡಿ, ಹಿರಿಯರ ಜೀವನಾನುಭವ ಮುಂದಿನ ಪೀಳಿಗೆಗೆ ದಾರಿದೀಪವಾಗಿದೆ. ವಯಸ್ಸಾದಂತೆ ದೈಹಿಕ ಆರೋಗ್ಯದಲ್ಲಿ ಬದಲಾವಣೆಗಳು ಕಾಣಿಸಿಕೊಳ್ಳುವುದರ ಜತೆಗೆ ವಿವಿಧ ಆರೋಗ್ಯ ಸಮಸ್ಯೆಗಳು ಎದುರಾಗಬಹುದು. ಇಂತಹ ಸಂದರ್ಭದಲ್ಲಿ ಹಿರಿಯರಿಗೆ ಅಗತ್ಯ ವೈದ್ಯಕೀಯ ಆರೈಕೆ, ಮಾನಸಿಕ ಬೆಂಬಲ ಮತ್ತು ಕುಟುಂಬದ ಪ್ರೀತಿ ದೊರೆಯಬೇಕು ಎಂದು ಹೇಳಿದರು.

ಯುವ ಸಬಲೀಕರಣ ಮತ್ತು ಕ್ರೀಡಾ ಇಲಾಖೆಯ ಸಹಾಯಕ ನಿರ್ದೇಶಕರಾದ ರಾಜಶೇಖರ ದೈವಾಡಿ , ಹಿರಿಯರು ಜನರೊಂದಿಗೆ ಬೆರೆಯುವುದರಿಂದ ಹಲವಾರು ಸಮಸ್ಯೆಗಳು ಮತ್ತು ಮಾನಸಿಕ ಒತ್ತಡದಿಂದ ನೆಮ್ಮದಿ ಸಿಗುತ್ತದೆ ಎಂದ ಅವರು, ಜೊತೆಗೆ ತಮ್ಮನ್ನು ತಾವು ಕುಟುಂಬ ಮತ್ತು ಸಮಾಜದಿಂದ ದೂರವಿರಿಸಿಕೊಳ್ಳದೆ, ಎಲ್ಲರೊಂದಿಗೆ ಬೆರೆಯುವ ಹವ್ಯಾಸ ಬೆಳೆಸಿಕೊಳ್ಳಬೇಕು. ವಿಶೇಷವಾಗಿ ಚಿಕ್ಕ ಮಕ್ಕಳೊಂದಿಗೆ ಸಮಯ ಕಳೆಯಬೇಕು ಎಂದರು.

ಬಿ.ಎಲ್.ಡಿ.ಇ. ಸಂಸ್ಥೆಯ ಹಿರಿಯ ನಾಗರಿಕರ ಸೇವಾ ವಿಭಾಗದ ವೈದ್ಯರಾದ ಡಾ. ಅಂಬ್ಲಿಗಿ ಮಾತನಾಡಿ, ಹಿರಿಯ ನಾಗರಿಕರಿಗೆ ಅಗತ್ಯವಿರುವ ವೈದ್ಯಕೀಯ ಸೇವೆಗಳು ಹಾಗೂ ಆರೋಗ್ಯ ಸಂಬಂಧಿತ ನೆರವು ಒದಗಿಸುವ ನಿಟ್ಟಿನಲ್ಲಿ ಬಿ.ಎಲ್.ಡಿ.ಇ. ವಿಶ್ವವಿದ್ಯಾಲಯದ ವತಿಯಿಂದ

## ನನ್ನ ಕುಟುಂಬದ ವಿರುದ್ಧ ರಾಜಕೀಯ ಪಿತೂರಿ: ಮಾಜಿ ಶಾಸಕ ಎಂ.ಎಸ್.ಸೋಮಲಿಂಗಪ್ಪ ಆರೋಪ

**ಬಳ್ಳಾರಿ,ಅ.01:** ಜಮೀನು ವಿವಾದಕ್ಕೆ ಸಂಬಂಧಿಸಿದಂತೆ ತಮ್ಮ ಹಾಗೂ ತಮ್ಮ ಮಕ್ಕಳ ಹೆಸರನ್ನು ದುರ್ಬಳಕೆ ಮಾಡಿಕೊಂಡು ರಾಜಕೀಯ ಪಿತೂರಿ ನಡೆಸಲಾಗುತ್ತಿದೆ ಎಂದು ಸಿರುಗುಪ್ಪ ಕ್ಷೇತ್ರದ ಮಾಜಿ ಶಾಸಕ ಎಂ.ಎಸ್. ಸೋಮಲಿಂಗಪ್ಪ ಆರೋಪಿಸಿದ್ದಾರೆ.



ಕಚೇರಿ ನಗರದ ಜಿಲ್ಲಾಧಿಕಾರಿ ಆವರಣದಲ್ಲಿರುವ ಪತ್ರಿಕಾ ಭವನದಲ್ಲಿ ಗುರುವಾರ ನಡೆದ ಸುದ್ದಿಗೋಷ್ಠಿಯಲ್ಲಿ ಮಾತನಾಡಿದ ಅವರು, ತಮ್ಮ ಪುತ್ರ ವೆಂಕಟಪ್ಪ ನಾಯಕ ಅವರು 2010ರ ಮೇ 4ರಂದು ಎನ್. ಮಂಜುಳಾ ಅವರಿಂದ ಸರ್ವೆ ನಂ.8/3ರಲ್ಲಿನ 3 ಎಕರೆ ಜಮೀನಿನ ಪೈಕಿ 75 ಸೆಂಟ್ ಜಮೀನನ್ನು ನೋಂದಾಯಿತ ಮಾರಾಟ ಪತ್ರದ ಮೂಲಕ ಖರೀದಿಸಿದ್ದು, ಅಂದಿನಿಂದಲೂ ಆ ಜಮೀನು ತಮ್ಮ ಪುತ್ರನ ಸ್ವಾಧೀನದಲ್ಲಿದೆ ಎಂದರು.

2022ರಲ್ಲಿ ಮಂಜುಳಾ ಅವರು ಜಮೀನಿನ ಸ್ವಾಧೀನ ತಮ್ಮಲ್ಲಿದೆ ಎಂದು ಹೇಳಿ ಸಿರುಗುಪ್ಪದ ಕಿರಿಯ ಶ್ರೇಣಿ ಸಿವಿಲ್ ನ್ಯಾಯಾಲಯದಲ್ಲಿ ಓಎಸ್ ನಂಬರ್ 13/2022 ಅಸಲು ದಾವೆ ದಾಖಲಿಸಿದ್ದರು. ಈ ಪ್ರಕರಣದಲ್ಲಿ ತಡೆಯಾಜ್ಞೆ ನೀಡುವಂತೆ ಸಲ್ಲಿಸಿದ್ದ ಅರ್ಜಿಯನ್ನು ನ್ಯಾಯಾಲಯವು ದಾಖಲೆಗಳನ್ನು ಪರಿಶೀಲಿಸಿದ ಬಳಿಕ ವಜಾಗೊಳಿಸಿದೆ. ಈ ಆದೇಶವನ್ನು ಪ್ರಶ್ನಿಸಿ ಮಂಜುಳಾ ಅವರು ಮೇಲ್ಮನವಿ ಸಲ್ಲಿಸಿದ್ದು, ಪ್ರಕರಣ ನ್ಯಾಯಾಲಯದಲ್ಲಿ ವಿಚಾರಣೆಯಲ್ಲಿದೆ ಎಂದು ಸೋಮಲಿಂಗಪ್ಪ ತಿಳಿಸಿದರು.

ನ್ಯಾಯಾಲಯದ ವಿಚಾರಣೆ ಮುಂದುವರಿದಿರುವ ಸಂದರ್ಭದಲ್ಲೇ ತಮ್ಮ ಪುತ್ರನ ಜಮೀನಿನಲ್ಲಿ ಟ್ರ್ಯಾಕ್ಟರ್ ಓಡಿಸಿದ ದೃಶ್ಯಗಳನ್ನು ಮೊಬೈಲ್‌ನಲ್ಲಿ ಸೆರೆಹಿಡಿದು ಪೊಲೀಸ್ ಠಾಣೆಯಲ್ಲಿ ದೂರು ನೀಡಲಾಗಿದೆ. ಇದಕ್ಕೆ ಪ್ರತಿಯಾಗಿ ತಮ್ಮ ಪುತ್ರನ ಕಡೆಯಿಂದಲೂ ದೂರು ನೀಡಲಾಗಿದೆ ಎಂದು ಅವರು ಹೇಳಿದರು.

